ಸಂಪುಟ: 05 ಸಂಚಿಕೆ: 302 ಪುಟಗಳು: 08 ಗುರುವಾರ 15 ಜನವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ಇ.ವಿ ಕ್ರಾಂತಿಗೆ ಬೆಸ್ಕಾಂನಿಂದ ದೇಶದಲ್ಲೇ ಮೊದಲ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್

• **ಉದಯವಾಹಿನಿ, ಬೆಂಗಳೂರು**

ರಾಜ್ಯದಲ್ಲಿ ಹಸಿರು ಚಲನಶೀಲತೆ ಉಪಕ್ರಮಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ, ಬೆಸ್ಕಾಂ ದೇಶದಲ್ಲೇ ಮೊದಲ ಬಾರಿಗೆ ವಿದ್ಯುತ್‌ಚಾಲಿತ (ಇ.ವಿ) ವಾಹನಗಳ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆ ಹಾಗೂ ತ್ವರಿತ ವಿದ್ಯುತ್ ಸಂಪರ್ಕಕ್ಕೆ ಏಕಗವಾಕ್ಷಿ ವ್ಯವಸ್ಥೆಯನ್ನು ಹೊಂದಿರುವ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ಸೇವೆ ಪರಿಚಯಿಸಿದೆ. ಈ ಡಿಜಿಟಲ್ ಸೇವೆಯು ರಾಜ್ಯದಲ್ಲಿ ಇ.ವಿ ಮೂಲಸೌಕರ್ಯದ ಅಭಿವೃದ್ಧಿಗೆ ವೇಗ ನೀಡುವುದರ ಜತೆಗೆ ಸ್ವಚ್ಛ ಚಲನಶೀಲತೆಯನ್ನು ಉತ್ತೇಜಿಸುವ ಗುರಿ ಹೊಂದಿದೆ.

ಖಾಸಗಿ ಭೂಮಾಲೀಕರು, ಸರಕಾರಿ ಇಲಾಖೆಗಳು, ಖಾಸಗಿ ಸಂಸ್ಥೆಗಳು ಹಾಗೂ ಚಾರ್ಜಿಂಗ್ ಸ್ಟೇಷನ್ ಆಪರೇಟರ್‌ಗಳು ರಾಜ್ಯದೆಲ್ಲೆಡೆ ಇ.ವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಲು ಮತ್ತು ಬೆಸ್ಕಾಂನಿಂದ ತ್ವರಿತವಾಗಿ ವಿದ್ಯುತ್ ಸಂಪರ್ಕ ಪಡೆಯಲು ಏಕಗವಾಕ್ಷಿ ರೀತಿಯ ವ್ಯವಸ್ಥೆಯನ್ನು ಪೋರ್ಟಲ್‌ನಲ್ಲಿ ಕಲ್ಪಿಸಲಾಗಿದೆ.

ನಗರ ಪ್ರದೇಶದಲ್ಲಿ ಹಾಗೂ ಹೆದ್ದಾರಿಗಳ ಬಳಿ ಸಾರ್ವಜನಿಕ ಇ.ವಿ ಮೂಲಸೌಕರ್ಯಗಳನ್ನು ಅತ್ಯಂತ ತ್ವರಿತವಾಗಿ ಸ್ಥಾಪಿಸಲು ಭೂಮಾಲೀಕರು ಮತ್ತು ಚಾರ್ಜಿಂಗ್ ಆಪರೇಟರ್‌ಗಳಿಗೆ ಈ ಪೋರ್ಟಲ್ ನೆರವಾಗಲಿದೆ. ಇ.ವಿ ಹಬ್‌ಗಳ ನಿರ್ಮಾಣವನ್ನು ಉತ್ತೇಜಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆದ್ದಾರಿ ಇ.ವಿ ವಿಭಾಗವು (ಎನ್‌ಎಚ್‌ಇವಿ) ಈ ಉಪಕ್ರಮದಲ್ಲಿ ಬೆಸ್ಕಾಂ ಜತೆ ಕೈಜೋಡಿಸಿದೆ.



ರಾಷ್ಟ್ರೀಯ ಹೆದ್ದಾರಿಗಳಲ್ಲಿ ಚಾರ್ಜಿಂಗ್ ಹಬ್

ಈ ಪೋರ್ಟಲ್ ಮೂಲಕ ಭೂಮಾಲೀಕರು ತಮ್ಮ ಭೂಮಿಯನ್ನು ಇ.ವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಆದಾಯ ಹಂಚಿಕೆ ಆಧಾರದಲ್ಲಿ ಬಾಡಿಗೆಗೆ ಅಥವಾ ಭೋಗ್ಯಕ್ಕೆ ಕೊಡಲು ಅವಕಾಶವಿದೆ. ಅದೇ ರೀತಿ ವಿತರಕರು ಮತ್ತು ಚಾರ್ಜ್ ಪಾಯಿಂಟ್ ಆಪರೇಟರ್‌ಗಳು ಇ.ವಿ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ, ಕಾರ್ಯಾಚರಣೆ ಹಾಗೂ ನಿರ್ವಹಣೆಯನ್ನು ವಹಿಸಿಕೊಳ್ಳಬಹುದು. ಏಕಗವಾಕ್ಷಿ ಡಿಜಿಟಲ್ ಡ್ಯಾಶ್ ಬೋರ್ಡ್ ಮೂಲಕ ವಿದ್ಯುತ್ ಸಂಪರ್ಕವನ್ನು ಸಮಯಕ್ಕೆ ಸರಿಯಾಗಿ ಒದಗಿಸಿ, ವಿಳಂಬ ತಪ್ಪಿಸುವುದರ ಜತೆಗೆ ಎಲ್ಲಾ ಹಿತಾಸಕ್ತಿದಾರರ ನಡುವೆ ಸಮನ್ವಯ ಸಾಧಿಸಲು ಇದು ನೆರವಾಗಲಿದೆ.

**ಮಹತ್ವದ ಮೈಲಿಗಲ್ಲು:** ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ರಾಜ್ಯದಲ್ಲಿ ಬಲಿಷ್ಠ ಮತ್ತು ಭವಿಷ್ಯದ ಇ.ವಿ ಪರಿಸರ ವ್ಯವಸ್ಥೆ ನಿರ್ಮಾಣದತ್ತ ಮಹತ್ವದ ಹೆಜ್ಜೆಯಾಗಿದೆ. ಭೂ ಸಂಗ್ರಾಹಕ ಹಾಗೂ ವಿದ್ಯುತ್ ಪೂರೈಕೆ ಪ್ರಕ್ರಿಯೆಯನ್ನು ಸರಳಗೊಳಿಸುವ ಮೂಲಕ ಈ ಉಪಕ್ರಮವು ರಾಜ್ಯದ ಬದಲಾವಣೆಗೆ ಸಹಕಾರಿಯಾಗಿರುವ ಕಡಿಮೆ ಕಾರ್ಬನ್ ಆರ್ಥಿಕತೆಯನ್ನು ಸಾಧಿಸಲಿದೆ ಹಾಗೂ ಸ್ಥಳೀಯ ಆರ್ಥಿಕ ಅವಕಾಶಗಳನ್ನು ಸೃಷ್ಟಿಸಿ, ಗ್ರಾಹಕರಿಗೆ ಇ.ವಿ ಬಳಕೆಯನ್ನು ಉತ್ತೇಜಿಸಲಿದೆ.

''ಈ ಪೋರ್ಟಲ್ ಭವಿಷ್ಯದ ಇ.ವಿ ಮೂಲಸೌಕರ್ಯ ನಿರ್ಮಾಣದತ್ತ ಮಹತ್ವದ ಮೈಲಿಗಲ್ಲಾಗಿದೆ. ಇದು ಸ್ವಚ್ಛ ಚಲನಶೀಲತೆಯನ್ನು ಉತ್ತೇಜಿಸುವುದರ ಜತೆಗೆ ಸಾರ್ವಜನಿಕ-ಖಾಸಗಿ ಸಹಭಾಗಿತ್ವವನ್ನು ಬಲಪಡಿಸಿ, ಸ್ಥಳೀಯ ಸಮುದಾಯಗಳಿಗೆ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುತ್ತದೆ. ಕರ್ನಾಟಕವನ್ನು ಕಡಿಮೆ ಕಾರ್ಬನ್ ಆರ್ಥಿಕತೆಯತ್ತ ಮುನ್ನಡೆಸಲು ಸಹಕಾರಿಯಾಗಿದೆ,'' ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ.ಎನ್. ಶಿವಶಂಕರ ತಿಳಿಸಿದ್ದಾರೆ.

### ಪೋರ್ಟಲ್‌ನ ಉದ್ದೇಶಗಳು

- **ಇ.ವಿ ಮೂಲಸೌಕರ್ಯ ಅಭಿವೃದ್ಧಿ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಭೂಮಿಯನ್ನು ಬಾಡಿಗೆಗೆ ನೀಡುವ ಅವಕಾಶಗಳಿಗೆ ಉತ್ತೇಜನ.**
- **ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಕೆ ಹಾಗೂ ಅನುಮೋದನಾ ಪ್ರಕ್ರಿಯೆ ಪ್ರಗತಿ ಪರಿಶೀಲನೆ.**
- **ಭೂಮಾಲೀಕರು ಸುಲಭವಾಗಿ ನೋಂದಣಿ ಮಾಡಿಕೊಂಡು ಇ.ವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳಿಗೆ ಭೂಮಿ ನೀಡುವ ವ್ಯವಸ್ಥೆ.**
- **ವೆಂಡರ್ಸ್ ಹಾಗೂ ಚಾರ್ಜ್ ಸ್ಟೇಷನ್ ಆಪರೇಟರ್‌ಗಳು ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಿ, ಕಾರ್ಯಾಚರಣೆ ನಿರ್ವಹಿಸಬಹುದು.**
- **ಬೆಸ್ಕಾಂ, ಪೋರ್ಟಲ್ ಮೂಲಕ ಚಾರ್ಜ್ ಸ್ಟೇಷನ್ ಆಪರೇಟರ್‌ಗಳೊಂದಿಗೆ ಸಂಪರ್ಕಿಸಿ ಇ.ವಿ ಚಾರ್ಜಿಂಗ್ ಅಥವಾ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಸಹಕಾರ ನೀಡಲಿದೆ.**
- **ಯಾವುದೇ ವಿಳಂಬವಿಲ್ಲದೆ ವಿದ್ಯುತ್ ಸಂಪರ್ಕ ದೊರೆಯಲಿದೆ. ಅರ್ಜಿದಾರರು ಪೋರ್ಟಲ್ ಮೂಲಕ ಅರ್ಜಿಯ ಸ್ಥಿತಿಗತಿ ಪರಿಶೀಲಿಸಬಹುದು.**

ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್ ಸೇವೆಯು ಭೂಮಿ ನೀಡಿಕೆ, ಇ.ವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಒಂದೇ ವೇದಿಕೆಯಾಗಿ ಕಾರ್ಯ ನಿರ್ವಹಿಸುತ್ತದೆ.

ಆದಾಯ ಹಂಚಿಕೆ ಮಾದರಿಯಲ್ಲಿ ಭೂಮಿಯನ್ನು ಬಾಡಿಗೆಗೆ ನೀಡಲು ಇದು ಅವಕಾಶ ಕಲ್ಪಿಸುತ್ತದೆ ಎಂದು ಕೆ.ಜೆ. ಜಾರ್ಜ್ ಹೇಳಿದ್ದಾರೆ.

ಕಬ್ಬಿನ ಸಿಹಿ, ಎಳ್ಳು ಬೆಲ್ಲದ ರುಚಿ, ಸಿಹಿ ಗೆಣಸು, ಕಡಲೆಯ ಸಾರದಂಥ ಜೀವನ ನಿಮ್ಮದಾಗಲಿ, ಸಂಕ್ರಾಂತಿಯ ಸಮೃದ್ಧ ಬೆಳೆಯಂತೆ ನಿಮ್ಮ ಬಾಳು ಸಹ ಸಮೃದ್ಧವಾಗಿರಲಿ.

ನಾಡಿನ ಸಮಸ್ತ ಜನತೆಗೆ
ಮಕರ ಸಂಕ್ರಾಂತಿ
ಹಬ್ಬದ ಹಾರ್ದಿಕ
ಶುಭಾಶಯಗಳು

ಟಿ. ಹೊಂಬೇಗೌಡರು
ಸಂಪಾದಕರು

## ಮಳೆಯ ಭೀತಿಯ ನಡುವೆ ಶಬರಿ ಮಲೆಯಲ್ಲಿ ಮಕರ ಜ್ಯೋತಿ ದರ್ಶನ

• **ಉದಯವಾಹಿನಿ, ಮೈಸೂರು**

ಪ್ರತಿ ವರ್ಷ ಲಕ್ಷಾಂತರ ಭಕ್ತರು ಶಬರಿಮಲೆಯ ಪೊನ್ನಂಬಲಮೇಡು ಬೆಟ್ಟದಲ್ಲಿ ಕಾಣುವ ಪವಿತ್ರವಾದ ಮಕರ ಜ್ಯೋತಿಯನ್ನು ವೀಕ್ಷಿಸಲು ಕಾಯುತ್ತಿರುತ್ತಾರೆ. ಮಳೆಯ ಆತಂಕದ ನಡುವೆಯೇ ಮಕರ ಜ್ಯೋತಿಯ ದರ್ಶನಕ್ಕಾಗಿ ಭಕ್ತರು ಕಾಯುತ್ತಿದ್ದರು.

ಕೊನೆಗೂ ಸಂಜೆ 6.45ಕ್ಕೆ ಶಬರಿಮಲೆಯಿಂದ 8 ಕಿ.ಮೀ. ದೂರದಲ್ಲಿರುವ ಪೊನ್ನಂಬಲಮೇಡು ಬೆಟ್ಟದಲ್ಲಿ ಮಕರ ಜ್ಯೋತಿಯ ದರ್ಶನವಾಗಿದೆ. ಅಯ್ಯಪ್ಪ ಸ್ವಾಮಿ ಭಕ್ತರು ಕೈಜೋಡಿಸಿ, ಸ್ವಾಮಿ ಶರಣಂ ಅಯ್ಯಪ್ಪ ಎಂದು ಪಠಿಸುತ್ತಾ ಮಕರ ಜ್ಯೋತಿಯನ್ನು ವೀಕ್ಷಿಸಿದರು. ಈ ವೇಳೆ ನಕ್ಷತ್ರವು ಆಕಾಶದಲ್ಲಿ ಬೆಳಗಿ ಭಕ್ತರಿಗೆ ಆಶೀರ್ವಾದವನ್ನು ತಂದಿತು. ಆಕಾಶದಲ್ಲಿ ಬೇರೆ ಯಾವುದೇ ನಕ್ಷತ್ರಗಳಿಲ್ಲದೆ ಉತ್ರಮ ನಕ್ಷತ್ರದ ದರ್ಶನವನ್ನು ಪಡೆದ ಭಕ್ತರು ಧನ್ಯರಾದರು.

## ದೇಶಾದ್ಯಂತ 9 ಹೊಸ ಅಮೃತ್ ಭಾರತ್ ರೈಲು ಆರಂಭ - ರೈಲ್ವೆ ಸಚಿವ

• **ಉದಯವಾಹಿನಿ, ಬೆಂಗಳೂರು**

ಭಾರತೀಯ ರೈಲ್ವೇ ಇಲಾಖೆಯು ಶೀಘ್ರದಲ್ಲೇ ಒಂಬತ್ತು ಹೊಸ 'ಅಮೃತ್ ಭಾರತ್ ಎಕ್ಸ್‌ಪ್ರೆಸ್' ರೈಲುಗಳನ್ನು ದೇಶಕ್ಕೆ ಸಮರ್ಪಿಸಲು ಸಜ್ಜಾಗಿದೆ. ಈ ಪೈಕಿ ಒಂದು ರೈಲು ಕರ್ನಾಟಕಕ್ಕೆ ಸಂಬಂಧಿಸಿದೆ. ಈ ಹೊಸ ರೈಲುಗಳು ಸಂಪೂರ್ಣವಾಗಿ ನಾನ್ -ಎಸಿ ಆಗಿದ್ದು, ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ರಾಜ್ಯಗಳಿಂದ ಹೊರಟು, ಬಿಹಾರ, ಉತ್ತರ ಪ್ರದೇಶ, ಒಡಿಶಾ, ಆಂಧ್ರಪ್ರದೇಶ, ತಮಿಳುನಾಡು, ಮಹಾರಾಷ್ಟ್ರ ಮತ್ತು ಕರ್ನಾಟಕ ಸೇರಿದಂತೆ ಏಳು ಇತರ ರಾಜ್ಯಗಳನ್ನು ಸಂಪರ್ಕಿಸಲಿವೆ. ಈ ಬಗ್ಗೆ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಟ್ವೀಟ್ ಮಾಡಿದ್ದು, 9 ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಶೀಘ್ರದಲ್ಲೇ ಚಾಲನೆ ನೀಡಲಾಗುವುದು ಎಂದು ತಿಳಿಸಿದ್ದಾರೆ. ಈ ಟ್ವೀಟ್‌ನ ಉಲ್ಲೇಖಿಸಿರುವ ಪ್ರಧಾನಿ ಮೋದಿ, ಹೊಸ ಅಮೃತ್ ಭಾರತ್ ರೈಲುಗಳು ಪ್ರಯಾಣಿಕರ ಸೌಕರ್ಯ ಮತ್ತು ಸಂಪರ್ಕವನ್ನು ಸುಧಾರಿಸುವಲ್ಲಿ ಮಹತ್ವದ ಹೆಜ್ಜೆಯಾಗಲಿವೆ. ವಾಣಿಜ್ಯ ಮತ್ತು ಪ್ರವಾಸೋದ್ಯಮವನ್ನು ಹೆಚ್ಚಿಸಲಿದೆ ಎಂದು ತಿಳಿಸಿದ್ದಾರೆ.

## ಜ.22ರಿಂದ 31ರವರೆಗೆ ವಿಧಾನಮಂಡಲದ ಜಂಟಿ ಅಧಿವೇಶನ

• **ಉದಯವಾಹಿನಿ, ಬೆಂಗಳೂರು**

ಮನರೇಗಾ ಯೋಜನೆಗೆ ಬದಲಾಗಿ ಹೊಸದಾಗಿ ಜಾರಿಯಾಗಿರುವ ವಿಬಿ ಜಿ ರಾಮ್ ಜಿ ಯೋಜನೆಯನ್ನು ವಿರೋಧಿಸಿರುವ ರಾಜ್ಯ ಸರ್ಕಾರವು ಕೇಂದ್ರ ಮೇಲೆ ಒತ್ತಡ ಹೇರಲು ಉಭಯ ಸದನಗಳ ಜಂಟಿ ಅಧಿವೇಶನ ನಡೆಸಲು ತೀರ್ಮಾನಿಸಿದೆ.

ಜ.22ರಿಂದ 31ರವರೆಗೆ ಜಂಟಿ ಅಧಿವೇಶನ ನಡೆಯಲಿದೆ. ವಿಧಾನಸೌಧದಲ್ಲಿ ಬುಧವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

**ಸಂಪುಟ ಸಭೆಯಲ್ಲಿ ಮಹತ್ವದ ತೀರ್ಮಾನ**

ಜ.22ರಿಂದ ಆರಂಭವಾಗಲಿರುವ ಅಧಿವೇಶನದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸರ್ಕಾರ ಸದನವನ್ನು ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ಇದೇ ಅಧಿವೇಶನದಲ್ಲಿ ಮನರೇಗಾ ಯೋಜನೆಗೆ ಕೇಂದ್ರದಿಂದ ಅನುದಾನ ಕಡಿಮೆ ಮಾಡಿರುವುದು , ಯೋಜನೆಗೆ ವಿಬಿ ರಾಮ್ ಜಿ ಹೆಸರಿಟ್ಟಿರುವ ಬಗ್ಗೆ ಚರ್ಚೆ ನಡೆಯಲಿದೆ. ಸಭೆ ಬಳಿಕ ಪತ್ರಿಕಾಗೋಷ್ಠಿ ನಡೆಸಿ ಮಾತನಾಡಿದ ಕಾನೂನು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ.ಪಾಟೀಲ್, ''ಜ.22ರಿಂದ 31ರವರೆಗೆ ನಡೆಯಲಿರುವ ಜಂಟಿ ಅಧಿವೇಶನವನ್ನ ಉದ್ದೇಶಿಸಿ ಮಾತನಾಡಲು ರಾಜ್ಯಪಾಲರಿಗೆ ಆಹ್ವಾನ ನೀಡಸಲು ತೀರ್ಮಾನಿಸಲಾಗಿದೆ.

**1** ಜಿ ರಾಮ್ ಜಿ' ಯೋಜನೆ ವಿರೋಧಿಸಿ ಜ. 22 ರಿಂದ 31 ರವರೆಗೆ ರಾಜ್ಯ ವಿಧಾನಮಂಡಲದ ಜಂಟಿ ಅಧಿವೇಶನ

**2** ಜ. 22 ರಂದು ಬೆಳಗ್ಗೆ 11ಕ್ಕೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಂದ ಉಭಯ ಸದನಗಳನ್ನು ಉದ್ದೇಶಿಸಿ ಭಾಷಣ

**3** ಮನರೇಗಾ ರದ್ದು ಮತ್ತು ಹೊಸ ಯೋಜನೆಯ ಸಾಮಾಜಿಕ, ಆರ್ಥಿಕ ಪರಿಣಾಮಗಳ ಚರ್ಚೆಗೆ ಸಂಪುಟದ ಅಸ್ತು

ರಾಜ್ಯಪಾಲರು ಮಾಡಲಿರುವ ಭಾಷಣವನ್ನು ಅನುಮೋದಿಸಲು ಸಚಿವ ಸಂಪುಟವು ಮುಖ್ಯಮಂತ್ರಿಗಳಿಗೆ ಅಧಿಕಾರ ನೀಡಿದೆ ಎಂದರು.

ವಿಬಿಜಿ ರಾಮ್ ಜಿ ಕಾಯ್ದೆಯ ಸಾಮಾಜಿಕ ಹಾಗೂ ಆರ್ಥಿಕ ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಯಲಿದೆ. ನೂತನ ಕಾಯ್ದೆಯು ಸಮಾಜದ ಮೇಲೆ ಬೀರಿರುವ ಸಾಮಾಜಿಕ ಹಾಗೂ ಆರ್ಥಿಕ ಪರಿಣಾಮಗಳ ಬಗ್ಗೆ ಸಾರ್ವಜನಿಕರಿಗೆ ಅರಿವು , ಜಾಗೃತಿ ಮೂಡಿಸಲು ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ವಿಶೇಷ ಚರ್ಚೆ ನಡೆಸಿ ನೂತನ ಕಾಯ್ದೆಯ ಕುರಿತು ನಿರ್ಣಯ ಕೈಗೊಳ್ಳಲು ಸಚಿವ ಸಂಪುಟ ನಿರ್ಣಯಿಸಿದೆ ಎಂದು ತಿಳಿಸಿದರು. ಜನಹಿತ, ರಾಜ್ಯದ ಹಿತ ಕಾಪಾಡಲು ಸೂಕ್ತವಾದ ಹೆಜ್ಜೆ ಸರ್ಕಾರ ಇಡಲಿದೆ. ಒಕ್ಕೂಟ ವ್ಯವಸ್ಥೆಯಲ್ಲಿ ನಮ್ಮ ರಾಜ್ಯದ ಜನರ ಹಕ್ಕನ್ನು ಕಿತ್ತುಕೊಳ್ಳಲು ಮುಂದಾದರೆ ಸರ್ಕಾರ ಸುಮ್ಮನೆ ಕುಳಿತಿರಲು ಸಾಧ್ಯವಿಲ್ಲ. ಸರ್ಕಾರ ಅಧಿವೇಶನ ಕರೆಯದೇ ಬಿಡಲು ಸಾಧ್ಯವಿಲ್ಲ. ಅರಿವು , ಜಾಗೃತಿ ಮೂಡಿಸಲು, ಕೇಂದ್ರ ಸರ್ಕಾರದ ಮೇಲೆ ಮನರೇಗಾ ಕಾಯ್ದೆಯ ಮರುಸ್ಥಾಪನೆಗಾಗಿ ಒತ್ತಡ ತರಲಾಗುವುದು ಎಂದು ಹೇಳಿದರು.

**ಜ.22ರಿಂದ ವಿಶೇಷ ಅಧಿವೇಶನ. ಬೆಳಗ್ಗೆ 11ಗಂಟೆಗೆ ಅಧಿವೇಶನ ಆರಂಭ. ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡುವಂತೆ ರಾಜ್ಯಪಾಲರನ್ನು ಕೋರಲು ನಿರ್ಣಯ. ಜಂಟಿ ಅಧಿವೇಶನ ಉದ್ದೇಶಿಸಿ ರಾಜ್ಯಪಾಲರು ಮಾಡಲಿರುವ ಭಾಷಣವನ್ನು ಅನುಮೋದಿಸಲು ಮುಖ್ಯಮಂತ್ರಿಗಳಿಗೆ ಅಧಿಕಾರ ನೀಡಿದ ಸಂಪುಟ.ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜಿ ರಾಮ್ ಜಿ ಯೋಜನೆಯಿಂದ ಸಮಾಜದ ಮೇಲೆ ಬೀರಿರುವ ಸಾಮಾಜಿಕ ಹಾಗೂ ಆರ್ಥಿಕ ಪರಿಣಾಮಗಳ ಬಗ್ಗೆ ವಿಧಾನಮಂಡಲ ಜಂಟಿ ಅಧಿವೇಶನದಲ್ಲಿ ಚರ್ಚೆಗೆ ನಿರ್ಧಾರ.**

**ಜಿ ರಾಮ್ ಜಿ ವಿರುದ್ಧ ಸಂಪುಟ ನಿರ್ಣಯ**

**ಕಾನೂನು ಹೋರಾಟ:** ವಿಬಿ ಜಿ ರಾಮ್ ಜಿ ಯೋಜನೆಗೆ ಹಲವು ರಾಜ್ಯಗಳು ಧ್ವನಿ ಎತ್ತಿಲ್ಲ ಎಂಬ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪಂಜಾಬ್, ತಮಿಳುನಾಡು ಸೇರಿದಂತೆ ಆರೇಳು ರಾಜ್ಯಗಳು ಅಸಮಾಧಾನ ಹೊರಹಾಕಿವೆ. ಮನರೇಗಾ ಯೋಜನೆಯಡಿ ಕೇವಲ ಕೆಲಸ ಕೊಡುವುದು ಮಾತ್ರವಲ್ಲ, ಕೆಲಸ ಕೊಡದೇ ಹೋಗಿದ್ದರೆ. ಫಲಾನುಭವಿ ಉದ್ಯೋಗ ಭತ್ಯೆಯನ್ನು ಕೇಳಬಹುದಾಗಿತ್ತು. ಪಂಚಾಯತಿಗಳಿಗೆ ಕೆಲಸಗಳ ಬಗ್ಗೆ ತೀರ್ಮಾನಿಸುವ ಹಕ್ಕು ಇತ್ತು. ಹೊಸ ಕಾಯ್ದೆಯಡಿ ಪಂಚಾಯತಿಗಳಿಗೆ ಅಧಿಕಾರವಿಲ್ಲ. ಪಂಚಾಯತಿಗಳ ವ್ಯಾಪ್ತಿಗೂ ಬರುವುದಿಲ್ಲ. ಕೇಂದ್ರ ಸರ್ಕಾರವೇ ಎಲ್ಲಿ ಕಾಮಗಾರಿ ನಡೆಯಬೇಕೆಂದು ನಿರ್ಧರಿಸಲಿದೆ. ಗ್ರಾಮೀಣ ಆಸ್ತಿಯನ್ನು ಸೃಷ್ಟಿಸಲೆಂದು ಬಳಸಲಾಗುತ್ತಿದ್ದ ಕಾರ್ಮಿಕರನ್ನು ರಸ್ತೆ, ಟನಲ್ ನಿರ್ಮಾಣಕ್ಕೆ ಗುತ್ತಿಗೆದಾರರ ಬಳಿ ಕೆಲಸ ಮಾಡಬೇಕು ಎಂದರು.

**ವಿಶೇಷ ಚರ್ಚೆ ವೇಳೆ ಐವರು ಸಚಿವರಿಗೆ ಉಸ್ತುವಾರಿ:** ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಲು ನಿರ್ಣಯ ಮಾಡಲಾಗಿದೆ ಎಂದರು. ಜನರ ನ್ಯಾಯಾಲಯಕ್ಕೆ ಮಾತ್ರವಲ್ಲದೆ ಕಾನೂನಿನ ನ್ಯಾಯಾಲಯದ ಮೊರೆ ಹೋಗಲು ನಿರ್ಣಯಿಸಲಾಗಿದೆ. ರಾಜಕೀಯವಾಗಿ ಕೆಲವರು ಕಾಯ್ದೆಯನ್ನು ವಿಬಿಜಿ ರಾಮ್ ಜಿ ಎನ್ನುತ್ತಾರೆ. ಇದರಲ್ಲಿ ರಾಮ್ ಎಲ್ಲಿಂದ ಬರುತ್ತದೆ ಬರೆಯುವಾಗ, ಹೇಳುವಾಗ ತಪ್ಪು ಏಕೆ ಮಾಡುತ್ತಾರೆ.. ಭಾವನಾತ್ಮಕ ಅಂಶದಡಿ ಕೇಂದ್ರ ಸರ್ಕಾರ ಆಶ್ರಯ ಪಡೆಯುತ್ತಿರುವುದು ದುರದೃಷ್ಟಕರ ಸಂಗತಿ ಎಂದರು.

ಮನರೇಗಾ ಹಾಗೂ ರಾಮ್ ಜಿ ಯೋಜನೆಗಳ ಇರುವ ವೈರುಧ್ಯಗಳ ಬಗ್ಗೆ ತಿಳಿಸಲು ಅಧಿವೇಶನದಲ್ಲಿ ನಡೆಯಲಿರುವ ವಿಶೇಷ ಚರ್ಚೆ ವೇಳೆ ಐವರು ಸಚಿವರಿಗೆ ಉಸ್ತುವಾರಿವಹಿಸಲಾಗಿದೆ. ಸಚಿವರಾದ ಕೃಷ್ಣ ಬೈರೇಗೌಡ, ಹೆಚ್.ಕೆ.ಪಾಟೀಲ್, ಪ್ರಿಯಾಂಕ್ ಖರ್ಗೆ, ಶರಣಪ್ರಕಾಶ್ ಸೇರಿದಂತೆ ಐವರಿಗೆ ಹೆಚ್ಚು ಚರ್ಚೆಯಲ್ಲಿ ಭಾಗಿ ಆಗುವಂತೆ ತಿಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ.

# ಜಿ ರಾಮ್ ಜಿಗೆ ಸರ್ಕಾರದ ಸೆಡ್ಡು



**ಕಾನೂನು ಹೋರಾಟಕ್ಕೂ ಸಜ್ಜು**

## ವಿಬಿ ಜಿ ರಾಮ್ ಜೀ ಯೋಜನೆ ಬಗ್ಗೆ ವಿಶೇಷ ಚರ್ಚೆ



**ಮನರೇಗಾ ಕಾಯ್ದೆಯ ಮರು ಸ್ಥಾಪನೆಗಾಗಿ ಒತ್ತಡ**

**ಪಂಚಾಯತ್ ಹಕ್ಕುಗಳನ್ನು ಕಸಿಯಲಾಗಿದೆ**

**ಜಿ ರಾಮ್ ಜಿ ಜಾರಿಯಿಂದ ಪಂಚಾಯತಿಗಳ ಅಧಿಕಾರ ಕಸಿದುಕೊಳ್ಳಲಾಗಿದೆ. ಯಾವ ಪಂಚಾಯತ್‌ಗಳಿಗೆ ಯೋಜನೆ ಅವಕಾಶ ಸಿಗಬೇಕು ಎಂಬುವುದನ್ನು ಕೇಂದ್ರ ಸರ್ಕಾರ ನಿರ್ಧಾರ ಮಾಡುತ್ತದೆ. ಸಾರ್ವಜನಿಕ ಆಸ್ತಿ ನಿರ್ಮಾಣಕ್ಕೆ ಇದರಿಂದ ಹಿನ್ನಡೆ ಆಗುತ್ತದೆ. ಜನರ ಕೆಲಸದ ಹಕ್ಕು ಕಿತ್ತುಕೊಂಡು, ಪಂಚಾಯತ್ ಹಕ್ಕುಗಳನ್ನು ಕಿತ್ತುಕೊಂಡು ಅದನ್ನು ದಿಲ್ಲಿಯ ಅಧಿಕಾರಿಗಳ ಕೈಗೆ ನೀಡಲಾಗಿದೆ. ಇದು ಅಧಿಕಾರ ವಿಕೇಂದ್ರೀಕರಣಕ್ಕೆ ಕೊಡಲಿ ಏಟು ಎಂದು ಎಚ್‌ಕೆ ಪಾಟೀಲ್ ಹೇಳಿದರು. ಜಿ ರಾಮ್ ಜಿ ವಿರುದ್ಧ ಕಾನೂನು ಹೋರಾಟ ನಡೆಸಲು ತೀರ್ಮಾನ ಮಾಡಲಾಗಿದೆ ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.**

**ಜ.26ರಿಂದ ಬೃಹತ್ ಪಾದಯಾತ್ರೆ**

**ಹೋರಾಟವನ್ನು ತೀವ್ರಗೊಳಿಸುವ ಭಾಗವಾಗಿ ಜನವರಿ 26ರಿಂದ ಫೆಬ್ರವರಿ 2ರವರೆಗೆ ರಾಜ್ಯಾದ್ಯಂತ ತಾಲ್ಲೂಕು ಮಟ್ಟದಲ್ಲಿ 5ಕಿ.ಮೀ. ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ. ಉದ್ಯೋಗ ಚೀಟಿ ಹೊಂದಿರುವ ಕಾರ್ಮಿಕರ ಜೊತೆಗೂಡಿ ನಡೆಯಲಿರುವ ಈ ಪಾದಯಾತ್ರೆಯಲ್ಲಿ ರಾಷ್ಟ್ರೀಯ ನಾಯಕರೂ ಭಾಗವಹಿಸಲಿದ್ದಾರೆ. ಅಲ್ಲದೆ, ಗ್ರಾ.ಪಂ.ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲೂ ಪ್ರತಿಭಟನೆಗಳನ್ನು ಆಯೋಜಿಸಲಾಗುವುದು ಎಂದು ಶಿವಕುಮಾರ್ ಮಾಹಿತಿ ನೀಡಿದ್ದರು.**

# ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲ ಆಗುವುದಿಲ್ಲ: ಡಿಕೆಶಿ

## ಇದು ಆಂತರಿಕ ಬೆಳವಣಿಗೆಗಳ ಸುಳಿವು ಎಂದೇ ಕಾಂಗ್ರೇಸ್ ಪಾಳಯದಲ್ಲಿ ಚರ್ಚೆ ನಡೆಯುತ್ತಿವೆ

• **ಉದಯವಾಹಿನಿ, ಬೆಂಗಳೂರು**

ಪ್ರಯತ್ನ ವಿಫಲವಾದರೂ ಪ್ರಾರ್ಥನೆ ವಿಫಲ ಆಗುವುದಿಲ್ಲ. ಇದು ಡಿಸಿಎಂ ಡಿಕೆ ಶಿವಕುಮಾರ್ ಆಡಿರುವ ಮಾತು. ಸಾಮಾಜಿಕ ಜಾಲತಾಣಗಳಲ್ಲೂ ಡಿಕೆಶಿಯ ಈ ಮಾರ್ಮಿಕ ಮಾತು ಸಂಚಲನ ಮೂಡಿಸುತ್ತಿದೆ.

**ಮಾರ್ಮಿಕ ಮಾತಿನ ಹಿಂದಿದ್ಯಾ ಸುಳಿವು**

ಇದಕ್ಕೆ ಪೂರಕ ಎಂಬಂತೆ ಮಾಜಿ ಸಂಸದ ಡಿಕೆ ಸುರೇಶ್ ಕೂಡಾ ಯಶಸ್ಸಿನ ಮೊದಲ ಹೆಜ್ಜೆಯೇ ಹೆಜ್ಜೆ ಪ್ರಯತ್ನ.

ಸತತ ಪ್ರಯತ್ನದ ಫಲವೇ ಯಶಸ್ಸು ಎಂದಿದ್ದಾರೆ. ಇಬ್ಬರು ಸಹೋದರರ ಈ ಮಾರ್ಮಿಕ ಮಾತು ನಾಯಕತ್ವ ಬದಲಾವಣೆ ಕುರಿತಾಗಿ ನಡೆಯುತ್ತಿರುವ ಆಂತರಿಕ ಬೆಳವಣಿಗೆಗಳ ಸುಳಿವು ಎಂದೇ ಕಾಂಗ್ರೇಸ್ ಪಾಳಯದಲ್ಲಿ ಚರ್ಚೆ ನಡೆಯುತ್ತಿವೆ.

**ರಾಹುಲ್ ಭೇಟಿ ಮೂಲಕ ಡಿಕೆಶಿ ಅಹವಾಲು ಕೇಳಲು ವೇದಿಕೆ ಸಿದ್ಧ ಎಂಬ ಸಂದೇಶ:** 2023 ರಲ್ಲಿ ಕಾಂಗ್ರೇಸ್ ಆಡಳಿತಕ್ಕೆ ಬಂದ ಸಂದರ್ಭದಲ್ಲಿ ಅಧಿಕಾರ ಹಂಚಿಕೆ ಸೂತ್ರ ನಡೆದೇ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಆದಿಯಾಗಿ ಸಚಿವರು, ಶಾಸಕರು ಹೇಳುತ್ತಿದ್ದರು.

ಆದರೆ ಡಿಕೆ ಶಿವಕುಮಾರ್ ಮಾತ್ರ ಅಧಿಕಾರ ಹಂಚಿಕೆ ಸೂತ್ರ ಆಗಿದೆ ಎಂದು ಪರೋಕ್ಷವಾಗಿ ಹಲವು ಸಂದರ್ಭಗಳಲ್ಲಿ ಹೇಳಿಕೊಂಡಿದ್ದರು.

ಹೀಗಿದ್ದರೂ ಸಿದ್ದರಾಮಯ್ಯ ಬಣ ಸಾಕಷ್ಟು ವಿಶ್ವಾಸದಲ್ಲಿತ್ತು. ಐದು ವರ್ಷ ಸಿದ್ದರಾಮಯ್ಯ ಅವರೇ ಸಿಎಂ ಎಂದು ಒತ್ತಿ ಒತ್ತಿ ಆಪ್ತ ಬಣ ಹೇಳಿಕೊಳ್ಳುತ್ತಿತ್ತು. ಇದರಿಂದ ಡಿಕೆ ಶಿವಕುಮಾರ್ ಬಣಕ್ಕೆ ಹಿನ್ನಡೆ ಆಗಿತ್ತು. ಆದರೆ, ಇದೀಗ ರಾಹುಲ್ ಗಾಂಧಿ ಭೇಟಿ ಮೂಲಕ ಡಿಕೆಶಿ ಅಹವಾಲು ಕೇಳಲು ವೇದಿಕೆ ಸಿದ್ಧವಾಗುತ್ತಿದೆ ಎಂಬ ಸಂದೇಶ ರವಾನೆಯಾಗಿದೆ. ಈ ಸಮಯಕ್ಕಾಗಿ ಡಿಕೆಶಿಯೂ ಕಾಯುತ್ತಿದ್ದರು.

**ನಾಯಕತ್ವ ಬದಲಾವಣೆ ಚರ್ಚೆ ಜೀವಂತ:** ನಾಯಕತ್ವ ಬದಲಾವಣೆ ಚರ್ಚೆ ಕೇವಲ ರಾಜ್ಯದಲ್ಲಿ ಮಾತ್ರ ನಡೆಯುತ್ತಿದೆ. ಆದರೆ, ಹೈಕಮಾಂಡ್ ಮಟ್ಟದಲ್ಲಿ ಇಲ್ಲ. ಯಥಾಸ್ಥಿತಿ ಕಾಪಾಡಲು ಹೈಕಮಾಂಡ್ ಸೂಚನೆ ನೀಡಿದೆ. ಹೀಗಾಗಿ 2028 ರವರೆಗೆ ಯಾವುದೇ ಬದಲಾವಣೆ ಇಲ್ಲ. ಈ ಸಂದೇಶವನ್ನು ರಾಹುಲ್ ಗಾಂಧಿ ಸಿಎಂ ಸಿದ್ದರಾಮಯ್ಯ ಅವರಿಗೆ ಪರೋಕ್ಷವಾಗಿ ನೀಡಿದ್ದಾರೆ ಎಂದು ಸಿದ್ದರಾಮಯ್ಯ ಬಣದ ಬಲವಾದ ನಂಬಿಕೆಯಾಗಿತ್ತು. ಆಂತರಿಕವಾಗಿ ಇದನ್ನೇ ಬಿಂಬಿಸಲಾಗುತ್ತಿತ್ತು. ಹೀಗಾಗಿಯೇ ಇಂದೂ ನಾನೇ ಸಿಎಂ ಮುಂದೂ ನಾನೇ ಸಿಎಂ ಎಂದು ಸಿದ್ದರಾಮಯ್ಯ ಖಡಕ್ ಆಗಿ ಸದನದಲ್ಲಿ ಹೇಳಿದ್ದಾರೆ ಎಂಬುದು ಈ ಬಣದ ವಾದವಾಗಿತ್ತು. ಆದರೆ ಅದು ಇದೀಗ ತಲೆಕೆಳಗಾಗುವ ಸಾಧ್ಯತೆ ಇದೆ. ಈ ವಿಚಾರವನ್ನು ಡಿಕೆಶಿ ಈ ಭೇಟಿಯ ಮೂಲಕ ನೀಡಿದ್ದಾರೆ.



**ಎರಡು ಬಣಕ್ಕೂ ನೀಡಿದ ಸಂದೇಶ**

**ರಾಹುಲ್ ಗಾಂಧಿಯನ್ನು ಡಿಕೆ ಶಿವಕುಮಾರ್ ಪ್ರತ್ಯೇಕವಾಗಿ ಭೇಟಿ, ಮಾತುಕತೆ ಎರಡು ಬಣಕ್ಕೆ ರವಾನೆಯಾದ ಸಂದೇಶವಾಗಿದೆ. ನಾಯಕತ್ವ ಬದಲಾವಣೆಯೇ ಇಲ್ಲ ಎಂಬ ನಂಬಿಕೆಯಲ್ಲಿದ್ದ ಸಿದ್ದರಾಮಯ್ಯ ಬಣ ಹಾಗೂ ಬೆಂಬಲಿಗರಿಗೆ ವಾಸ್ತವ ಬೇರೆ ಇದೆ ಎಂಬ ಸಂದೇಶ ಇದಾಗಿದೆ. ಜೊತೆಗೆ ಏನಾಗಲಿದೆ ಎಂದು ಗೊಂದಲದಲ್ಲಿ ಇರುವ ಡಿಕೆ ಶಿವಕುಮಾರ್ ಬೆಂಬಲಿಗರಿಗೆ ಪಾಸಿಟಿವ್ ಆಗಿರಿ ಎಂಬ ಸಂದೇಶವನ್ನು ಡಿಕೆ ಶಿವಕುಮಾರ್ ನೀಡಿದ್ದಾರೆ. ಒಟ್ಟಿನಲ್ಲಿ ಸಂಕ್ರಾಂತಿ ಬಳಿಕ ಉತ್ತರಾಯಣ ಪುಣ್ಯ ಕಾಲ ಆರಂಭಗೊಳ್ಳುತ್ತಿದೆ. ಇದು ಡಿಕೆಶಿ ಪಾಲಿಗೆ ಪುಣ್ಯಕಾಲ ಆಗಲಿದ್ಯಾ ಎಂಬುದು ಸದ್ಯದ ಕುತೂಹಲ.**

**ರಾಹುಲ್ ಗಾಂಧಿಗೆ ಡಿಕೆಶಿ ಬಗ್ಗೆ ವಿಶ್ವಾಸ ಇಲ್ಲ ಎಂಬ ಚರ್ಚೆಗೆ ಠಕ್ಕರ್:** ರಾಹುಲ್ ಗಾಂಧಿಗೆ ಸಿದ್ದರಾಮಯ್ಯ ಬಗ್ಗೆ ಉತ್ತಮ ಅಭಿಪ್ರಾಯ ಇದೆ. ಸಿದ್ದರಾಮಯ್ಯ ಬದಲಾವಣೆ ಆದರೆ ಅಹಿಂದ ವರ್ಗದ ವಿರೋಧ ಎದುರಿಸುವ ಸಾಧ್ಯತೆ ಬಗ್ಗೆ ರಾಹುಲ್ ಗಾಂಧಿಗೆ ಮನವರಿಕೆ ಆಗಿದೆ.

ಹೀಗಾಗಿ ರಾಹುಲ್ ಗಾಂಧಿ ಸಿದ್ದರಾಮಯ್ಯ ಪರವಾಗಿ ಇದ್ದಾರೆ. ಜೊತೆಗೆ ಡಿಕೆ ಶಿವಕುಮಾರ್ ಅವರ ಸೈದ್ಧಾಂತಿಕ ನಿಲುವಿನ ಬಗ್ಗೆ ರಾಹುಲ್ ಗಾಂಧಿಗೆ ಅಸಮಾಧಾನ ಇದೆ. ಈ ಕಾರಣಕ್ಕಾಗಿ ದೆಹಲಿಗೆ ಡಿಕೆಶಿ ಹಲವು ಬಾರಿ ಪ್ರವಾಸ ಮಾಡಿ ಭೇಟಿಗೆ ಯತ್ನಿಸಿದರೂ ಅವಕಾಶ ಸಿಕ್ಕಿರಲಿಲ್ಲ ಎಂಬ ಚರ್ಚೆಯನ್ನು ಮುನ್ನಲೆಗೆ ತರಲಾಗಿತ್ತು. ಆದರೆ ಇದೀಗ ಡಿಕೆ ಶಿವಕುಮಾರ್ ಗೆ ದೆಹಲಿ ಬುಲಾವ್ ಸಿಕ್ಕಿದ್ದು, ಸ್ವತಃ ರಾಹುಲ್ ಗಾಂಧಿ ಪ್ರತ್ಯೇಕವಾಗಿ ಮಾತನಾಡಿದ್ದು ಡಿಕೆಶಿಗೆ ಬಲತುಂಬಿದೆ.

# ಜಿಬಿಎ ವ್ಯಾಪ್ತಿಯ ಅನಧಿಕೃತ ಕಟ್ಟಡಗಳ ತೆರವಿಗೆ ತಂಡ: ಮುಖ್ಯ ಆಯುಕ್ತ ಮಹೇಶ್ವರ್ ರಾವ್

• ಉದಯವಾಹಿನಿ, ಬೆಂಗಳೂರು

ಅನಧಿಕೃತ ಕಟ್ಟಡಗಳಿಗೆ ನೋಟಿಸ್ ನೀಡಿ, ತಂಡಗಳನ್ನು ರಚಿಸಿ ತೆರವು ಕಾರ್ಯಾಚರಣೆ ನಡೆಸಬೇಕು ಎಂದು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಸೂಚಿಸಿದರು. ಬೆಂಗಳೂರು ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಅನಧಿಕೃತ ಕಟ್ಟಡಗಳಿಗೆ ನೋಟಿಸ್ ನೀಡಿದ ನಂತರ ನಿಯಮಾನುಸಾರ ತೆರವು ಆದೇಶ ಹೊರಡಿಸಲು ಸೂಚಿಸಿದರು.

ಅನಧಿಕೃತ ಕಟ್ಟಡಗಳ ಪರಿಶೀಲನೆ ನಡೆಸಿ, ಹೆಚ್ಚುವರಿ ಮಹಡಿಗಳನ್ನು ನಿರ್ಮಿಸಿದ್ದಲ್ಲಿ ಅವುಗಳನ್ನು ಕೂಡಲೇ ತೆರವುಗೊಳಿಸಬೇಕು. ಈ ಸಂಬಂಧ ಅಧಿಕಾರಿಗಳು, ಮಾರ್ಷಲ್‌ಗಳನ್ನು ಒಳಗೊಂಡ ತಂಡಗಳನ್ನು ರಚಿಸಬೇಕು ಎಂದರು.

ನಕ್ಷೆ ಮಂಜೂರಾತಿ ಪಡೆಯದೆ ನಿರ್ಮಾಣವಾಗುತ್ತಿರುವ ಕಟ್ಟಡಗಳನ್ನು ಮೊಹರು ಮಾಡಬೇಕು. ಕಟ್ಟಡ ನಿರ್ಮಾಣದ ಪ್ರಾರಂಭದಲ್ಲೇ ನಿಯಮ ಉಲ್ಲಂಘನೆ ಆಗುತ್ತಿದೆಯೇ ಎಂಬುದನ್ನು ಪರಿಶೀಲಿಸಿ, ಶಿಸ್ತು ಕ್ರಮಗಳನ್ನು ಕೈಗೊಂಡು ಅನಧಿಕೃತ ಕಟ್ಟಡ ನಿರ್ಮಾಣವನ್ನು ತಡೆಯಬೇಕು. ಕಟ್ಟಡ ನಿರ್ಮಾಣದಿಂದ ರಸ್ತೆ ಬದಿಯಲ್ಲಿ ರಾಶಿಯಾಗುವ ಭಗ್ನಾವಶೇಷಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.



ಪಶ್ಚಿಮ ನಗರ ಪಾಲಿಕೆ ವ್ಯಾಪ್ತಿಯಲ್ಲಿ 10 ವಿಧಾನಸಭಾ ಕ್ಷೇತ್ರಗಳು ಹಾಗೂ 21 ಉಪ ವಿಭಾಗಗಳಿದ್ದು, ಸುಮಾರು 6 ಲಕ್ಷ ಆಸ್ತಿಗಳಿವೆ. ರೂ.1,281 ಕೋಟಿ ಆಸ್ತಿ ತೆರಿಗೆ ಸಂಗ್ರಹ ಗುರಿ ಹೊಂದಲಾಗಿದ್ದು, ಇದುವರೆಗೆ ರೂ.733 ಕೋಟಿ ಸಂಗ್ರಹಿಸಲಾಗಿದೆ. ಬಾಕಿ ಆಸ್ತಿ ತೆರಿಗೆಯನ್ನು ನಿಗದಿತ ಕಾಲಮಿತಿಯೊಳಗೆ ಸಂಗ್ರಹಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಪಶ್ಚಿಮ ನಗರ ಪಾಲಿಕೆ ಆಯುಕ್ತ ಕೆ.ವಿ. ರಾಜೇಂದ್ರ ಮಾತನಾಡಿ, ವಾಣಿಜ್ಯ ಸ್ವತ್ತುಗಳಿರುವ ಪ್ರದೇಶಗಳಲ್ಲಿ ಎಲ್ಲಾ ಕಂದಾಯ ಅಧಿಕಾರಿಗಳು ಸೇರಿ ದಿನಕ್ಕೆ 50ರಿಂದ 80 ಆಸ್ತಿಗಳ ಪರಿಶೀಲನೆ ನಡೆಸಲಾಗುತ್ತಿದೆ. ಬಿ-ಖಾತಾದಿಂದ ಎ-ಖಾತಾ ಪರಿವರ್ತನೆಗೆ ಸಲ್ಲಿಸಿದ ಅರ್ಜಿಗಳನ್ನೂ ಪರಿಶೀಲಿಸಿ ಎ-ಖಾತಾ ನೀಡುವ ಕಾರ್ಯ ಪ್ರಗತಿಯಲ್ಲಿದೆ' ಎಂದು ಹೇಳಿದರು.

**ತೆರವು:** ಬ್ಯಾಟರಾಯನಪುರ ವಿಭಾಗ ವ್ಯಾಪ್ತಿಯಲ್ಲಿನ ಜಕ್ಕೂರು ಉಪ ವಿಭಾಗದ ವಾರ್ಡ್ ಸಂಖ್ಯೆ 17ರ ಜಕ್ಕೂರು ದಾಸರಹಳ್ಳಿ ಬಡಾವಣೆಯಲ್ಲಿ ನಕ್ಷೆ ಮಂಜೂರಾತಿ ಪಡೆಯದೆ ನಿರ್ಮಿಸಲಾಗುತ್ತಿದ್ದ ಕಟ್ಟಡವನ್ನು ಉತ್ತರ ನಗರ ಪಾಲಿಕೆ ಸಿಬ್ಬಂದಿ ತೆರವುಗೊಳಿಸಿದರು.

ನೆಲ + 1 ಮಹಡಿ ಕಟ್ಟಡದ ಮೇಲೆ ಹೆಚ್ಚುವರಿಯಾಗಿ ಎರಡು ಅಂತಸ್ತು ಕಟ್ಟಡ ನಿರ್ಮಾಣ ಮಾಡಲಾಗುತ್ತಿತ್ತು. ಕಟ್ಟಡದ 4ನೇ ಅಂತಸ್ತಿಗೆ ಯಾವುದೇ ಪರವಾನಗಿ ಪಡೆಯದೇ ಅನಧಿಕೃತವಾಗಿ ನಿರ್ಮಿಸಲಾಗುತ್ತಿತ್ತು ಎಂದು ಉತ್ತರ ನಗರ ಪಾಲಿಕೆಯ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ತಿಳಿಸಿದರು.

## ಇವಿ. ಚಾರ್ಜಿಂಗ್, ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಏಕ ಗವಾಕ್ಷಿ ವ್ಯವಸ್ಥೆ

• ಉದಯವಾಹಿನಿ, ಬೆಂಗಳೂರು

ಇ.ವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆ, ತ್ವರಿತ ವಿದ್ಯುತ್ ಸಂಪರ್ಕಕ್ಕೆ ಏಕ ಗವಾಕ್ಷಿ ವ್ಯವಸ್ಥೆಯನ್ನು ಹೊಂದಿರುವ ಲ್ಯಾಂಡ್ ಅಗ್ರಿಗೇಟರ್ ಪೋರ್ಟಲ್' ಅನ್ನು ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ಆರಂಭಿಸಿದೆ. ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಈಚೆಗೆ ಪೋರ್ಟಲ್‌ಗೆ ಚಾಲನೆ ನೀಡಿದ್ದು ಭೂಮಾಲೀಕರು, ಸರ್ಕಾರಿ ಇಲಾಖೆಗಳು, ಖಾಸಗಿ ಸಂಸ್ಥೆಗಳು ಇ.ವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳನ್ನು ಸ್ಥಾಪಿಸಲು ಹಾಗೂ ಬೆಸ್ಕಾಂನಿಂದ ತ್ವರಿತವಾಗಿ ವಿದ್ಯುತ್ ಸಂಪರ್ಕ ಪಡೆಯಲು ಪೋರ್ಟಲ್ ಮೂಲಕ ಅವಕಾಶ ಕಲ್ಪಿಸಲಾಗಿದೆ. ನಗರ ಹಾಗೂ ಹೆದ್ದಾರಿಗಳಲ್ಲಿ ಇ.ವಿ ಮೂಲಸೌಕರ್ಯಗಳನ್ನು ತ್ವರಿತವಾಗಿ ಸ್ಥಾಪಿಸಲು ಭೂ ಮಾಲೀಕರು ಮತ್ತು ಚಾರ್ಜಿಂಗ್ ಆಪರೇಟರ್‌ಗಳಿಗೆ ಈ ಪೋರ್ಟಲ್ ನೆರವಾಗಲಿದೆ. ಇ.ವಿ ಹಬ್‌ಗಳ ನಿರ್ಮಾಣವನ್ನು ಉತ್ತೇಜಿಸುವ ಸಲುವಾಗಿ ರಾಷ್ಟ್ರೀಯ ಹೆದ್ದಾರಿಯ ಇ.ವಿ ವಿಭಾಗ ಬೆಸ್ಕಾಂ ಜೊತೆ ಕೈಜೋಡಿಸಿದೆ.

ಈ ಪೋರ್ಟಲ್ ಮೂಲಕ ಭೂ ಮಾಲೀಕರು ತಮ್ಮ ಭೂಮಿಯನ್ನು ಇ.ವಿ ಚಾರ್ಜಿಂಗ್ ಹಾಗೂ ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಗೆ ಆದಾಯ ಹಂಚಿಕೆ ಆಧಾರದ ಮೇಲೆ ಬಾಡಿಗೆಗೆ ಅಥವಾ ಭೋಗ್ಯಕ್ಕೆ ನೀಡಲು ಅವಕಾಶ ಇದೆ. ಅದೇ ರೀತಿ ವಿತರಕರು ಮತ್ತು ಚಾರ್ಜ್ ಪಾಯಿಂಟ್ ಆಪರೇಟರ್‌ಗಳು ಇ.ವಿ ಚಾರ್ಜಿಂಗ್ ಕೇಂದ್ರಗಳ ಸ್ಥಾಪನೆ, ಕಾರ್ಯಾಚರಣೆ ಹಾಗೂ ನಿರ್ವಹಣೆ ವಹಿಸಿಕೊಳ್ಳಬಹುದು. ಸಾರ್ವಜನಿಕ-ಖಾಸಗಿ ಸಹಭಾಗಿತ್ವವನ್ನು ಬಲಪಡಿಸಿ, ಸ್ಥಳೀಯವಾಗಿ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುತ್ತದೆ. ಇ.ವಿ ಚಾರ್ಜಿಂಗ್ ಮತ್ತು ಬ್ಯಾಟರಿ ವಿನಿಮಯ ಕೇಂದ್ರಗಳ ಸ್ಥಾಪನೆಯನ್ನು ಸುಲಭಗೊಳಿಸಲಿದೆ ಎಂದು ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಎನ್. ಶಿವಶಂಕರ ತಿಳಿಸಿದ್ದಾರೆ.

# ನಮ್ಮ ಮೆಟ್ರೋದಿಂದ 1,3, 5 ದಿನಗಳ ಅನ್ಲಿಮಿಟೆಡ್ ಕ್ಯೂಆರ್ ಕೋಡ್ ಪಾಸ್ ಆರಂಭ

## ಕ್ಯೂಆರ್ ಕೋಡ್ ಪಾಸ್‌ನಿಂದ ಹಣ ಉಳಿಸುವ ಜತೆಗೆ ಪಾಸ್ ಕಳೆದುಕೊಳ್ಳುವ ಭಯವೂ ಇರುವುದಿಲ್ಲ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಪ್ರಯಾಣಿಕರಿಗೆ ಗುಡ್‌ನ್ಯೂಸ್. ಬಿಎಂಆರ್‌ಸಿಎಲ್‌ನಿಂದ 1, 3 ಹಾಗೂ 5 ದಿನಗಳ ಅನ್ಲಿಮಿಟೆಡ್ ಕ್ಯೂಆರ್ ಕೋಡ್ ಪಾಸ್ ಸೇವೆ ಆರಂಭಿಸಲಾಗಿದೆ. ಸ್ಮಾರ್ಟ್ ಕಾರ್ಡ್ ಹಿಡಿದು ತಿರುಗಾಡುವ, ನಿಲ್ದಾಣಗಳಲ್ಲಿ ಕ್ಯೂ ನಿಂತು ರಿಚಾರ್ಜ್ ಮಾಡುವ ಬದಲು ಮೊಬೈಲ್‌ನಲ್ಲಿಯೇ ಪಾಸ್ ಬಳಸಬಹುದು. ಇದರಿಂದ ಹಣ ಉಳಿಸುವ ಜತೆಗೆ ಪಾಸ್ ಕಳೆದುಕೊಳ್ಳುವ ಭಯವೂ ಇರುವುದಿಲ್ಲ.

ಈ ಬಗ್ಗೆ ಬಿಎಂಆರ್‌ಸಿಎಲ್ ಮಾಹಿತಿ ಹಂಚಿಕೊಂಡಿದೆ. ಮೊಬೈಲ್ ಕ್ಯೂಆರ್ ಆಧಾರಿತ 1, 3 ಮತ್ತು 5 ದಿನಗಳ ಅನಿಯಮಿತ ಪ್ರಯಾಣದ ಪಾಸ್ ಆರಂಭಿಸಲಾಗಿದೆ. ಪ್ರಯಾಣಿಕರ ಸೌಕರ್ಯವನ್ನು ಹೆಚ್ಚಿಸುವ, ಡಿಜಿಟಲ್ ಟಿಕೆಟ್ ವ್ಯವಸ್ಥೆಯನ್ನು ಉತ್ತೇಜಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. ಜನವರಿ 15 ರಿಂದ ಮೊಬೈಲ್ ಕ್ಯೂಆರ್ ಆಧಾರಿತ 1 ದಿನ, 3 ದಿನ ಮತ್ತು 5 ದಿನಗಳ ಅನಿಯಮಿತ ಪ್ರಯಾಣ ಪಾಸ್ ಸೇವೆ ಆರಂಭವಾಗಲಿದೆ ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದ್ದಾರೆ.

**ಸದ್ಯ ಮೆಟ್ರೋ ಪಾಸ್ ವ್ಯವಸ್ಥೆ ಹೇಗಿತ್ತು:** ಇದುವರೆಗೆ ಅನಿಯಮಿತ ಪ್ರಯಾಣ ಪಾಸ್‌ಗಳು, ಕೇವಲ ಕಾಂಟ್ಯಾಕ್ಟ್‌ಲೆಸ್




ಸ್ಮಾರ್ಟ್ ಕಾರ್ಡ್‌ಗಳ (ಸಿಎಸ್‌ಸಿ) ಮೂಲಕವೇ ಲಭ್ಯವಾಗುತ್ತಿದ್ದು, 50 ರೂ. ಭದ್ರತಾ ಠೇವಣಿ ಪಾವತಿಸುವುದು ಕಡ್ಡಾಯವಾಗಿತ್ತು. ಇದೀಗ ಮೊಬೈಲ್ ಕ್ಯೂಆರ್ ಕೋಡ್ ಪಾಸ್‌ಗಳ ಪರಿಚಯದೊಂದಿಗೆ, ಪಾಸ್‌ಗಳು ಮೊಬೈಲ್ ಫೋನ್‌ಗಳಲ್ಲಿ ಡಿಜಿಟಲ್ ರೂಪದಲ್ಲಿ ಲಭ್ಯವಾಗುತ್ತವೆ. ಪ್ರಯಾಣಿಕರಿಗೆ ಯಾವುದೇ ಭದ್ರತಾ ಠೇವಣಿ ಪಾವತಿಸುವ ಅಗತ್ಯವಿರುವುದಿಲ್ಲ.

### ಮೊಬೈಲ್ ಕ್ಯೂಆರ್ ಪಾಸ್‌ಗಳ ಪ್ರಮುಖ ವೈಶಿಷ್ಟ್ಯಗಳೇನು?

- ಸ್ಮಾರ್ಟ್ ಕಾರ್ಡ್‌ಗಳಿಗೆ ಅಗತ್ಯವಿದ್ದ 50 ರೂ. ಠೇವಣಿಯು ಡಿಜಿಟಲ್ ಕ್ಯೂಆರ್ ಕೋಡ್ ಪಾಸ್‌ಗಳಿಗೆ ಇರುವುದಿಲ್ಲ.
- ಪಾಸ್‌ಗಳನ್ನು ನಮ್ಮ ಮೆಟ್ರೋ ಅಧಿಕೃತ ಆಪ್ ಮೂಲಕ ಖರೀದಿಸಬಹುದು. ಇತರ ಮೊಬೈಲ್ ಅಪ್ಲಿಕೇಶನ್‌ಗಳಲ್ಲಿ ಶೀಘ್ರದಲ್ಲೇ ಪರಿಚಯಿಸಲಾಗುತ್ತದೆ
- ಪಾಸ್‌ಗಳನ್ನು ನಮ್ಮ ಮೆಟ್ರೋ ಅಧಿಕೃತ ಆಪ್ ಮೂಲಕ ಖರೀದಿಸಬಹುದು. ಇತರ ಮೊಬೈಲ್ ಅಪ್ಲಿಕೇಶನ್‌ಗಳಲ್ಲಿ ಶೀಘ್ರದಲ್ಲೇ ಪರಿಚಯಿಸಲಾಗುತ್ತದೆ ಪ್ರಯಾಣಿಕರು ತಮ್ಮ ಮೊಬೈಲ್‌ನಲ್ಲಿ ಪ್ರದರ್ಶಿಸಲಾದ ಕ್ಯೂಆರ್ ಕೋಡ್ ಅನ್ನು ಸ್ವಯಂಚಾಲಿತ ಸಂಗ್ರಹ (ಎಎಫ್‌ಸಿ) ಗೇಟ್‌ಗಳಲ್ಲಿ ಸ್ಕ್ಯಾನ್ ಮಾಡಿ ಪ್ರವೇಶ ಮತ್ತು ನಿರ್ಗಮನ ಪಡೆಯಬಹುದು.

### ಕ್ಯೂಆರ್ ಕೋಡ್ ಪಾಸ್ ದರ ಎಷ್ಟಿದೆ?

| | | |
|---|---|---|
| 1 ದಿನದ ಪಾಸ್ | 300 ರೂ. | 250 ರೂ. |
| 3 ದಿನಗಳ ಪಾಸ್ | 600 ರೂ. | 550 ರೂ. |
| 5 ದಿನಗಳ ಪಾಸ್ | 900 ರೂ. | 850 ರೂ. |

ಪ್ರಯಾಣಿಕರ ಕಾರ್ಡ್ ವಿತರಣೆ ಮತ್ತು ಮರುಪಾವತಿಗಾಗಿ ಸರತಿ ಸಾಲುಗಳನ್ನು ತಪ್ಪಿಸಿ, ಸಮಯವನ್ನು ಉಳಿಸಲು ಮತ್ತು ತಡೆರಹಿತ ಪ್ರಯಾಣದ ಅನುಭವವನ್ನು ಹೆಚ್ಚಿಸಲು, ಮೊಬೈಲ್ ಕ್ಯೂಆರ್ ಆಧಾರಿತ ಪಾಸ್‌ಗಳಿಗೆ ಬದಲಾಯಿಸಲು ಪ್ರೋತ್ಸಾಹಿಸುತ್ತದೆ. ಈ ಕ್ರಮವು ಪೂರ್ಣ ಡಿಜಿಟಲ್ ಮತ್ತು ಪ್ರಯಾಣಿಕ ಸ್ನೇಹಿ ಮೆಟ್ರೋ ವ್ಯವಸ್ಥೆ ರೂಪಿಸುವ ಬಿಎಂಆರ್‌ಸಿಎಲ್‌ನ ಮತ್ತೊಂದು ಮಹತ್ವದ ಹೆಜ್ಜೆಯಾಗಿದೆ ಎಂದು ಬಿಎಂಆರ್‌ಸಿಎಲ್ ತಿಳಿಸಿದೆ.

## ಜೈಲು ಸುಧಾರಣಾ ಸಮಿತಿಯಿಂದ ಗೃಹ ಸಚಿವರಿಗೆ ವರದಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಎಡಿಜಿಪಿ(ಕಾನೂನು ಮತ್ತು ಸುವ್ಯವಸ್ಥೆ) ಆರ್ ಹಿತೇಂದ್ರ ನೇತೃತ್ವದ ಕರ್ನಾಟಕ ಜೈಲು ಸುಧಾರಣೆಗಳ ಕುರಿತಾದ ಉನ್ನತ ಮಟ್ಟದ ಸಮಿತಿಯು ಗೃಹ ಸಚಿವ ಜಿ ಪರಮೇಶ್ವರ ಅವರಿಗೆ ತನ್ನ ವರದಿಯನ್ನು ಸಲ್ಲಿಸಿದೆ. ರಾಜ್ಯದ ಜೈಲುಗಳಲ್ಲಿನ ಕಾನೂನುಬಾಹಿರ ಚಟುವಟಿಕೆಗಳು, ಭದ್ರತಾ ಕ್ರಮಗಳು ಮತ್ತು ಸುಧಾರಣಾ ಕ್ರಮಗಳನ್ನು ಒಳಗೊಂಡಿರುವ ಸಮಿತಿಯ ಶಿಫಾರಸುಗಳ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೊಂದಿಗೆ ಚರ್ಚಿಸಲಾಗುವುದು ಎಂದು ಪರಮೇಶ್ವರ ಅವರು ಸುದ್ದಿಗಾರರಿಗೆ ತಿಳಿಸಿದ್ದಾರೆ. ಹಿತೇಂದ್ರ ನೇತೃತ್ವದ ಸಮಿತಿಯು ತನ್ನ ವರದಿಯನ್ನು ಸಲ್ಲಿಸಿದೆ. ನಾನು ಅದರ ಬಗ್ಗೆ ಚರ್ಚಿಸುತ್ತೇನೆ ಮತ್ತು ಅಗತ್ಯವಿದ್ದರೆ ಅದನ್ನು ಸಚಿವ ಸಂಪುಟಕ್ಕೆ ಸಲ್ಲಿಸುತ್ತೇನೆ. ಕೆಲವು ಶಿಫಾರಸುಗಳನ್ನು ಮಾಡಲಾಗಿದೆ, ಅದನ್ನು ನಾನು ಮುಖ್ಯಮಂತ್ರಿಯೊಂದಿಗೆ ಪರಿಶೀಲಿಸುತ್ತೇನೆ ಎಂದು ಅವರು ಹೇಳಿದರು. ರಾಜ್ಯದ ಕೆಲವು ಜೈಲುಗಳಲ್ಲಿ ಕೈದಿಗಳಿಗೆ ರಾಜಾತಿಥ್ಯ ಮತ್ತು ಕಾನೂನುಬಾಹಿರ ಚಟುವಟಿಕೆಗಳ ಆರೋಪಗಳ ಹಿನ್ನೆಲೆಯಲ್ಲಿ ಈ ವರದಿ ಸಲ್ಲಿಸಲಾಗಿದೆ. ಬೆಂಗಳೂರಿನ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದೊಳಗೆ ಕುಖ್ಯಾತ ಅಪರಾಧಿಗಳು ಮತ್ತು ಶಂಕಿತ ಉಗ್ರರು ಸೇರಿದಂತೆ ಕೈದಿಗಳಿಗೆ ರಾಜಾತಿಥ್ಯ ನೀಡುತ್ತಿರುವುದನ್ನು ತೋರಿಸಿದ ವಿಡಿಯೋಗಳು ರಾಷ್ಟ್ರ ಮಟ್ಟದಲ್ಲಿ ಗಮನ ಸೆಳೆದ ನಂತರ ವಿವಾದ ಭುಗಿಲೆದ್ದಿತು.

## ಪ್ರತ್ಯೇಕ ಎಫ್‌ಐಆರ್ ದಾಖಲಿಸುವಂತೆ ಹೈಕೋರ್ಟ್‌ಗೆ ಸೌಜನ್ಯ ತಾಯಿ ಮನವಿ

• ಉದಯವಾಹಿನಿ, ಬೆಂಗಳೂರು

ಧರ್ಮಸ್ಥಳದಲ್ಲಿ 1990ರಿಂದ 2021ರ ನಡುವೆ ಸಂಭವಿಸಿದೆ ಎನ್ನಲಾದ 74 ಅಸಹಜ ಸಾವು ಪ್ರಕರಣಗಳ ಸಂಬಂಧ ಪ್ರತ್ಯೇಕ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಲು ವಿಶೇಷ ತನಿಖಾ ತಂಡಕ್ಕೆ (ಎಸ್‌ಐಟಿ) ನಿರ್ದೇಶಿಸುವಂತೆ ಕೋರಿ ಸಲ್ಲಿಸಿರುವ ಅರ್ಜಿ ಕುರಿತು ತನ್ನ ನಿಲುವು ತಿಳಿಸುವಂತೆ ಹೈಕೋರ್ಟ್, ರಾಜ್ಯ ಸರಕಾರಕ್ಕೆ ಸೂಚನೆ ನೀಡಿದೆ.




ಧರ್ಮಸ್ಥಳದಲ್ಲಿ ಸಾಮೂಹಿಕ ಅತ್ಯಾಚಾರಕ್ಕೀಡಾಗಿ ಕೊಲೆಯಾದ ವಿದ್ಯಾರ್ಥಿನಿ ಸೌಜನ್ಯ ತಾಯಿ ಕುಸುಮಾವತಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹಾಗೂ ನ್ಯಾಯಮೂರ್ತಿ ಸಿ.ಎಂ.ಪೂಣಚ್ಚ ಅವರಿದ್ದ ವಿಭಾಗೀಯಪೀಠದ ಮುಂದೆ ಮಂಗಳವಾರ ವಿಚಾರಣೆಗೆ ಬಂದಿತು. ಸೌಜನ್ಯ ತಾಯಿ ಕುಸುಮಾವತಿ ಅವರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದು, ಧರ್ಮಸ್ಥಳದಲ್ಲಿ ಘಟಿಸಿರುವ 74 ಅಸಹಜ ಸಾವು ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ಎಫ್‌ಐಆರ್ ದಾಖಲಿಸಬೇಕು ಮತ್ತು ಎಸ್‌ಐಟಿ ತನಿಖೆಗೆ ಸೂಚಿಸಬೇಕು ಎಂದು ಮನವಿ ಮಾಡಿದ್ದರು. ಧರ್ಮಸ್ಥಳ ಎಂಬ ಗ್ರಾಮದ ಸಣ್ಣ ಹೊರಠಾಣೆ ಪೊಲೀಸ್ ಠಾಣಾ ವ್ಯಾಪ್ತಿಯೊಂದರಲ್ಲೇ 74 ಅಸಹಜ ಸಾವು ಪ್ರಕರಣಗಳು ವರದಿಯಾಗಿದೆ. ಈ ಪ್ರಕರಣಗಳ ತನಿಖೆ ಮಾಡಲೆಂದೇ ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿದೆ. ಆದರೆ, ಎಸ್‌ಐಟಿಯು ಕೇವಲ ಒಂದು ಎಫ್‌ಐಆರ್ ದಾಖಲಿಸಿದೆ. ಉಳಿದ 74 ಕೊಲೆ, ನಾಪತ್ತೆ, ಸಾವು ಪ್ರಕರಣಗಳಿಗೆ ಪ್ರತ್ಯೇಕ ಎಫ್‌ಐಆರ್ ದಾಖಲಿಸಿಲ್ಲ ಎಂದು ಅರ್ಜಿಯಲ್ಲಿ ಉಲ್ಲೇಖಿಸಲಾಗಿತ್ತು. ಅವರ ಅರ್ಜಿಯನ್ನು ಹೈಕೋರ್ಟ್ ಮುಖ್ಯನ್ಯಾಯಮೂರ್ತಿ ವಲ್ಲೂರಿ ಕಾಮೇಶ್ವರ್ ರಾವ್ ಅವರ ಪೀಠವು ಆಲಿಸಿದೆ.

ನ್ಯಾಯಾಲಯದಲ್ಲಿ ಕುಸುಮಾವತಿ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ಎಸ್ ಬಾಲನ್, ಧರ್ಮಸ್ಥಳದ ಪೊಲೀಸ್ ಠಾಣಾ ವ್ಯಾಪ್ತಿಯೊಂದರಲ್ಲೇ 74 ಅಸಹಜ ಸಾವುಗಳು ನಡೆದಿರುವುದಾಗಿ ವರದಿಯಾಗಿದೆ.

ಈ ಪ್ರಕರಣಗಳ ತನಿಖೆ ಮಾಡಲೆಂದೇ ರಾಜ್ಯ ಸರ್ಕಾರ ಎಸ್‌ಐಟಿ ರಚಿಸಿದೆ. ಆದರೆ, ಎಸ್‌ಐಟಿ ಕೇವಲ ಒಂದು ಎಫ್‌ಐಆರ್ ದಾಖಲಿಸಿದೆ. ಉಳಿದ 74 ಕೊಲೆ, ನಾಪತ್ತೆ, ಸಾವು ಪ್ರಕರಣಗಳಿಗೆ ಪ್ರತ್ಯೇಕ ಎಫ್‌ಐಆರ್ ದಾಖಲಿಸಿಲ್ಲ. ಇದು ಸರಿಯಾದ ಕ್ರಮವಲ್ಲ ಎಂದು ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ.

ಅವರ ವಾದಕ್ಕೆ ಪ್ರತಿವಾದ ಮಂಡಿಸಿದ ಸರ್ಕಾರದ ಪರ ವಕೀಲರು, ಸರ್ಕಾರಕ್ಕೆ ಇನ್ನೂ ಪ್ರಕರಣದ ದಾಖಲೆಗಳನ್ನು ಸಲ್ಲಿಸಿಲ್ಲ. ದಾಖಲೆ ಇಲ್ಲದೇ ಸರ್ಕಾರ ಅಭಿಪ್ರಾಯ ಹೇಳಲು ಹೇಗೆ ಸಾಧ್ಯ? ಎಂದಿದ್ದಾರೆ. ವಾದ-ಪ್ರತಿವಾದ ಆಲಿಸಿದ ಪೀಠವು, ಪ್ರಕರಣ ಇರುವುದು 74 ಅಸಹಜ ಸಾವುಗಳಿಗೆ ಪ್ರತ್ಯೇಕ ಎಫ್‌ಐಆರ್ ದಾಖಲಿಸಿಲ್ಲ ಎಂಬುದರ ಕುರಿತು. ಸರ್ಕಾರವು ನ್ಯಾಯಾಲಯದಲ್ಲಿ ಲಭ್ಯವಿರುವ ದಾಖಲೆಯನ್ನೇ ಪಡೆದುಕೊಂಡು ಅಭಿಪ್ರಾಯ ಸಲ್ಲಿಸಬೇಕು ಎಂದು ಸೂಚಿಸಿದ್ದಾರೆ.

ಅರ್ಜಿ ವಿಚಾರಣೆಯನ್ನು ಫೆಬ್ರವರಿ 3ಕ್ಕೆ ಮುಂದೂಡಿದ್ದಾರೆ.

## ರಾಮಗೊಂಡನಹಳ್ಳಿಯಲ್ಲಿ ಅಯ್ಯಪ್ಪ ಸ್ವಾಮಿ ಮಹೋತ್ಸವ, ಪಲ್ಲಕ್ಕಿ ಮೆರವಣಿಗೆ




• ಉದಯವಾಹಿನಿ, ಬೆಂಗಳೂರು

ಶ್ರೀ ಅಯ್ಯಪ್ಪಸ್ವಾಮಿ ಸೇವಾ ಸಮಿತಿವತಿಯಿಂದ ನಗರದ ರಾಮಗೊಂಡನಹಳ್ಳಿಯಲ್ಲಿ 4ನೇ ವರ್ಷದ ಪ್ರಯುಕ್ತ ಶ್ರೀ ಅಯ್ಯಪ್ಪಸ್ವಾಮಿ ಪೂಜೆಯನ್ನು ಶ್ರೀ ಗುರುಸ್ವಾಮಿಗಳ ಸಮಕ್ಷಮದಲ್ಲಿ ನಡೆಸಲಾಯಿತು. ನೂತನವಾಗಿ ತಂದಿರುವ ದೇವರ ವಿಗ್ರಹ ಸಂಚಾರಿ ಪ್ರತಿಷ್ಠಾಪನೆ, ಗಣಪತಿ ಹೋಮ, ಸುಬ್ರಹ್ಮಣ್ಯ ಸ್ವಾಮಿ ಹೋಮ ಅಯ್ಯಪ್ಪ ಸ್ವಾಮಿ ಹೋಮ, ನವಗ್ರಹ ಹೋಮ, ಅಷ್ಟಮಂಗಳ ಹೋಮ, ದೇವರಿಗೆ ವಿಶೇಷ ಹೂವಿನ ಅಲಂಕಾರ, ಅಭಿಷೇಕ ಹಾಗೂ ತೀರ್ಥ ಪ್ರಸಾದ ವಿನಿಯೋಗ ಮಾಡಿದರು. ಸಂಜೆ ಶ್ರೀ ಆಯಪ್ಪಸ್ವಾಮಿ ಹೂವಿನ ಪಲ್ಲಕ್ಕಿಯ ಮೆರವಣಿಗೆ ಹಾಗೂ ಶ್ರೀ ಲಕ್ಕಿ ವೆಂಕಟೇಶ್ವರಸ್ವಾಮಿ, ಶ್ರೀ ಅಂಜನೇಯಸ್ವಾಮಿ ದೇವರುಗಳ ಮೆರವಣಿಗೆ ಸಹ ಮಾಡಲಾಯಿತು.

ಈ ವೇಳೆ ಭಕ್ತರು ದೇವರಿಗೆ ವಿಶೇಷ ಪೂಜೆ ಪ್ರಾರ್ಥನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಅಯ್ಯಪ್ಪ ಸ್ವಾಮಿ ಸೇವಾ ಸಮಿತಿ ಪದಾಧಿಕಾರಿಗಳು, ಗ್ರಾಮದ ಹಿರಿಯ ಮುಖಂಡರು, ಸುತ್ತಮುತ್ತಲಿನ ಅಯ್ಯಪ್ಪ ಸ್ವಾಮಿ ಭಕ್ತ ಭಾಗಿಯಾಗಿದ್ದರು.

## ಕದ್ದ ಗಡಿಯಾರವನ್ನು ವಾಟ್ಸಾಪ್ ಸ್ಟೇಟಸ್‌ಗೆ ಹಾಕಿ ಸಿಕ್ಕಿಬಿದ್ದ ಮನೆಗೆಲಸದಾಕೆ!

• ಉದಯವಾಹಿನಿ, ಬೆಂಗಳೂರು

ಮನೆ ಕೆಲಸದಾಕೆ ತಾನು ಕದ್ದ ಬ್ರ್ಯಾಂಡೆಡ್ ಗಡಿಯಾರ ಧರಿಸಿದ್ದ ಫೋಟೋವನ್ನು ವಾಟ್ಸಾಪ್ ಸ್ಟೇಟಸ್‌ಗೆ ಹಾಕಿದ್ದು, ಆಕೆ ಕೆಲಸ ಮಾಡುತ್ತಿದ್ದ ಮನೆ ಮಾಲೀಕರೊಬ್ಬರಿಗೆ ಅವರ ಕಾಣೆಯಾದ ಬೆಲೆಬಾಳುವ ವಸ್ತುಗಳನ್ನು ಪತ್ತೆಹಚ್ಚಲು ಸಹಾಯ ಮಾಡಿದೆ.

ಇದೀಗ ಗಡಿಯಾರ ಹಾಗೂ ಚಿನ್ನಾಭರಣ ಕದ್ದ ಮನೆ ಕೆಲಸದ ಮಹಿಳೆ, ದೊಡ್ಡ ಕನ್ನಹಳ್ಳಿ ನಿವಾಸಿ ಸೌಮ್ಯ (26) ಅವರನ್ನು ಬೆಳ್ಳಂದೂರು ಪೊಲೀಸರು ಬಂಧಿಸಿದ್ದಾರೆ. ಸರ್ಜಾಪುರ ರಸ್ತೆಯ ಅಪಾರ್ಟ್‌ಮೆಂಟ್‌ನಲ್ಲಿ ವಾಸಿಸುವ ಖಾಸಗಿ ಕಂಪನಿಯೊಂದರ ಉದ್ಯೋಗಿ, ರೋಹಿತ್ (39) ಅವರು ಜನವರಿ 5 ರಂದು ಈ ಸಂಬಂಧ ಪೊಲೀಸರಿಗೆ ದೂರು ದಾಖಲಿಸಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಡಿಸೆಂಬರ್ 8, 2025 ರಂದು, ಅವರ ಮನೆಯಿಂದ 42 ಗ್ರಾಂ ಚಿನ್ನದ ಮಂಗಳಸೂತ್ರ, ಒಂದು ಜೋಡಿ ಕೃತಕ ಕಿವಿಯೋಲೆಗಳು ಮತ್ತು ಮೈಕೆಲ್ ಕೋರ್ಸ್ ಬ್ರ್ಯಾಂಡೆಡ್ ಗಡಿಯಾರ ಕಾಣೆಯಾಗಿದೆ ಎಂದು ರೋಹಿತ್ ದೂರು ನೀಡಿದ್ದರು. ಸೌಮ್ಯಾಳನ್ನು ರೋಹಿತ್ ಕುಟುಂಬ ಪ್ರಶ್ನಿಸಿದಾಗ, ಅವರು ಯಾವುದೇ ವಸ್ತುಗಳನ್ನು ಕದ್ದಿಲ್ಲ ಎಂದು ಹೇಳಿ ಕೆಲಸಕ್ಕೆ ಬರುವುದನ್ನು ನಿಲ್ಲಿಸಿದ್ದರು. ಡಿಸೆಂಬರ್ 28 ರಂದು, ರೋಹಿತ್ ಆಕಸ್ಮಿಕವಾಗಿ ವಾಟ್ಸಾಪ್ ಪರಿಶೀಲಿಸುತ್ತಿದ್ದಾಗ, ಸೌಮ್ಯಾಳ ಅಪ್‌ಲೋಡ್ ಮಾಡಿದ್ದ ಸ್ಟೇಟಸ್ ಅನ್ನು ಗಮನಿಸಿದ್ದಾರೆ. ಅದರಲ್ಲಿ ಅವಳು ಮೈಕೆಲ್ ಕೋರ್ಸ್ ಗಡಿಯಾರ ಧರಿಸಿರುವುದು ಕಂಡುಬಂದಿದೆ. ಅದು ಅವರ ಮನೆಯಿಂದ ಕದ್ದ ಅದೇ ಗಡಿಯಾರ ಎಂದು ಅರಿತುಕೊಂಡ ರೋಹಿತ್, ಸ್ಕ್ರೀನ್‌ಶಾಟ್‌ಗಳ ಜೊತೆಗೆ ಸೌಮ್ಯಾ ವಿರುದ್ಧ ಪೊಲೀಸರಿಗೆ ದೂರು ನೀಡಿದ್ದಾರೆ. ಜನವರಿ 8 ರಂದು ಸೌಮ್ಯಾಳನ್ನು ವಶಕ್ಕೆ ಪಡೆದಿದ್ದು, ವಿಚಾರಣೆಯ ಸಮಯದಲ್ಲಿ ಅವಳು ಅಪರಾಧವನ್ನು ಒಪ್ಪಿಕೊಂಡಿದ್ದಾಳೆ. ಅಲ್ಲದೆ ಆಕೆಯಿಂದ ಕದ್ದ 4.5 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಮತ್ತು 20,000 ರೂ. ಗಡಿಯಾರವನ್ನು ವಶಪಡಿಸಿಕೊಳ್ಳಲಾಗಿದೆ.

## ಕಬ್ಬು, ಗೆಣಸು, ಅವರೆಕಾಯಿ ಖರೀದಿ ಜೋರು

• ಉದಯವಾಹಿನಿ, ಬೆಂಗಳೂರು

ಸಂಕ್ರಾಂತಿ ಹಬ್ಬದ ಆಚರಣೆಗೆ ನಗರ ಸಜ್ಜಾಗಿದೆ. ಇಲ್ಲಿನ ವಿವಿಧ ಮಾರುಕಟ್ಟೆಗಳಲ್ಲಿ ಸಂಕ್ರಾಂತಿ ಹಬ್ಬಕ್ಕಾಗಿ ಕಬ್ಬು, ಗೆಣಸು ಹಾಗೂ ಅವರೆಕಾಯಿ ಖರೀದಿ ಜೋರಾಗಿದೆ.ಸಂಕ್ರಾಂತಿ ಹಬ್ಬ ಗುರುವಾರವಿದ್ದು, ನಗರದ ಕೆ.ಆರ್.ಮಾರುಕಟ್ಟೆಯಲ್ಲಿ ರಾಶಿ, ರಾಶಿ ಕಬ್ಬಿನ ಜಲ್ಲೆ ಮಾರಾಟಕ್ಕಾಗಿ ಲಭ್ಯವಿದೆ. ಕಬ್ಬಿನ ಜಲ್ಲೆ ತಲಾ ರೂ.60ರಂತೆ ಮಾರಾಟ ಆಗುತ್ತಿದೆ. ನಗರದ ಪ್ರಮುಖ ಬಡಾವಣೆಗಳಲ್ಲೂ ಕಬ್ಬು, ಕಡಲೆ ಕಾಯಿ, ಅವರೆಕಾಯಿ, ಗೆಣಸು ರಾಶಿ ಹಾಕಲಾಗಿದ್ದು, ಮಾರುಕಟ್ಟೆ ಕಳೆಗಟ್ಟಿದೆ.

ಕಡಲೆಕಾಯಿ ಮತ್ತಷ್ಟು ತುಟ್ಟಿಯಾಗಿದೆ. ಗುಣಮಟ್ಟದ ಕಡಲೆಕಾಯಿ ಕೆ.ಜಿ.ಗೆ ರೂ.80 ಮತ್ತು ರೂ.120ರಂತೆ ಮಾರಾಟವಾಗುತ್ತಿದೆ. ಗಾಂಧಿ ಬಜಾರ್, ಮಲ್ಲೇಶ್ವರ, ಜಯನಗರ, ಯಶವಂತಪುರ, ರಾಜಾಜಿನಗರ, ಮಡಿವಾಳ, ಚಾಮರಾಜಪೇಟೆಯ ರಸ್ತೆ ಬದಿಯಲ್ಲಿ ಕಿರು ಮಾರುಕಟ್ಟೆಗಳು ಸೃಷ್ಟಿ ಆಗಿವೆ. ಎಳ್ಳು-ಬೆಲ್ಲ ಮಿಶ್ರಿತ ಪೊಟ್ಟಣಗಳು, ಸಕ್ಕರೆ ಹಾಗೂ ಬೆಲ್ಲದ ಅಚ್ಚುಗಳನ್ನು ಮಾರಾಟ ಮಾಡಲಾಗುತ್ತಿದೆ. ಎಳ್ಳು ಬೆಲ್ಲ ಮಿಶ್ರಿತ ಪೊಟ್ಟಣಗಳು ವಿವಿಧ ಗಾತ್ರಗಳಲ್ಲಿ ಲಭ್ಯ ಇವೆ. ಸಣ್ಣ ಪೊಟ್ಟಣದ ದರ ರೂ.50. ಮಳಿಗೆಗಳಲ್ಲಿ ಒಂದು ಕೆ.ಜಿ.ಯ ಎಳ್ಳು ಬೆಲ್ಲ ಮಿಶ್ರಿತ ಪೊಟ್ಟಣದ ದರ ರೂ.320ರಿಂದ ರೂ.350 ಇದೆ. ಅರ್ಧ ಕೆ.ಜಿ ಸಕ್ಕರೆ ಅಚ್ಚು ರೂ.150ರಂತೆ ಮಾರಾಟವಾಗುತ್ತಿದೆ.




ಸಂಕ್ರಾಂತಿ ಹಬ್ಬಕ್ಕೆ ಹೂವಿನ ದರ ಏರಿಕೆಯಾಗಿದೆ. ಒಂದು ಕೆ.ಜಿ. ಕನಕಾಂಬರ ರೂ.600, ಮಲ್ಲಿಗೆ ರೂ.1,800, ಚೆಂಡು ರೂ.60, ಸೇವಂತಿಗೆ ರೂ.150, ಗುಲಾಬಿ ರೂ.150 ಮತ್ತು ಸುಗಂಧ ರಾಜ ರೂ.80 ರಂತೆ ಮಾರಾಟವಾಗುತ್ತಿವೆ ಎಂದು ಕೆ.ಆರ್.ಮಾರುಕಟ್ಟೆಯ ಹೂವಿನ ವರ್ತಕ ಮಂಜುನಾಥ್ ತಿಳಿಸಿದರು.

## ರಾಜ್ಯದಲ್ಲಿ ಪಿಪಿಪಿ ವೈದ್ಯಕೀಯ ಕಾಲೇಜು ಕೈಬಿಟ್ಟ ಸರ್ಕಾರ

• ಉದಯವಾಹಿನಿ, ಬೆಂಗಳೂರು

ವಿರೋಧ ಪಕ್ಷಗಳು ಮತ್ತು ವಿವಿಧ ಸರ್ಕಾರೇತರ ಸಂಸ್ಥೆಗಳ ತೀವ್ರ ವಿರೋಧದ ನಂತರ, ರಾಜ್ಯ ಸರ್ಕಾರವು ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಡಿಯಲ್ಲಿ ಆಸ್ಪತ್ರೆ ಮತ್ತು ವೈದ್ಯಕೀಯ ಕಾಲೇಜುಗಳ ನಿರ್ಮಾಣ ಯೋಜನೆಯನ್ನು ಕೈಬಿಟ್ಟಿದೆ. ಆದಾಗ್ಯೂ ಹಾಗೂ ಸರ್ಕಾರವು ಅಜೀಂ ಪ್ರೇಮ್‌ಜಿ ಫೌಂಡೇಶನ್‌ಎಪಿಎಫ್ ಬೆಂಬಲದೊಂದಿಗೆ 1,000 ಹಾಸಿಗೆಗಳ ಆಸ್ಪತ್ರೆಯನ್ನು ನಿರ್ಮಿಸಲು ಬೆಂಗಳೂರು ಉತ್ತರದ ಕ್ಯಾಲಸನಹಳ್ಳಿಯಲ್ಲಿ 10 ಎಕರೆ ಭೂಮಿ ಮಂಜೂರು ಮಾಡಿದೆ.

ಗ್ರಾಮೀಣ ಪ್ರದೇಶಗಳಿಂದ ಬರುವ ರೋಗಿಗಳ ಅಗತ್ಯಗಳನ್ನು ಪೂರೈಸಲು ಇದು ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಾಗಲಿದೆ. ಒಟ್ಟು 1,000 ಕೋಟಿ ರೂ. ವೆಚ್ಚದ ಈ ಆಸ್ಪತ್ರೆಯ ನಿರ್ಮಾಣ ಕೆಲಸ ಶೀಘ್ರದಲ್ಲೇ ಪ್ರಾರಂಭವಾಗಲಿದೆ ಮತ್ತು ಪ್ರತಿಷ್ಠಾನವು ಪ್ರತಿವರ್ಷ ನಿರ್ವಹಣೆಗಾಗಿ 350 ಕೋಟಿ ರೂ.ಗಳನ್ನು ಖರ್ಚು ಮಾಡುತ್ತದೆ. ಇದನ್ನು 99 ವರ್ಷಗಳ ಗುತ್ತಿಗೆಯಲ್ಲಿ ನೀಡಲಾಗುತ್ತಿದೆ ಎಂದು ವೈದ್ಯಕೀಯ




ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ಅವರು ತಿಳಿಸಿದ್ದಾರೆ. ಅಂಗಾಂಗ ಕಸಿ ಪ್ರಕರಣಗಳ ಹೆಚ್ಚಳ,ಚಿಕಿತ್ಸೆಯ ವೆಚ್ಚ ಹೆಚ್ಚುತ್ತಿರುವುದರಿಂದ. ಬಡವರು ಅದನ್ನು ಖರ್ಚು ಭರಿಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ, ಈ ಆಸ್ಪತ್ರೆಯು ಅಂತಹ ದುಬಾರಿ ಆರೋಗ್ಯ ಸೇವೆಗಳನ್ನು ಅತ್ಯಂತ ಕಡಿಮೆ ವೆಚ್ಚದಲ್ಲಿ ಅಥವಾ ಉಚಿತವಾಗಿ ಪೂರೈಸುತ್ತದೆ ಎಂದಿದ್ದಾರೆ.

ಇದರಲ್ಲಿ ಸರ್ಕಾರದ ಯಾವುದೇ ಪಾತ್ರವಿರುವುದಿಲ್ಲ ಅಥವಾ ಅದು ಕನಿಷ್ಠ ಪಾತ್ರ ಇರುತ್ತದೆ ಮತ್ತು ಆಸ್ಪತ್ರೆಯನ್ನು ನಡೆಸಲು ಎಪಿಎಫ್‌ಗೆ ಸಂಪೂರ್ಣ ಸ್ವಾತಂತ್ರ್ಯವನ್ನು ನೀಡಲಾಗುತ್ತದೆ. ವೈದ್ಯಕೀಯ ಶಿಕ್ಷಣ ಸಚಿವರು, ಪ್ರಧಾನ ಕಾರ್ಯದರ್ಶಿ ಮತ್ತು ಇಲಾಖೆಯ ನಿರ್ದೇಶಕರು ಮಾತ್ರ ಈ ಆಸ್ಪತ್ರೆಯ ಆಡಳಿತ ಮಂಡಳಿಯ ಸದಸ್ಯರಾಗಿರುತ್ತಾರೆ ಎಂದು ಅವರು ವಿವರಿಸಿದ್ದಾರೆ. ಇತ್ತೀಚೆಗೆ, ವಿಜಯಪುರ, ತುಮಕೂರು ಮತ್ತು ಕೋಲಾರದಲ್ಲಿ ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ನಿರ್ಧರಿಸಿತ್ತು. ಆದರೆ ಇದಕ್ಕೆ ಪ್ರತಿಪಕ್ಷಗಳಿಂದ ತೀವ್ರ ವಿರೋಧ ವ್ಯಕ್ತವಾಗಿತ್ತು.

> **ಜಯದೇವ ಮತ್ತು ಕಿದ್ವಾಯಿ ಆಸ್ಪತ್ರೆ ಮಾದರಿಯಂತೆಯೇ, ಈ ಆಸ್ಪತ್ರೆಯು ಶೇ 70 ರಷ್ಟು ಸೇವೆಗಳನ್ನು ಉಚಿತವಾಗಿ ಒದಗಿಸುತ್ತದೆ ಮತ್ತು ಉಳಿದ ಶೇ. 30 ರಷ್ಟು ಸೇವೆಗಳನ್ನು ಕನಿಷ್ಠ ಶುಲ್ಕಗಳನ್ನು ಆಧರಿಸಿರುತ್ತದೆ. ಇದರಲ್ಲಿ ವಿವಿಧ ಸರ್ಕಾರಿ ಯೋಜನೆಗಳ ಅಡಿಯಲ್ಲಿ ಪರಿಹಾರ, ವಿಮಾ ಸೇವೆಗಳ ಮೂಲಕ ಮರುಪಾವತಿ ಸೇರಿವೆ ಎಂದು ಸಚಿವರು ತಿಳಿಸಿದ್ದಾರೆ.**

## ದರೋಡೆ ಪ್ರಕರಣ: ಮೂವರ ಸೆರೆ

• ಉದಯವಾಹಿನಿ, ಬೆಂಗಳೂರು

ದರೋಡೆ ಪ್ರಕರಣಗಳಲ್ಲಿ ಭಾಗಿಯಾಗಿದ್ದ ಮೂವರನ್ನು ಕೆಂಗೇರಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಸುರೇಶ್ ಅಲಿಯಾಸ್ ಸೂರಿ, ಶಶಿಕುಮಾರ್ ಮತ್ತು ಅಖಿಲ್ ಬಂಧಿತರು. ಡಿ.31ರಂದು ವ್ಯಕ್ತಿ ಯೊಬ್ಬರನ್ನು ಆರೋಪಿಗಳು ಅಡ್ಡಗಟ್ಟಿ ಮಾರಕಾಸ್ತ್ರಗಳಿಂದ ಬೆದರಿಸಿ ರೂ.1 ಲಕ್ಷ ದೋಚಿ ಪರಾರಿಯಾಗಿದ್ದರು. ಹಣ ಕಳೆದುಕೊಂಡವರು ನೀಡಿದ ದೂರು ಆಧರಿಸಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ಹೇಳಿದರು.

ಬಂಧಿತರು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಹಾಗೂ ನಗರದೊಳಗೆ ರಾತ್ರಿ ವೇಳೆ ವಾಹನ ಸವಾರರನ್ನು ಅಡ್ಡಗಟ್ಟಿ ದರೋಡೆ ನಡೆಸುತ್ತಿದ್ದರು. ಸೂರ್ಯಸಿಟಿ, ಮಾದನಾಯಕನಹಳ್ಳಿ, ಹೆಬ್ಬಗೋಡಿ, ಬ್ಯಾಡರಹಳ್ಳಿ ಸೇರಿದಂತೆ ಹಲವು ಠಾಣೆಗಳ ವ್ಯಾಪ್ತಿಯಲ್ಲಿ ದರೋಡೆ ಮಾಡಿದ್ದರು. ಬ್ಯಾಡರಹಳ್ಳಿಯಲ್ಲಿ ಲಾರಿ ಚಾಲಕನಿಂದ ಹಾಗೂ ಮಾದನಾಯಕನಹಳ್ಳಿಯಲ್ಲಿ ವಕೀಲರಿಂದ ಹಣ ಸುಲಿಗೆ ಮಾಡಿದ್ದರು ಎಂಬುದು ತನಿಖೆಯಿಂದ ಗೊತ್ತಾಗಿದೆ. 2025ರ ಸೆಪ್ಟೆಂಬರ್‌ನಲ್ಲಿ ಮೂವರು ಬ್ಯಾಡರಹಳ್ಳಿ ಪೊಲೀಸರು ಬಂಧಿಸಿ ಜೈಲಿಗೆ ಕಳುಹಿಸಿದ್ದರು. ನಂತರ, ಜಾಮೀನಿನ ಮೇಲೆ ಬಿಡುಗಡೆಯಾಗಿದ್ದ ಆರೋಪಿಗಳು, ಮತ್ತೆ ಅದೇ ಕೃತ್ಯಕ್ಕೆ ಇಳಿದಿದ್ದರು.

# ಹೊರ ವಲಯದ ಕಗ್ಗಲೀಪುರದ ಬಳಿ ಸರಕಾರಿ ಜಮೀನು ಒತ್ತುವರಿ ಆರೋಪ

## ಬಿಎಂಟಿಎಫ್‌ಗೆ ಜನವರಿ 21ರವರೆಗೆ ಯಾವುದೇ ಕ್ರಮ ಕೈಗೊಳ್ಳದಂತೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಹೊರ ವಲಯದ ಕಗ್ಗಲೀಪುರದ ಬಳಿ ಸರಕಾರಿ ಜಮೀನು ಮತ್ತು ಕೆರೆ ಒತ್ತುವರಿ ಆರೋಪ ಪ್ರಕರಣ ಸಂಬಂಧ ಆರ್ಟ್ ಆಫ್ ಲಿವಿಂಗ್‌ನ ಶ್ರೀ ಶ್ರೀ ರವಿಶಂಕರ್ ಗುರೂಜಿಗೆ ಹೈಕೋರ್ಟ್ ತಾತ್ಕಾಲಿಕ ರಿಲೀಫ್ ನೀಡಿದೆ. ಬಿಎಂಟಿಎಫ್ ದಾಖಲಿಸಿರುವ ಪ್ರಕರಣದ ಎಫ್‌ಐಆರ್ ಪ್ರಶ್ನಿಸಿ ರವಿಶಂಕರ್ ಗುಧಿರೂಜಿ ಸಲ್ಲಿಸಿದ್ದ ಅರ್ಜಿ ಕುಧಿರಿತು ನ್ಯಾ. ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ಬಳಿಕ ಜನವರಿ 21 ರವರೆಗೆ ಕ್ರಮ ಕೈಗೊಳ್ಳದಂತೆ ಬಿಎಂಟಿಎಫ್‌ಗೆ ಸೂಚನೆ ನೀಡಿದೆ. ಅಲ್ಲದೇ, ಅರ್ಜಿದಾರರ ವಿರುದ್ಧ ದಾಖಲೆಗಳಿದ್ದರೆ ಹಾಜರುಪಡಿಸಲು ಎಸ್‌ಪಿಪಿಗೆ ಸೂಚನೆ ನೀಡಿ ವಿಚಾರಣೆಯನ್ನು ಜನವರಿ 21ಕ್ಕೆ ಮುಂದೂಡಿತು.

**ವಕೀಲರ ಪರ ವಾದ ಏನು?:** ಇದಕ್ಕೂ ಮುನ್ನ ಅರ್ಜಿದಾರರ ಪರವಾದ ಮಂಡಿಸಿದ ವಕೀಲ ಪಿ.ಪ್ರಸನ್ನ ಕುಮಾರ್, ಅರ್ಜಿದಾರರ ವಿರುದ್ಧ ಬೆಂಗಳೂರು ದಕ್ಷಿಣ




ತಾಲ್ಲೂಕಿನ ಉತ್ತರಹಳ್ಳಿ ಹೋಬಳಿಯ ಕಗ್ಗಲೀಪುರ ಗ್ರಾಮದ ಸರ್ವೇ ನಂಬರ್ 46, 135, 137, 150, 160, 164/1 ಮತ್ತು 164/2ರಲ್ಲಿನ ಹಲವೆಡೆ ಸರಕಾರಿ ಜಮೀನು, ಕೆರೆ ಮತ್ತು ರಾಜಕಾಲುವೆ ಒತ್ತುವರಿ ಮಾಡಿರುವ ಸುಳ್ಳು ಆರೋಪ ಹೊರಿಸಲಾಗಿದೆ. ವಾಸ್ತವದಲ್ಲಿಒತ್ತುವರಿ ಮಾಡಲಾಗಿದೆ ಎಂಬ ಜಮೀನುಗಳ ಮಾಲೀಕತ್ವಕ್ಕೂ ಮತ್ತು ಅರ್ಜಿದಾರರಿಗೂ ಯಾವುದೇ ಸಂಬಂಧವಿಲ್ಲ. ಒತ್ತುವರಿ ಕಾಲಂನಲ್ಲೂ ಅವರ ಹೆಸರಿಲ್ಲ. ಪೊಲೀಸರು ಅರ್ಜಿದಾರರ ಜತೆಗೆ ಇತರ ನಾಲ್ವರು ಭೂಮಾಲೀಕರಿಗೆ ನೋಟಿಸ್ ನೀಡಿದ್ದಾರೆ.

ಆದರೆ, ಶ್ರೀಗಳಿಗೆ ಯಾವುದೇ ನೋಟಿಸ್ ನೀಡಿಲ್ಲ ಎಂದರು. ಅಲ್ಲದೆ, ಇದೇ ಆರೋಪಕ್ಕೆ ಸಂಬಂಧಿಸಿದಂತೆ ಈ ಹಿಂದೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ದಾಖಲಿಸಲಾಗಿತ್ತು. ಅದರಲ್ಲಿಶ್ರೀಗಧಿಳನ್ನೂ ಪ್ರತಿವಾದಿಗಳನ್ನಾಗಿ ಮಾಡಲಾಗಿತ್ತು. ಅಂತಿಮವಾಗಿ ತಹಶೀಲ್ದಾರ್ ನೀಡಿದ್ದ ವರದಿಯಲ್ಲಿಅರ್ಜಿದಾರರ ವಿರುದ್ಧ ಯಾವುದೇ ಸರಕಾರಿ ಜಮೀನು ಒತ್ತುವರಿ ಆರೋಪ ಇರಲಿಲ್ಲ. ಆದರೆ, ಪಿಐಎಲ್ ವಿಲೇವಾರಿ ನಂತರವೂ ಶ್ರೀ ವಿರುದ್ಧ ಎಫ್‌ಐಆರ್ ದಾಖಲಿಸಿ ಮಾನಸಿಕ ತೊಂದರೆ ನೀಡಲಾಗುತ್ತಿದೆ. ಹಾಗಾಗಿ, ಕರ್ನಾಟಕ ಭೂ ಕಂದಾಯ ಕಾಯಿದೆ- 1964ರ ಕಲಂ 192 'ಎ' ಅಡಿ ದಾಖಲಿಸಿರುವ ಎಫ್‌ಐಆರ್ ರದ್ದುಪಡಿಸಬೇಕು' ಎಂದು ಕೋರಿದರು.

### ಸ್ವಲ್ಪ ಸಮಯ ನೀಡಿದರೆ ದಾಖಲೆ

**ಪ್ರತಿಕ್ರಿಯಿಸಿದ ಎಸ್‌ಪಿಪಿ ಬಿ.ಎ.ಬೆಳ್ಳಿಯಪ್ಪ, ಗುರೂಜಿ ಆರ್ಟ್ ಆಫ್ ಲಿವಿಂಗ್‌ನ ಸ್ಥಾಪಕರು ಹಾಗಾಗಿ ಅವರ ಹೆಸರನ್ನು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದೆ. ನ್ಯಾಯಾಲಯ ಸ್ವಲ್ಪ ಸಮಯ ನೀಡಿದರೆ ದಾಖಲೆಗಳನ್ನು ಒದಗಿಸಲಾಗುವುದು ಎಂದು ಹೇಳಿದರು. ಕಳೆದ ವಿಚಾರಣೆ ವೇಳೆ ನ್ಯಾಯಾಲಯ, ಒತ್ತುವರಿ ತೆರವಿಗೆ ಕ್ರಮ ಕೈಗೊಳ್ಳಲು ಪಿಐಎಲ್ ವಿಚಾರಣೆ ವೇಳೆ ವಿಭಾಗೀಯ ಪೀಠ ಆದೇಶಿಸಿದೆ. ಇದೀಗ ತಡೆ ನೀಡಿದರೆ ಅದಕ್ಕೆ ವ್ಯತಿರಿಕ್ತ ಆದೇಶ ಮಾಡಿದಂತಾಗುತ್ತದೆ. ಹಾಗಾಗಿ, ದಾಖಲೆಗಳನ್ನು ಸಂಪೂರ್ಣವಾಗಿ ಪರಿಶೀಲನೆ ನಡೆಸದೆ ಈ ಹಂತದಲ್ಲಿ ತನಿಖೆಗೆ ತಡೆಯಾಜ್ಞೆ ನೀಡುವುದು ಸೂಕ್ತವಲ್ಲ,ಎಂದು ಅಭಿಪ್ರಾಯಪಟ್ಟಿತು.**

# ಶಾಲಾ ಬಸ್ ಉರುಳಿ 17 ಮಕ್ಕಳಿಗೆ ಗಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಮಾಲೂರು

ತಾಲ್ಲೂಕಿನ ಆರಲೇರಿಗೇಟ್ಟ ಗ್ರಾಮದ ಬಳಿ ಬೆಳಗ್ಗೆ ಖಾಸಗಿ ಶಾಲಾ ಬಸ್ ಮಗುಚಿ ಬಿದ್ದು 17 ಮಕ್ಕಳಿಗೆ ಗಾಯಗಳಾಗಿವೆ. ಈ ಪೈಕಿ ಐವರು ಮಕ್ಕಳ ತಲೆಗೆ ಪೆಟ್ಟು ಬಿದ್ದಿದೆ. ಕುಡಿಯನೂರು ಗ್ರಾಮದ ಸಮೀಪದ ಬೋಸ್ ವಿದ್ಯಾ ಸಂಸ್ಥೆಗೆ ಮಾಸ್ತಿಯಿಂದ ಮಕ್ಕಳನ್ನು ಕರೆತರುತ್ತಿದ್ದ ವಾಹನ ರಸ್ತೆ ತಿರುವಿನಲ್ಲಿ ಚಾಲಕನ ನಿಯಂತ್ರಣ ಕಳೆದುಕೊಂಡು ಬದಿಗೆ ಉರುಳಿದೆ. ವಾಹನದಲ್ಲಿ ಸುಮಾರು 25 ಮಕ್ಕಳು ಇದ್ದರು. ತಲೆಗೆ ಪೆಟ್ಟುಬಿದ್ದು ಗಾಯಗೊಂಡಿರುವ ಅರ್ಮಾನ್, ಜೀವಿತ, ಸುದರ್ಶನ್, ಸಾಯಿ ಹಾಗೂ ಗಗನ್ ಎಂಬ ಮಕ್ಕಳನ್ನು ಸ್ಥಳೀಯರ ನೆರವಿನಿಂದ ಮಾಲೂರು ನಗರದ ಸರ್ಕಾರಿ ಆಸ್ಪತ್ರೆಯಲ್ಲಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿ, ಕೋಲಾರದ ಜಿಲ್ಲಾ ಆಸ್ಪತ್ರೆ ಕಳಿಸಲಾಯಿತು. ಬಸ್ ಹಿಂದೆ ವಾಹನದಲ್ಲಿ ಬರುತ್ತಿದ್ದ ಸುರೇಂದ್ರ ರೆಡ್ಡಿ ಎಂಬುವರು ನಾಲ್ಕೈದು ಮಕ್ಕಳನ್ನು ತಮ್ಮ ವಾಹನದಲ್ಲಿ ಕರೆದೊಯ್ದು ಮಾಲೂರು ನಗರದ ಸರ್ಕಾರಿ ಆಸ್ಪತ್ರೆಗೆ ದಾಖಲಿಸಿದ್ದಾರೆ. ಇದರಿಂದ ಮಕ್ಕಳಿಗೆ ಸಕಾಲಕ್ಕೆ ಚಿಕಿತ್ಸೆ ದೊರಕಲು ಅನುಕೂಲವಾಯಿತು ಎಂದು ಪೋಷಕರು ಹೇಳಿದರು. ಸರ್ಕಾರಿ ಆಸ್ಪತ್ರೆಯ ಡಾ.ಶ್ರೀನಿವಾಸ್, ಡಾ.ಮಂಜುನಾಥ್, ಡಾ.ಸಂಗೀತಾ ಮಕ್ಕಳಿಗೆ ಚಿಕಿತ್ಸೆ ನೀಡಿದರು. ಎಲ್ಲಾ ಮಕ್ಕಳು ಅಪಾಯದಿಂದ ಪಾರಾಗಿದ್ದಾರೆ.

ಸಚಿವ ಜಮೀರ್ ಅಹಮದ್ ಖಾನ್ ಪುತ್ರ ಝೈದ್ ಖಾನ್ ಅಭಿನಯದ 'ಕಲ್ಟ್' ಸಿನಿಮಾ

# ಪೌರಾಯುಕ್ತೆ ಅಮೃತಾ ಗೌಡಗೆ ನಿಂದನೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಸಚಿವ ಜಮೀರ್ ಅಹಮದ್ ಖಾನ್ ಪುತ್ರ ಝೈದ್ ಖಾನ್ ಅಭಿನಯದ 'ಕಲ್ಟ್' ಸಿನಿಮಾದ ಪ್ರಚಾರ ಫ್ಲೆಕ್ಸ್‌ಗಳನ್ನು ತೆರವುಗೊಳಿಸಿದ ವಿಚಾರ ಅಧಿಕಾರಿಗಳ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಕೆಪಿಸಿಸಿ ಸಂಯೋಜಕ ರಾಜೀವ್ ಗೌಡ, ಶಿಡ್ಲಘಟ್ಟ ನಗರಸಭೆ ಪೌರಾಯುಕ್ತೆ ಜಿ. ಅಮೃತಗೌಡ ಅವರಿಗೆ ಬೆದರಿಕೆ ಹಾಕಿದ್ದಾರೆ. ಬೆದರಿಕೆ ಮಾತ್ರವಲ್ಲ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಈ ಘಟನೆ ಕುರಿತ ಆಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಅಧಿಕಾರಿಗಳ ವಲಯದಲ್ಲಿ ಆಕ್ರೋಶ ಮೂಡಿಸಿದೆ. ಜೊತೆಗೆ ಸಾರ್ವಜನಿಕರೂ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಫ್ಲೆಕ್ಸ್ ತೆರವುಗೊಳಿಸಿದಕ್ಕೆ ರಾಜೀವ್ ಗೌಡ ತೀವ್ರ ಆಕ್ರೋಶಗೊಂಡು ಪೌರಾಯುಕ್ತರಿಗೆ ಕರೆ ಮಾಡಿ ಜಗಳವಾಡಿದ್ದಾರೆ. ಬಾಯಿಗೆ ಬಂದ ಹಾಗೆ ಮಾತನಾಡಿದ್ದಾರೆ. ನಮ್ಮ ಬ್ಯಾನರ್ ಬಿಚ್ಚಿಸಿದರೆ ಬೆಂಕಿ ಹಚ್ಚಿಸುವೆ. ನನ್ನ ಒಳ್ಳೆಯತನ ನೋಡಿದ್ದೀರಿ, ಕೆಟ್ಟತನ ನೋಡಿಲ್ಲ ಎಂದು ಹರಿಹಾಯ್ದಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಪೌರಾಯುಕ್ತ ಅಮೃತಗೌಡ, ರಸ್ತೆಯಲ್ಲಿ ಕಟ್ಟಿದ್ದಾರೆ. ಸಾರ್ವಜನಿಕರಿಂದ ದೂರು ಬಂದಿದೆ. ಅನುಮತಿ ಪಡೆಯದೆ ಬ್ಯಾನರ್ ಕಟ್ಟಿದ್ದಾರೆ. ಅಪಘಾತ ಆದರೆ ನಾವು ಹೊಣೆ. ಹಾಗಾಗಿ ತೆರವುಗೊಳಿಸಿದ್ದೇವೆ ಎಂದು ಸ್ಪಷ್ಟನೆ ನೀಡಿದ್ದಾರೆ.

**ಸಿನಿಮಾದ ಪ್ರಚಾರ ಫ್ಲೆಕ್ಸ್‌ಗಳ ತೆರವು**

**ರಾಜೀವ್ ಗೌಡ ಧಮ್ಕಿ:** ಆಗ ರಾಜೀವ್ ಗೌಡ ಮತ್ತಷ್ಟು ಕೋಪಗೊಂಡು, ಬೆಂಕಿ ಹಚ್ಚಿಸುವೆ, ಚಪ್ಪಲಿಯಲ್ಲಿ ಹೊಡೆಸುವೆ, ....ಮಗ... ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ.


ಉದಯವಾಹಿನಿ ಚಿತ್ರ

**ರಸ್ತೆಗೆ ಅಡ್ಡವಾಗಿ 'ಕಲ್ಟ್' ಫ್ಲೆಕ್ಸ್‌ಗಳು**

**ಇತ್ತೀಚೆಗೆ ಶಿಡ್ಲಘಟ್ಟದ ನೆಹರೂ ಮೈದಾನದಲ್ಲಿ 'ಕಲ್ಟ್' ಸಿನಿಮಾದ ಪ್ರಚಾರ ಸಭೆ ನಡೆದಿತ್ತು. ಈ ವೇಳೆ, ಕೋಟೆ ವೃತ್ತದಲ್ಲಿ ರಸ್ತೆಗೆ ಅಡ್ಡವಾಗಿ ಸಿನಿಮಾ ಪ್ರಚಾರದ ಫ್ಲೆಕ್ಸ್‌ಗಳನ್ನು ಅಳವಡಿಸಲಾಗಿತ್ತು. ಇದರಿಂದ ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು. ಟ್ರಾಫಿಕ್ ಸಮಸ್ಯೆಗೆ ಉಂಟಾಯಿತು. ಸಾರ್ವಜನಿಕರಿಂದ ದೂರು ಬಂದ ಹಿನ್ನೆಲೆಯಲ್ಲಿ ನಗರಸಭೆ ಸಿಬ್ಬಂದಿ ಫ್ಲೆಕ್ಸ್‌ಗಳನ್ನು ತೆರವುಗೊಳಿಸಿ ಕಚೇರಿಗೆ ತಂದಿಟ್ಟಿದ್ದರು. ಈ ಬಗ್ಗೆ ನಗರಸಭೆ ಮಾಜಿ ಅಧ್ಯಕ್ಷ ಹಾಗೂ ರಾಜೀವ್ ಗೌಡರ ಬೆಂಬಲಿಗ ಅಪ್ಸರ್‌ಗೆ ಪೌರಾಯುಕ್ತರು ಮಾಹಿತಿ ನೀಡಿದ್ದರು.**

**ಅಧಿಕಾರಿಗಳ ವಲಯದಲ್ಲಿ ಆಕ್ರೋಶ**

**ಚಿಕ್ಕಬಳ್ಳಾಪುರದಲ್ಲಿ ಸಚಿವ ಜಮೀರ್ ಅಹಮದ್ ಖಾನ್ ಪುತ್ರ, ಝೈದ್ ಖಾನ್ ಅಭಿನಯದ 'ಕಲ್ಟ್' ಸಿನಿಮಾದ ಪ್ರಚಾರ ಫ್ಲೆಕ್ಸ್‌ಗಳನ್ನು ತೆರವುಗೊಳಿಸಿದಕ್ಕೆ ಕೆಪಿಸಿಸಿ ಸಂಯೋಜಕ ರಾಜೀವ್ ಗೌಡ, ಶಿಡ್ಲಘಟ್ಟ ನಗರಸಭೆ ಪೌರಾಯುಕ್ತೆ ಜಿ. ಅಮೃತಾಗೌಡ ಅವರಿಗೆ ಬೆದರಿಕೆ ಹಾಕಿ, ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಈ ಘಟನೆ ಅಧಿಕಾರಿಗಳ ವಲಯದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ.**

ಅಲ್ಲದೆ, ಶಿಡ್ಲಘಟ್ಟದ ಜೆಡಿಎಸ್ ಶಾಸಕ ಬಿ.ಎನ್.ರವಿಕುಮಾರ್ ಅವರನ್ನೂ ನಿಂದಿಸಿದ್ದಾರೆ. ಈ ಆಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕವಾಗಿ ಹರಿದಾಡುತ್ತಿವೆ.

ರಾಜೀವ್ ಗೌಡ 2023ರ ವಿಧಾನಸಭೆ ಚುನಾವಣೆಯಲ್ಲಿ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದಿಂದ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಪರ್ಧಿಸಿದ್ದರು. ಅವರ ಪತ್ನಿ ಶಿಡ್ಲಘಟ್ಟ ಬ್ಯಾಂಕ್ ಕಾಂಗ್ರೆಸ್ ಅಧ್ಯಕ್ಷರಾಗಿದ್ದಾರೆ. ಈ ಘಟನೆ ಅಧಿಕಾರಿಗಳ ಕಾರ್ಯವೈಖರಿಗೆ ಅಡ್ಡಿಪಡಿಸುವ ಮತ್ತು ಬೆದರಿಕೆ ಹಾಕುವ ಪ್ರವೃತ್ತಿಯನ್ನು ತೋರಿಸುತ್ತದೆ ಎಂದು ಹಲವರು ಅಭಿಪ್ರಾಯಪಟ್ಟಿದ್ದಾರೆ.

ಧಮ್ಕಿ ಆಡಿಯೋ ವೈರಲ್ ಆಗಿ, ಆಕ್ರೋಶ ವ್ಯಕ್ತವಾಗುತ್ತಿದ್ದ ಹಾಗೆ, ಘಟನೆಯ ಬಗ್ಗೆ ವಿಷಾದ ವ್ಯಕ್ತಪಡಿಸಿದ ರಾಜೀವ್ ಗೌಡ, ಪೌರಾಯುಕ್ತೆಯವರ ಕ್ಷಮೆಯನ್ನಾಚಿಸಿದ್ದಾರೆ.



## ಕೊಡಲಿಯಿಂದ ಕೊಚ್ಚಿ ವ್ಯಕ್ತಿ ಕೊಲೆ

• ಉದಯವಾಹಿನಿ, ಶಿರಾ

ತಾಲ್ಲೂಕಿನ ಮಾರನಗೆರೆ ಗ್ರಾಮದಲ್ಲಿ ರಾತ್ರಿ ನಿತಿನ್ ತುಳಸಿರಾಮ್ (40) ಎಂಬುವವರನ್ನು ಕೊಡಲಿಯಿಂದ ಕೊಚ್ಚಿ ಕೊಲೆ ಮಾಡಲಾಗಿದೆ. ನಿತಿನ್ ತುಳಸಿರಾಮ್ ಪತ್ನಿ ಯಶೋದ ಅವರ ಮೊದಲ ಗಂಡನ ಮಗ ಹರೀಶ್ ಕೊಲೆ ಮಾಡಿದ ಆರೋಪಿ. ಮಹಾರಾಷ್ಟ್ರದಿಂದ ಬಂದು ಶಿರಾ ತಾಲ್ಲೂಕಿನ ಮಾರನಗೆರೆ ಗ್ರಾಮದಲ್ಲಿ 3 ವರ್ಷದಿಂದ ಇದ್ದರು. ಸುಡುವ ಕೆಲಸ ಮಾಡಿಕೊಂಡಿದ್ದರು. ನಿತಿನ್ ತುಳಸಿರಾಮ್ ಅವರು ಯಶೋದ ಅವರನ್ನು ಎರಡನೇ ಮದುವೆ ಮಾಡಿಕೊಂಡಿದ್ದರು. ಯಶೋದಗೆ ಸಹ ಇದು ಎರಡನೇ ಮದುವೆಯಾಗಿದ್ದು, ಮೊದಲ ಗಂಡ ರಾಮ್ ವಸಂತ್ ನಾಯ್ಕ ಎಂಬುವವರಿಂದ ನರೇಶ್ ಮತ್ತು ಹರೀಶ ಎಂಬ ಇಬ್ಬರು ಮಕ್ಕಳಿದ್ದಾರೆ. ಮಾರನಗೆರೆ ಗ್ರಾಮದಲ್ಲಿ ಶೆಡ್ ಹಾಕಿಕೊಂಡು ವಾಸವಾಗಿದ್ದು ಮಂಗಳವಾರ ರಾತ್ರಿ ನಿತಿನ್ ತುಳಸಿರಾಮ್ ಮತ್ತು ಯಶೋದ ನಡುವೆ ಜಗಳ ನಡೆದಿದೆ. ಆ ಸಮಯದಲ್ಲಿ ಹರೀಶ್ ಕೊಡಲಿಯಿಂದ ಹಲ್ಲೆ ಮಾಡಿ, ಕೊಲೆ ಮಾಡಿದ್ದಾನೆ. ತಾವರೆಕೆರೆ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

## ಅಪಘಾತ; ಇಬ್ಬರು ಯುವಕರು ಸಾವು

• ಉದಯವಾಹಿನಿ, ಶ್ರೀನಿವಾಸಪುರ

ತಾಲ್ಲೂಕಿನ ಕೂಸ್ಪಂದ್ರ ಕ್ರಾಸ್‌ನಲ್ಲಿ ರಾತ್ರಿ ಚಿಂತಾಮಣಿ ಡಿಪೊದ ಕೆಎಸ್ ಆರ್‌ಟಿಸಿ ಬಸ್ ಹಾಗೂ ಬೈಕ್ ನಡುವಿನ ಅಪಘಾತದಲ್ಲಿ ಸವಾರರಿಬ್ಬರು ಮೃತಪಟ್ಟಿದ್ದಾರೆ. ನಾಗರಾಜ್ (26), ಚಂದ್ರಶೇಖರ್ (24) ಮೃತ ಸವಾರರು. 26 ವರ್ಷದ ಶ್ರೀನಿವಾಸ್ ಎಂಬುವರು ತೀವ್ರವಾಗಿ ಗಾಯಗೊಂಡಿದ್ದಾರೆ. ಅವರನ್ನು ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ. ದ್ವಿಚಕ್ರ ವಾಹನ ಸವಾರರು ಗುಲ್ಲು ಕುಂಟೆಯಿಂದ ಗಂಗನಗಾರಿಪಲ್ಲಿಗೆ ಹೋಗುತ್ತಿದ್ದ ವೇಳೆ ಈ ಘಟನೆ ನಡೆದಿದೆ. ಹಿಬಂದಿಯಿಂದ ಡಿಕ್ಕಿಯಾಗಿದೆ ಎಂಬುದು ಗೊತ್ತಾಗಿದೆ. ಸ್ಥಳಕ್ಕೆ ಗೋನಿಪಲ್ಲಿ ಪೊಲೀಸ್ ಠಾಣೆಯ ಸರ್ಕಲ್ ಇನ್ಸ್‌ಪೆಕ್ಟರ್ ಶಿವಕುಮಾರ್, ಎಸ್ಐ ಶ್ರೀನಿವಾಸಗೌಡ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಂಡ್ಯ ಸರ್ಕಾರಿ ಜಮೀನು ಕಬಳಿಕೆ: ನಾಲ್ವರು ಸರ್ಕಾರಿ ನೌಕರರ ಅಮಾನತು

• ಉದಯವಾಹಿನಿ, ಮಂಡ್ಯ

ನಾಗಮಂಗಲ ತಾಲ್ಲೂಕು ಕಚೇರಿಯಲ್ಲಿ ಸರ್ಕಾರಿ ದಾಖಲೆಗಳನ್ನು ಅಕ್ರಮವಾಗಿ ತಿದ್ದಿರುವ ಮತ್ತು ಸೃಷ್ಟಿಸಿರುವ ಆರೋಪದ ಮೇರೆಗೆ ನಾಲ್ವರು ಸರ್ಕಾರಿ ನೌಕರರನ್ನು ಅಮಾನತು ಮಾಡಿ, ಜಿಲ್ಲಾಧಿಕಾರಿ ಕುಮಾರ ಅವರು ಬುಧವಾರ ಆದೇಶ ಹೊರಡಿಸಿದ್ದಾರೆ. ದ್ವಿತೀಯ ದರ್ಜೆ ಸಹಾಯಕರಾದ ಸತೀಶ್ ಎಚ್.ವಿ. ಯೋಗೇಶ್, ಗುರುಮೂರ್ತಿ ಮತ್ತು ವಿಜಯ್‌ಕುಮಾರ್ ಅವರನ್ನು ವಿಚಾರಣೆ ಕಾಯ್ದಿರಿಸಿ, ಅಮಾನತು ಮಾಡಲಾಗಿದೆ. ಆರೋಪಿತ ನೌಕರರು ಕರ್ತವ್ಯದಲ್ಲಿ ಮುಂದುವರಿದರೆ, ಸಾಕ್ಷ್ಯಗಳನ್ನು ನಾಶಪಡಿಸುವ ಮತ್ತು ತನಿಖೆಗೆ ಅಡ್ಡಿಪಡಿಸುವ ಸಾಧ್ಯತೆ ಇರುವುದರಿಂದ ಅಮಾನತು ಜೊತೆಗೆ ಬೇರೆ ಸ್ಥಳಗಳಿಗೆ ವರ್ಗಾಯಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

ಸತೀಶ್ ಅವರನ್ನು ಮದ್ದೂರು ತಾಲ್ಲೂಕು ಕಚೇರಿಗೆ, ಯೋಗೇಶ್ ಅವರನ್ನು ಪಾಂಡವಪುರ ತಾಲ್ಲೂಕು ಕಚೇರಿಗೆ, ಗುರುಮೂರ್ತಿ ಅವರನ್ನು ಶ್ರೀರಂಗಪಟ್ಟಣ ತಾಲ್ಲೂಕು ಕಚೇರಿಗೆ ಹಾಗೂ ವಿಜಯ್ ಕುಮಾರ್ ಅವರನ್ನು ಕೆ.ಆರ್.ಪೇಟೆ ತಾಲ್ಲೂಕು ಕಚೇರಿಗೆ ವರ್ಗಾಯಿಸಿ ಆದೇಶಿಸಲಾಗಿದೆ. ಕಾಂತಾಪುರ ಗ್ರಾಮದ ಗ್ರಾಮ ಸಹಾಯಕ ಎಸ್. ಯೋಗೇಶ್ ಅವರನ್ನು ತಾತ್ಕಾಲಿಕವಾಗಿ, ಮುಂದಿನ ಆದೇಶದವರೆಗೆ ಕರ್ತವ್ಯದಿಂದ ಬಿಡುಗಡೆಗೊಳಿಸಿ, ಆದೇಶಿಸಲಾಗಿದೆ.

ಶಿರಸ್ತೇದಾರರಾದ ರವಿಶಂಕರ್, ಉಮೇಶ್ ವಿರುದ್ಧ ಶಿಸ್ತುಕ್ರಮ ಜರುಗಿಸುವ ಸಂಬಂಧ ಮೈಸೂರು ಪ್ರಾದೇಶಿಕ ಆಯುಕ್ತರಿಗೆ ಪತ್ರ ಬರೆಯಲಾಗಿದೆ ಎಂದು ಜಿಲ್ಲಾಧಿಕಾರಿ ಕುಮಾರ ತಿಳಿಸಿದ್ದಾರೆ.

## ಅನಿರೀಕ್ಷಿತ ಮಳೆ: ವರ್ಷದ ಮೊದಲ ಮಳೆಗೆ ಬೆಳೆಗಾರ ಕಂಗಾಲು


• ಉದಯವಾಹಿನಿ, ಮಡಿಕೇರಿ

ಕೊಡಗಿನ ಅಲ್ಲಲ್ಲಿ ಹಗುರ ಮಳೆಯಾಗಿದೆ. ಮುಂಗಾರಿನಂತೆ ತೀರಾ ಬಿರುಸಿನ ಮಳೆಯಾಗದಿದ್ದರೂ ಸದ್ಯ ಸುರಿದಿರುವ ಹಗುರದಿಂದ ಸಾಧಾರಣ ಮಳೆಗೆ ಬೆಳೆಗಾರರು ಆತಂಕಗೊಂಡಿದ್ದಾರೆ. ದಕ್ಷಿಣ ಕೊಡಗಿನ ಕೆಲವೆಡೆ ಹಗುರ ಮಳೆಯಾದರೆ ಉತ್ತರ ಕೊಡಗಿನ ಹಲವೆಡೆ ಗುಡುಗ, ಮಿಂಚಿನ ವಾತಾವರಣ ಇತ್ತು. ಹಲವೆಡೆ ಹಗುರ ಮಳೆಯಾಗಿದೆ. ಈಗ ಎಲ್ಲೆಡೆ ಕಾಫಿ ಕೊಯ್ಲು ನಡೆಯುತ್ತಿದೆ. ಹಲವೆಡೆ ಇನ್ನೂ ಕಾಫಿ ಆರಂಭವಾಗಿಲ್ಲ. ಆರಂಭವಾಗಿರುವ ಕಡೆ ಕಾಫಿ ಇನ್ನೂ ಒಣಗಿಲ್ಲ. ಈಗ ಮಳೆ ಬಂದರೆ ಕಾಫಿ ಬೆಳೆಗಾರರಿಗೆ ವರ್ಷದ ಫಸಲು ಅಪಾರ ನಷ್ಟವಾಗಲಿದೆ. ಎಲ್ಲೆಡೆ ಕಾಫಿ ತೋಟಗಳಲ್ಲಿ ಈಗ ಕಾಫಿ ಕೊಯ್ಲು ಅಥವಾ ಕಾಫಿ ಒಣಗಿಸುವ ದೃಶ್ಯಗಳೆ ಕಂಡು ಬರುತ್ತಿವೆ. ಮಳೆ ಬರಲಿದೆ ಎಂಬ ಸಣ್ಣ ಸೂಚನೆಯೂ ಇಲ್ಲದಂತೆ ಬಂದ ಮಳೆಯಿಂದ ಒಣಗಲು ಹಾಕಿದ್ದ ಕಾಫಿಯನ್ನು ಬಹಳಷ್ಟು ಕಡೆ ಸಂರಕ್ಷಿಸಿಕೊಳ್ಳಲೂ ಆಗಿಲ್ಲ. ಒಣಗಲು ಹಾಕಿದ್ದ ಕಾಫಿ ಕೊಚ್ಚಿಕೊಂಡು ಹೋಗದೇ ಇದ್ದರೂ ಅದರ ಗುಣಮಟ್ಟ ಕಡಿಮೆಯಾಗಲು ಈ ಮಳೆ ಸಾಕಾಗಿತ್ತು. ಈಗ ಬಿರುಸಾಗಿ ಮಳೆ ಸುರಿದರೆ ಅಪಾರ ನಷ್ಟ ಖಚಿತ. ಕಾಫಿ ಹಣ್ಣು ಇರುವಾಗಲೆ ಕಾಫಿ ಹೂ ಸಹ ಅರಳುವ ಸಾಧ್ಯತೆ ಇದೆ. ಹಾಗಾಗಿ, ಈ ತುಂತುರು, ಹಗುರ ಮಳೆ ಇಲ್ಲಿಗೆ ನಿಲ್ಲಲ್ಲಿ, ಇದು ಸಾಧಾರಣ, ಭಾರಿ ಮಳೆಯಾಗದಿರಲಿ ಎಂಬುದು ಬೆಳೆಗಾರರ ಒತ್ತಾಯ.

# ಕನಕಪುರ ವೈದ್ಯಕೀಯ ಕಾಲೇಜು ಸ್ಥಾಪನೆಗೆ ಗ್ರಹಣ

• ಉದಯವಾಹಿನಿ, ರಾಮನಗರ

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸ್ವಕ್ಷೇತ್ರ ಕನಕಪುರಕ್ಕೆ 2026–27ನೇ ಸಾಲಿನಲ್ಲೂ ಸರ್ಕಾರಿ ವೈದ್ಯಕೀಯ ಕಾಲೇಜು ಆರಂಭವಾಗುವ ಭಾಗ್ಯವಿಲ್ಲ! ಮೂಲ ಸೌಕರ್ಯ ಕೊರತೆ ಕಾರಣಕ್ಕಾಗಿ ಕಾಲೇಜು ಸ್ಥಾಪನೆಗೆ ಅನುಮತಿ ಕೋರಿ ರಾಷ್ಟ್ರೀಯ ವೈದ್ಯಕೀಯ ಆಯೋಗಕ್ಕೆ ಪ್ರಸ್ತಾವ ಸಲ್ಲಿಸದಿರುವಲು ವೈದ್ಯಕೀಯ ಶಿಕ್ಷಣ ಇಲಾಖೆ ನಿರ್ಧರಿಸಿದೆ. ಸ್ವಕ್ಷೇತ್ರದಲ್ಲಿ ವೈದ್ಯಕೀಯ ಕಾಲೇಜು ಆರಂಭಿಸಲೇಬೇಕು ಎಂದು ಪಣ ತೊಟ್ಟಿರುವ ಡಿಸಿಎಂ, ಈಗಾಗಲೇ ರಾಜ್ಯ ಸರ್ಕಾರದಿಂದ ಕಾಲೇಜಿಗೆ ಆಡಳಿತಾತ್ಮಕ ಅನುಮೋದನೆ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ. ಆದರೆ, ಕಾಲೇಜು ಆರಂಭಕ್ಕೆ ಬೇಕಾದ ಮೂಲ ಸೌಕರ್ಯಗಳೇ ಇಲ್ಲದಿರುವುದರಿಂದ ಹಿನ್ನಡೆಯಾಗಿದೆ.



**ತಿರಸ್ಕಾರ:** ಕಾಲೇಜು ಸ್ಥಾಪನೆಗಾಗಿ ಇಲಾಖೆಯು ಕಳೆದೆರಡು ಸಾಲಿನಲ್ಲಿ ಸಲ್ಲಿಸಿದ್ದ ಪ್ರಸ್ತಾವಗಳನ್ನು ಮೂಲಸೌಕರ್ಯ ಕೊರತೆ ಕಾರಣಕ್ಕಾಗಿ ಎನ್ ಎಂಸಿ ತಿರಸ್ಕರಿಸಿದೆ.

ಹೀಗಾಗಿ, ಕನಕಪುರದಲ್ಲಿ ಕಾಲೇಜು ಸ್ಥಾಪನೆಗೆ ಸರ್ಕಾರದ ಆಡಳಿತಾತ್ಮಕ ಅನುಮೋದನೆ ಇದ್ದರೂ ಮೂಲಸೌಕರ್ಯ ಕೊರತೆ ಕಾರಣಕ್ಕೆ ಕಾರ್ಯ ರೂಪಕ್ಕೆ ಬರುತ್ತಿಲ್ಲ. ಕನಿಷ್ಠ 50 ಸೀಟುಗಳಿರುವ ವೈದ್ಯಕೀಯ ಕಾಲೇಜು ಸ್ಥಾಪಿಪಬೇಕಾದರೆ 220 ಹಾಸಿಗೆಗಳ ಸಾಮರ್ಥ್ಯದ ಆಸ್ಪತ್ರೆಯ ಅಗತ್ಯವಿದೆ.

ಸದ್ಯ ಕನಕಪುರದಲ್ಲಿ ಅಂತಹ ವ್ಯವಸ್ಥೆ ಇಲ್ಲ. ಸದ್ಯ ಅಲ್ಲಿರುವ ತಾಲ್ಲೂಕು ಆಸ್ಪತ್ರೆಯ ಹಾಸಿಗೆಗಳ ಸಾಮರ್ಥ್ಯ 100 ಮಾತ್ರ. ಹಾಗಾಗಿ, ಹೊಸ ಕಟ್ಟಡ ನಿರ್ಮಾಣದ ಅಗತ್ಯವಿದೆ ಎನ್ನುತ್ತವೆ ಇಲಾಖೆಯ ಮೂಲಗಳು.

**ಕಟ್ಟಡಕ್ಕೆ ಟೆಂಡರ್:** ಕನಕಪುರದಲ್ಲಿ 550 ಕೋಟಿ ವೆಚ್ಚದಲ್ಲಿ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆ ನಿರ್ಮಿಸಲು ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಕಟ್ಟಡ ನಿರ್ಮಾಣ ಕಾಮಗಾರಿಗೆ ಟೆಂಡರ್ ಸಹ ಆಹ್ವಾನಿಸಲಾಗಿದೆ' ಎಂದಿದ್ದಾರೆ ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಪಾಟೀಲ.

> **ಕನಕಪುರದಲ್ಲಿರುವ ಆಸ್ಪತ್ರೆಯು ವೈದ್ಯಕೀಯ ಕಾಲೇಜು ಆರಂಭಕ್ಕೆ ಸುಸಜ್ಜಿತ ಆಸ್ಪತ್ರೆ, ಬೋಧಕ–ಬೋಧಕೇತರ ಸಿಬ್ಬಂದಿಯಂತಹ ಮೂಲಸೌಕರ್ಯಗಳಿಲ್ಲ. ಕಾಲೇಜು ಆರಂಭಕ್ಕೆ ಆಸ್ಪತ್ರೆ ಸಿದ್ಧವಾಗಿಲ್ಲದ ಕಾರಣ ಈ ಸಲ ಎನ್‌ಎಂಸಿ ಅರ್ಜಿ ಸಲ್ಲಿಸುವುದಿಲ್ಲ**
> 
> **– ಡಾ. ಶರಣಪ್ರಕಾಶ ಪಾಟೀಲ, ವೈದ್ಯಕೀಯ ಶಿಕ್ಷಣ ಸಚಿವ**

# ನಾನೂ ಸಚಿವ ಸ್ಥಾನದ ಆಕಾಂಕ್ಷಿ: ಶಾಸಕ ಬಾಲಕೃಷ್ಣ

• ಉದಯವಾಹಿನಿ, ಮಾಗಡಿ

ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿ ಅವರನ್ನು ಮುಖ್ಯಮಂತ್ರಿ ಹಾಗೂ ಉಪ ಮುಖ್ಯಮಂತ್ರಿ ಮೈಸೂರಿನಲ್ಲಿ ಭೇಟಿಯಾಗಿದ್ದಾರೆ. ನಾನು ಕೂಡ ಸಚಿವ ಸ್ಥಾನದ ಆಕಾಂಕ್ಷಿ ಎಂದು ಇಬ್ಬರ ಬಳಿ ಬೇಡಿಕೆ ಮಂಡಿಸಿದ್ದೇನೆ ಎಂದು ಶಾಸಕ ಎಚ್.ಸಿ.ಬಾಲಕೃಷ್ಣ ಹೇಳಿದ್ದಾರೆ. ತಾಲ್ಲೂಕಿನ ಮತ್ತಿಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಹಾಗೂ ಗುದ್ದಲಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಹೈಕಮಾಂಡ್ ನಿರ್ಧಾರ ಏನು ಎಂದು ಕಾಯ್ದು ನೋಡಬೇಕು. ನಾನು ಆಶಾವಾದಿಯಾಗಿದ್ದೇನೆ ಎಂದರು.

ಸಾರ್ವಜನಿಕರ ಸಮಸ್ಯೆ ಇತ್ಯರ್ಥಕ್ಕೆ ಕಸಬಾ ಮತ್ತು ಮಾಡಬಾಳ್ ಹೋಬಳಿಗೆ ಸಂಬಂಧಪಟ್ಟ ತಾಲ್ಲೂಕು ಕಚೇರಿಯಲ್ಲಿ ಜ.20ರಂದು ಕಂದಾಯ ಹಾಗೂ ಸರ್ವೆ ಆದಾಲತ್ ನಡೆಸಲಾಗುತ್ತಿದೆ. ಜನರ ಸಮಸ್ಯೆ ಬಗೆಹರಿಸಲು ಅಧಿಕಾರಿಗಳಿಗೆ ಒಂದು ತಿಂಗಳು ಕಾಲಾವಕಾಶ ಕೊಡುತ್ತೇವೆ. ತಿಂಗಳಲ್ಲಿ ಸಮಸ್ಯೆ ಬಗೆಹರಿಯದಿದ್ದರೆ ಜಿಲ್ಲಾಧಿಕಾರಿಯನ್ನು ಮಾಗಡಿಗೆ ಕರೆಸಿ ಸಮಸ್ಯೆ ಬಗೆಹರಿಸಲಾಗುವುದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.


ಉದಯವಾಹಿನಿ ಚಿತ್ರ

ಕುದೂರು ಹಾಗೂ ತಿಪ್ಪಸಂದ್ರ ಹೋಬಳಿ ಕೇಂದ್ರಗಳಲ್ಲಿ ದಿನ ನಿಗದಿ ಮಾಡಿ ತಹಶೀಲ್ದಾರ್, ಸಹಾಯಕ ಉಪ ಭೂ ನಿರ್ದೇಶಕರು ಹಾಗೂ ಸಿಬ್ಬಂದಿ ಜೊತೆ ನಾನು ಸ್ಥಳದಲ್ಲಿಯೇ ಇದ್ದು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಬಗೆಹರಿಸಲಾಗುವುದು. ತಾಲ್ಲೂಕಿನಲ್ಲಿ ಕಂದಾಯ ಇಲಾಖೆಗೆ ಸಂಬಂಧಪಟ್ಟ ಸಮಸ್ಯೆ ಹೆಚ್ಚಾಗಿರುವುದದರಿಂದ ಕನಿಷ್ಠ 6 ತಿಂಗಳಿಗೊಮ್ಮೆ ಈ ಕಾರ್ಯಕ್ರಮ ನಡೆಸಲಾಗುತ್ತದೆ. ಗ್ರಾಮಗಳಿಗೆ ಖುದ್ದಾಗಿ ತೆರಳಿ ಮೂಲಸೌಕರ್ಯ ಕುಂದುಕೊರತೆ ಬಗ್ಗೆ ಗ್ರಾಮಸ್ಥರಿಂದ ಮಾಹಿತಿ ಪಡೆದು ಪರಿಹಾರ ಸೂಚಿಸಲಾಗುವುದು ಎಂದರು.

# ಮಂದಗತಿಯಲ್ಲಿ ಸಾಗಿದ ಇ-ಖಾತೆ ಅಭಿಯಾನ

• ಉದಯವಾಹಿನಿ, ಶಿಡ್ಲಘಟ್ಟ

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಆಸ್ತಿಗಳ ಇ-ಖಾತೆ ಅಭಿಯಾನ ಡಿಸೆಂಬರ್ 18, 2025ರಿಂದ ಆರಂಭವಾಗಿದೆ. ಸರ್ಕಾರ ಈ ಬಗ್ಗೆ ವ್ಯಾಪಕ ಪ್ರಚಾರ ನಡೆಸಿದೆ. ನವೆಂಬರ್ 28ರಂದು ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯತಿಗಳ ಅಧ್ಯಕ್ಷರಿಗೆ ಇ-ಖಾತೆ ಅಭಿಯಾನದ ಬಗ್ಗೆ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು. ಇ-ಖಾತೆ ಕುರಿತು ಸರ್ಕಾರ ಹೊರಡಿಸಿರುವ ಆದೇಶ ಮತ್ತು ಗ್ರಾಮ ಪಂಚಾಯಿತಿಗೆ ಅಧ್ಯಕ್ಷರಿಗೆ ಇರುವ ಅಧಿಕಾರ ಹಾಗೂ ಜವಾಬ್ದಾರಿ ಕುರಿತು ಸಮಗ್ರವಾಗಿ ಮಾಹಿತಿಯೊಂದಿಗೆ ತರಬೇತಿ ಸಹ ನೀಡಲಾಗಿತ್ತು. ಅಧಿಕಾರ ವಿಕೇಂದ್ರೀಕರಣಕ್ಕಾಗಿ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಇ-ಖಾತೆ ವಿಲೇವಾರಿ ಮಾಡಲು ಸರ್ಕಾರ ಅಧಿಕಾರ ನೀಡಿದೆ. ಸಾರ್ವಜನಿಕರಿಗೆ ತ್ವರಿತವಾಗಿ ನಿವೇಶನಗಳಿಗೆ ಅಥವಾ ಕಟ್ಟಡಗಳಿಗೆ ಸಂಬಂಧಿಸಿದಂತೆ ಇ-ಖಾತೆ ನೀಡಲು ಸರ್ಕಾರ ಹಲವು ರೀತಿಯ ಕ್ರಮಗಳನ್ನು ಕೈಗೊಂಡಿದೆ. ಈ ಹಿಂದೆ ಇ-ಖಾತೆ ನೀಡಲು 45 ದಿನಗಳನ್ನು ನಿಗದಿಪಡಿಸಲಾಗಿತ್ತು. ಈಗ ಕೇವಲ 15 ದಿನದೊಳಗೆ ಇ-ಖಾತೆ ವಿತರಿಸಲು ಸರ್ಕಾರ ಆದೇಶ ಹೊರಡಿಸಿದೆ. ಸಾರ್ವಜನಿಕರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದರೆ ಅದನ್ನು ಮೊದಲ ಎರಡು ದಿನಗಳು ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಸಾರ್ವಜನಿಕರು ಸಲ್ಲಿಸಿದ ದಾಖಲೆ ಪರಿಶೀಲಿಸಿ ಆ ನಂತರ ಗ್ರಾಮ ಪಂಚಾಯಿತಿ ಅಧ್ಯಕ್ಷರ ಲಾಗಿನ್‌ಗೆ ಕಳುಹಿಸಬೇಕು. ಗ್ರಾಮ ಪಂಚಾಯಿತಿ ಅಧ್ಯಕ್ಷರು ಸಾರ್ವಜನಿಕರಿಂದ ಆನ್‌ಲೈನ್ ಮೂಲಕ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಕಾನೂನು ಚೌಕಟ್ಟಿನಲ್ಲಿ ಪರಿಶೀಲಿಸಿ, ನಾಲ್ಕು ದಿನ ಒಳಗೆ ವಿಲೇವಾರಿ ಮಾಡಬೇಕು. ನಂತರ ಇಒ ಪರಿಶೀಲಿಸಬೇಕು.


ಉದಯವಾಹಿನಿ ಚಿತ್ರ

ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಎರಡು ದಿನದೊಳಗೆ ಪಿಡಿಒ ಸಲ್ಲಿಕೆಯಾಗಿರುವ ದಾಖಲೆಗಳನ್ನು ಪರಿಶೀಲಿಸಿ ಇ-ಖಾತೆ ನೀಡಲು ಅಧಿಕಾರ ನೀಡಲಾಗಿದೆ. ಇ-ಖಾತೆ 2.1 ತಂತ್ರಾಂಶದ ತಾಂತ್ರಿಕ ಸಮಸ್ಯೆಗಳು, ದಾಖಲೆಗಳಲ್ಲಿನ ಗೊಂದಲ ಮತ್ತು ಕೊರತೆಯಿಂದ ಇ-ಖಾತೆ ಅಭಿಯಾನಕ್ಕೆ ತೊಡಕಾಗಿದೆ. ಆದರೂ, ತಾಲ್ಲೂಕಿನಲ್ಲಿ ಒಂದಷ್ಟು ಪ್ರಗತಿ ಕಂಡಿದೆ. ಇನ್ನಷ್ಟು ವೇಗವಾಗಿ ನಡೆಯಲು ಜನರ ಸಮಸ್ಯೆ ಗಮನದಲ್ಲಿಟ್ಟುಕೊಂಡು ತಂತ್ರಾಂಶವನ್ನು ಬಳಕೆಯ ಸ್ನೇಹಿಯಾಗಿ ಬದಲಿಸಬೇಕು. ದಾಖಲೆಗಳ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಬೇಕು. ಎರಡೂ ಸೇರಿದರೆ ಮಾತ್ರ ಉದ್ದೇಶ ಈಡೇರಲು ಸಾಧ್ಯ ಎನ್ನುತ್ತಾರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು.

## ತಹಶೀಲ್ದಾರ್ ನೋಟಿಸ್‌ಗೆ ಬಗ್ಗದ ಕಲ್ಲುಗಣಿ ಮಾಲೀಕ

• ಉದಯವಾಹಿನಿ, ಗುಡಿಬಂಡೆ

ತಾಲ್ಲೂಕಿನ ಕಂತಾರ್ಲಹಳ್ಳಿ ಸರ್ವೆ ನಂಬರ್ 25 ಎರಡು ಎಕರೆ ಜಮೀನಿನಲ್ಲಿ ವ್ಯಕ್ತಿಯೊಬ್ಬರು ಕಲ್ಲು ಗಣಿ ನಡೆಸುತ್ತಿದ್ದಾರೆ. ಈ ಗಣಿ ಕಾನೂನುಬಾಹಿರವಾಗಿ ಮಿತಿಮೀರಿದ ಬ್ಲಾಸ್ಟಿಂಗ್ ಮಾಡುತ್ತಿದೆ. ತ್ಯಾಜ್ಯ ವಸ್ತುಗಳನ್ನು ರಸ್ತೆ ಪಕ್ಕದ ಸರ್ಕಾರಿ ಜಾಗದಲ್ಲಿ ಹಾಕಲಾಗುತ್ತಿದೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಈ ಬಗ್ಗೆ ಸಾರ್ವಜನಿಕರು ತಹಶೀಲ್ದಾರರಿಗೆ ದೂರು ನೀಡಿದ್ದರು. ದೂರಿನ ಮೇರೆಗೆ ತಹಶೀಲ್ದಾರರು ಗಣಿ ಮಾಲೀಕರಿಗೆ ನೋಟಿಸ್ ನೀಡಿದರು. ಇದಕ್ಕೆ ಮಾಲೀಕರು ಯಾವುದೇ ಪ್ರತಿಕ್ರಿಯೆ ನೀಡಲಿಲ್ಲ. ಕಾನೂನು ಬಾಹಿರ ಕಾರ್ಯ ಮುಂದುವರಿಸಿದ್ದರು.

ಈ ಪರಿಸ್ಥಿತಿ ಪರಿಶೀಲಿಸಿದ ತಹಶೀಲ್ದಾರರು ಸಿಗ್ನತ್‌ವುಲ್ಲಾ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಉಪನಿರ್ದೇಶಕರಿಗೆ ದೂರು ನೀಡಿದ್ದಾರೆ. ಕಲ್ಲು ಗಣಿಯಲ್ಲಿ ನಡೆಯುತ್ತಿರುವ ಕಾನೂನು ಬಾಹಿರ ಬ್ಲಾಸ್ಟಿಂಗ್ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಲು ಕೋರಿದ್ದಾರೆ.


ಉದಯವಾಹಿನಿ ಚಿತ್ರ

ದಪ್ಪರ್ತಿ, ಭತ್ತಲಹಳ್ಳಿ, ಹನುಮಂತಪುರ ಮುಂತಾದ ಸಮೀಪದ ಗ್ರಾಮಗಳ ಜನರಿಗೂ ಈ ಗಣಿಯಿಂದ ತೊಂದರೆಯಾಗುತ್ತಿದೆ. ತಹಶೀಲ್ದಾರ್ ಸ್ಥಳ ಪರಿಶೀಲನೆ ನಡೆಸಿ ಸಾರ್ವಜನಿಕರ ತೊಂದರೆಗಳನ್ನು ದಾಖಲಿಸಿದ್ದಾರೆ. ಗಣಿ, ಭೂ ವಿಜ್ಞಾನ ಇಲಾಖೆ ಉಪನಿರ್ದೇಶಕರಾದ ಪದ್ಮಜಾ.ಎಂ.ವಿ ಮಾತನಾಡಿ, ದೂರು ಬಂದಿದ್ದರೆ ಅದನ್ನು ಪರಿಶೀಲನೆ ಮಾಡಿ ಕ್ರಮ ಜರುಗಿಸಲಾಗುವುದು. ಯಾವುದೇ ಕಾರಣಕ್ಕೂ ತಡ ಮಾಡುವುದಿಲ್ಲ ಎಂದರು.

## ನಾಗಮಂಗಲ ಸರ್ಕಾರಿ ಜಾಗ ಕಬಳಿಕೆ: ಇಬ್ಬರು ಶಿರಸ್ತೇದಾರ್ ಸೇರಿ ಐವರ ಬಂಧನ

• ಉದಯವಾಹಿನಿ, ಮಂಡ್ಯ

ರೆಕಾರ್ಡ್ ರೂಮ್‌ನಲ್ಲಿದ್ದ ಮೂಲ ದಾಖಲೆಗಳನ್ನು ತಿದ್ದಿ, ನಕಲಿ ದಾಖಲೆಗಳನ್ನು ಸೃಷ್ಟಿಸಿ ಸರ್ಕಾರಿ ಜಾಗ ಕಬಳಿಸಿದ್ದಾರೆ. ಈ ಮೂಲಕ ಸರ್ಕಾರಕ್ಕೆ 200 ಕೋಟಿ ನಷ್ಟ ಉಂಟು ಮಾಡಿದ್ದಾರೆ' ಎಂಬ ಆರೋಪದ ಮೇರೆಗೆ ಇಬ್ಬರು ಶಿರಸ್ತೇದಾರ್ ಸೇರಿ ಐವರು ಸರ್ಕಾರಿ ನೌಕರರನ್ನು ನಾಗಮಂಗಲ ಪಟ್ಟಣ ಪೊಲೀಸರು ಬುಧವಾರ ಬಂಧಿಸಿದ್ದಾರೆ. ನಾಗಮಂಗಲ ತಾಲ್ಲೂಕು ಕಚೇರಿಯ ಶಿರಸ್ತೇದಾರ್‌ಗಳಾದ ರವಿಶಂಕರ್, ಉಮೇಶ್, ದ್ವಿತೀಯ ದರ್ಜೆ ಸಹಾಯಕರಾದ ಸತೀಶ್ ಎಚ್.ವಿ., ಗುರುಮೂರ್ತಿ ಮತ್ತು ಕಾಂತಾಪುರ ವೃತ್ತದ ಗ್ರಾಮ ಸಹಾಯಕ ಎಸ್.ಯೋಗೇಶ್ ಬಂಧಿತರು. ಈ ಐವರೊಂದಿಗೆ ದ್ವಿತೀಯ ದರ್ಜೆ ಸಹಾಯಕರಾದ ಯೋಗೇಶ್, ವಿಜಯ್‌ಕುಮಾರ್, ಯಶವಂತ್, ಮೈಸೂರಿನ ಪತ್ರ ಬರಹಗಾರ ಚಿನ್ನಸ್ವಾಮಿ, ಮಹಮ್ಮದ್ ವಸೀಂ ಉಲ್ಲಾ ಸೇರಿ ಒಟ್ಟು 10 ಆರೋಪಿಗಳ ವಿರುದ್ಧ ಎಫ್ಐಆರ್ ದಾಖಲಾಗಿದೆ.

**ನಸುಕಿನವರೆಗೂ ಕಾರ್ಯಾಚರಣೆ:** ಅಕ್ರಮವಾಗಿ ಸರ್ಕಾರಿ ಜಮೀನು ಮಂಜೂರು ಮಾಡಿ, ಅಧಿಕಾರ ದುರುಪಯೋಗ ಮಾಡಿಕೊಂಡಿರುವ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದವು. ಈ ದೂರುಗಳನ್ನು ಆಧರಿಸಿ ಮಂಡ್ಯ ಲೋಕಾಯುಕ್ತ ಪೊಲೀಸರು ಮಂಗಳವಾರ ಶೋಧ ಕಾರ್ಯ ನಡೆಸಿದರು. ಮಧ್ಯಾಹ್ನ 1ರಿಂದ ಬುಧವಾರ ನಸುಕಿನ 5 ಗಂಟೆವರೆಗೆ ಶೋಧ ಕಾರ್ಯ ನಡೆಸಿ ಅಕ್ರಮವನ್ನು ಸಾಕ್ಷಿ ಸಮೇತ ಬಯಲಿಗೆಳೆದಿದ್ದಾರೆ.


ಉದಯವಾಹಿನಿ ಚಿತ್ರ

ನಾಗಮಂಗಲ ತಾಲ್ಲೂಕು ಕಚೇರಿ, ಆರೋಪಿತ ನೌಕರರ ಮನೆಗಳು, ಜೆರಾಕ್ಸ್ ಸೆಂಟರ್, ಮೈಸೂರು ನಗರದ ಅಗ್ರಹಾರದ 'ಹೋಟೆಲ್ ರಾಜರತ್ನ' ಸೇರಿ ಒಟ್ಟು ಏಳು ಕಡೆ ಏಕಕಾಲದಲ್ಲಿ ಪೊಲೀಸರು ಕಾರ್ಯಾಚರಣೆ ನಡೆಸಿದರು. ಹೋಟೆಲ್ ಕ್ಯಾಶ್ ಕೌಂಟರ್ ಟೇಬಲ್‌ನಲ್ಲಿ ನಾಗಮಂಗಲ ತಾಲ್ಲೂಕು ಕಚೇರಿಗೆ ಸಂಬಂಧಿಸಿದ ದಾಖಲೆಗಳು, ಜಮೀನು ಮಂಜೂರಾತಿಗೆ ಸಂಬಂಧಿಸಿದ ಖಾಲಿ ನಮೂನೆಗಳು, ತಹಶೀಲ್ದಾರ್, ಗ್ರಾಮ ಲೆಕ್ಕಾಧಿಕಾರಿ, ಕಂದಾಯ ನಿರೀಕ್ಷಕರ ಹೆಸರಿನ ರಬ್ಬರ್ ಸೀಲ್‌ಗಳು ಪತ್ತೆಯಾಗಿವೆ. ಮನೆ ಮತ್ತು ಕಚೇರಿಗಳಲ್ಲಿ ನಕಲಿ ಚಲನ್‌ಗಳು, ಖಾಲಿ ಚೆಕ್, ಸಾಗುವಳಿ ಚೀಟಿ, ತಿಳಿವಳಿಕೆ ನೋಟಿಸ್ ಹಾಗೂ ನಕಲಿ ದಾಖಲೆಗಳು ಸಿಕ್ಕಿವೆ ಎಂದು ಎಫ್ ಐಆರ್‌ನಲ್ಲಿ ನಮೂದಿಸಲಾಗಿದೆ.

**320 ಎಕರೆ ಗುಳುಂ:** ನಾಗಮಂಗಲ ತಾಲ್ಲೂಕಿನಲ್ಲಿ ಸುಮಾರು 50 ಸರ್ವೆ ನಂಬರ್‌ಗಳಿಗೆ ಸಂಬಂಧಿಸಿದ 320ಕ್ಕೂ ಹೆಚ್ಚು ಎಕರೆ ಸರ್ಕಾರಿ ಜಾಗ ಮತ್ತು ಗೋಮಾಳವನ್ನು ಬಗರ್‌ಹುಕುಂ ಸಾಗುವಳಿ ಯೋಜನೆಯಡಿ ಅಕ್ರಮವಾಗಿ ಕಬಳಿಸಿದ್ದಾರೆ. ಹಣ ಪಡೆದುಕೊಂಡು 5 ಎಕರೆ, 8 ಎಕರೆ, 10 ಎಕರೆಯಂತೆ ಭೂಮಿ ಮಂಜೂರು ಮಾಡಿಕೊಟ್ಟಿದ್ದಾರೆ. ತನಿಖೆ ಪೂರ್ಣಗೊಂಡ ನಂತರ ಸತ್ಯಾಂಶ ಹೊರಬರಲಿದೆ ಎಂದು ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

# ತಾಯಿಯೊಂದಿಗೆ ಆಹಾರ ಅರಸಿ ಬಂದಾಗ ಪಾಳು ಬಾವಿಗೆ ಬಿದ್ದ ಕಾಡಾನೆ ಮರಿ ರಕ್ಷಣೆ

• ಉದಯವಾಹಿನಿ, ಕನಕಪುರ

ತಾಲ್ಲೂಕಿನ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯ ಕೋಡಿಹಳ್ಳಿ ವನ್ಯಜೀವಿ ವಲಯದ ರಂಗಪ್ಪನದೊಡ್ಡಿ ಗ್ರಾಮದಲ್ಲಿ ಮಧ್ಯರಾತ್ರಿ ರಾತ್ರಿ ಪಾಳುಬಾವಿಗೆ ಬಿದ್ದಿದ್ದ ಎರಡು ತಿಂಗಳ ಕಾಡಾನೆ ಮರಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಾವಿಯಿಂದ ಮೇಲಕ್ಕೆತ್ತಿ ರಕ್ಷಿಸಿದ್ದಾರೆ. ತಾಯಿ ಆನೆ. ಮರಿಯಾನೆ ಸೇರಿದಂತೆ 3 ಆನೆಗಳು ಬುಧವಾರ ರಾತ್ರಿ 2 ಗಂಟೆ ಸುಮಾರಿಗೆ ಅರಣ್ಯಕ್ಕೆ ಹೊಂದಿಕೊಂಡಂತಿರುವ ರಂಗಪ್ಪನದೊಡ್ಡಿಗೆ ಆಹಾರ ಅರಸಿ ಬಂದಿದ್ದವು. ಮನೆಯೊಂದಕ್ಕೆ ಹೊಂದಿಕೊಂಡಂತಿರುವ ಜಮೀನಿನಲ್ಲಿ ಆಹಾರ ಹುಡುಕುವಾಗ ಮರಿಯಾನೆ ಕತ್ತಲಲ್ಲಿ ಪಾಳುಬಾವಿಗೆ ಬಿದ್ದಿದೆ. ಅದೃಷ್ಟವಶಾತ್ ಬಾವಿಯಲ್ಲಿ ಕಡಿಮೆ ಪ್ರಮಾಣದ ನೀರು ಇದ್ದಿದ್ದರಿಂದ ಆನೆ ಮುಳುಗುವಂತಹ ಅಪಾಯ ಇರಲಿಲ್ಲ. ಬಾವಿಗೆ ಬಿದ್ದ ಮರಿಯನ್ನು ಮೇಲಕ್ಕೆತ್ತಲು ಉಳಿದೆರಡು ಆನೆಗಳು ಪ್ರಯತ್ನಿಸಿ ಜೋರಾದ ಶಬ್ದ ಮಾಡುತ್ತಿದ್ದವು. ಅದನ್ನು ಕೇಳಿದ ಮನೆಯವರು ಹಾಗೂ ಗ್ರಾಮಸ್ಥರು ಹೊರಕ್ಕೆ ಬಂದು ನೋಡಿದಾಗ. ಮರಿಯಾನೆ ಬಾವಿಗೆ ಬಿದ್ದಿರುವುದು ಗೊತ್ತಾಗಿದೆ. ಕೂಡಲೇ ಸ್ಥಳೀಯರು ಆನೆ ಕಾರ್ಯಪಡೆ ನಿಯಂತ್ರಣ ಕೊಠಡಿಗೆ ಕರೆ ಮಾಡಿದರು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದರು. ವಿಷಯ ತಿಳಿದು ಇಟಿಎಫ್ ಸಿಬ್ಬಂದಿ ಹಾಗೂ ಅಧಿಕಾರಿಗಳು ರಾತ್ರಿಯೇ ಸ್ಥಳಕ್ಕೆ ತೆರಳಿದೆವು. ಮೊದಲಿಗೆ ಎರಡು ದೊಡ್ಡ ಆನೆಗಳನ್ನು ಸ್ಥಳದಿಂದ ಸ್ವಲ್ಪ ದೂರಕ್ಕೆ ಓಡಿಸಿದೆವು. ಜೆಸಿಬಿ ತಂದು ಬಾವಿಯಲ್ಲಿದ್ದ ಮರಿಯಾನೆಯನ್ನು ಮೇಲಕ್ಕೆತ್ತಿ ರಕ್ಷಿಸಿ, ಅನತಿ ದೂರದಲ್ಲಿದ್ದ ತಾಯಿಯಾನೆ ಮಡಿಲಿಗೆ ಸೇರಿಸಲಾಯಿತು. ಕೆಲ ಹೊತ್ತು ಸ್ಥಳದಲ್ಲೇ ಇದ್ದ ಆನೆಗಳು, ಬಳಿಕ ಅರಣ್ಯದೊಳಕ್ಕೆ ಹೋದವು ಎಂದು ಹೇಳಿದರು. ನಸುಕಿನಲ್ಲಿ 2.30ರ ಸುಮಾರಿಗೆ ಶುರುವಾದ ಕಾರ್ಯಾಚರಣೆ 4 ಗಂಟೆವರೆಗೆ ನಡೆಯಿತು.


ಉದಯವಾಹಿನಿ ಚಿತ್ರ

ಆನೆಗಳು ಸುರಕ್ಷಿತವಾಗಿಯೇ ಎಂಬುದನ್ನು ತಿಳಿದುಕೊಳ್ಳುವುದಕ್ಕಾಗಿ ಬುಧವಾರ ಮಧ್ಯಾಹ್ನ ಆನೆಗಳು ಸಾಗಿದ ಮಾರ್ಗದಲ್ಲಿ ಇಟಿಎಫ್ ಸಿಬ್ಬಂದಿ ಡ್ರೋನ್ ಹಾರಿಸಿದರು. ಆಗ ಮರಿಯಾನೆ ಸೇರಿದಂತೆ ಮೂರೂ ಆನೆಗಳು ಒಟ್ಟಿಗೆ ಅರಣ್ಯದಲ್ಲಿ ಕ್ಷೇಮವಾಗಿರುವುದು ಖಚಿತವಾಯಿತು ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

# ಮಕ್ಕಳಿಗೂ ಬಂತು ಅಧಿಕ ರಕ್ತದೊತ್ತಡ; ಮೈಸೂರಿನ ಹಲವರಲ್ಲಿ ಪತ್ತೆ

## • ಇತ್ತೀಚೆಗೆ ಪುಟ್ಟ ಮಕ್ಕಳಲ್ಲಿಯೂ ಈ ರೀತಿಯ ಆರೋಗ್ಯ ಸಮಸ್ಯೆಗಳು ಕಾಣಸಿಕೊಳ್ಳುತ್ತಿವೆ

• ಉದಯವಾಹಿನಿ, ಮೈಸೂರು:

ಆರೋಗ್ಯ ಇಲಾಖೆಯ ರಾಷ್ಟ್ರೀಯ ಬಾಲ ಸ್ವಾಸ್ಥ್ಯ (ಆರ್‌ಬಿಎಸ್‌ಕೆ) ಕಾರ್ಯಕ್ರಮದಡಿ ತಪಾಸಣೆ ವೇಳೆ ಸರಕಾರಿ, ಅನುದಾನಿತ ಶಾಲಾ ಕಾಲೇಜುಗಳಲ್ಲಿ 1 ರಿಂದ 12ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಶೇ.5 ರಿಂದ 7ರಷ್ಟು ಮಕ್ಕಳಿಗೆ ಅಧಿಕ ರಕ್ತದೊತ್ತಡ ಇರುವುದು ಕಂಡುಬಂದಿದೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಆರೋಗ್ಯ ಇಲಾಖೆ ನಿಯಂತ್ರಣ ಕ್ರಮಕ್ಕೆ ಮುಂದಾಗಿದೆ. ಬದಲಾದ ಕಾಲಮಾನದಲ್ಲಿ ಆರೋಗ್ಯವಂತರಾಗಿ ಬದುಕುವುದೂ ಒಂದು ದೊಡ್ಡ ಸವಾಲಾಗಿ ಪರಿಣಮಿಸಿದೆ. ಹಿಂದೆ ಒಂದು ನಿರ್ದಿಷ್ಟ ವಯೋಮಾನದ ನಂತರ ಅಧಿಕ ರಕ್ತದೊತ್ತಡ, ಮಧುಮೇಹದಂತಹ ಅಸಾಂಕ್ರಾಮಿಕ ಕಾಯಿಲೆಗಳು ಕಾಣಿಸಿಕೊಳ್ಳುತ್ತಿದ್ದವು. ಆದರೆ ಇತ್ತೀಚೆಗೆ ಪುಟ್ಟ ಮಕ್ಕಳಲ್ಲಿಯೂ ಈ ರೀತಿಯ ಆರೋಗ್ಯ ಸಮಸ್ಯೆಗಳು ಕಾಣಸಿಕೊಳ್ಳುತ್ತಿವೆ. ಆರ್‌ಬಿಎಸ್‌ಕೆ ತಂಡ 2025–26ನೇ ಸಾಲಿಗೆ (ಏಪ್ರಿಲ್ ತಿಂಗಳಿನಿಂದ ನವೆಂಬರ್ ವರೆಗೆ) ರಾಜ್ಯಾದ್ಯಂತ ಒಟ್ಟು 46.27 ಲಕ್ಷ ಮಕ್ಕಳಿಗೆ ಆರೋಗ್ಯ ತಪಾಸಣೆ ಮಾಡಿದೆ. ಅದರಲ್ಲಿ 5.7 ಲಕ್ಷ ಮಕ್ಕಳು ಅಧಿಕ ರಕ್ತದೊತ್ತಡದಿಂದ ಬಳಲುತ್ತಿರುವುದು ಬೆಳಕಿಗೆ ಬಂದಿದೆ. ಇದೇ ರೀತಿ ಮುಖ್ಯಮಂತ್ರಿ ತವರು ಜಿಲ್ಲೆ ಮೈಸೂರಿನಲ್ಲಿಯೂ ಶೇ.5ರಿಂದ ಶೇ.7ರಷ್ಟು ಮಕ್ಕಳಲ್ಲಿ ಅಧಿಕ ರಕ್ತದೊತ್ತಡ ಕಂಡುಬಂದಿದೆ.



**11 ಮಾಡ್ಯೂಲ್‌ಗಳ ಅರಿವು:** ಆರೋಗ್ಯಕರ ಬೆಳವಣಿಗೆ, ಭಾವನಾತ್ಮಕ ಯೋಗಕ್ಷೇಮ ಮತ್ತು ಮಾನಸಿಕ ಆರೋಗ್ಯ, ಪರಸ್ಪರ ಸಂಬಂಧಗಳು, ಮೌಲ್ಯಗಳು ಮತ್ತು ಜವಾಬ್ದಾರಿಯುತ ಪೌರತ್ವ, ಲಿಂಗ ಸಮಾನತೆ, ಪೋಷಣೆ, ಆರೋಗ್ಯ ಮತ್ತು ನೈರ್ಮಲ್ಯ, ಮಾದಕ ವಸ್ತುಗಳ ದುರ್ಬಳಕೆಯ ತಡೆಗಟ್ಟುವಿಕೆ ಮತ್ತು ನಿರ್ವಹಣೆ, ಆರೋಗ್ಯಕರ ಜೀವನ ಶೈಲಿಯ ಪ್ರಚಾರ, ಸಂತಾನೋತ್ಪತ್ತಿ ಆರೋಗ್ಯ, ಎಚ್ಐವಿ ತಡೆಗಟ್ಟುವಿಕೆ, ಹಿಂಸೆ ಮತ್ತು ಗಾಯಗಳ ವಿರುದ್ಧ ಸುರಕ್ಷತೆ ಮತ್ತು ಭದ್ರತೆ ಕುರಿತ ಪಠ್ಯ ಕ್ರಮವನ್ನು ಶಾಲಾ ಶಿಕ್ಷಕರಿಗೆ ತರಬೇತಿ ನೀಡಿ ಅವರ ಮುಖಾಂತರ ಮಕ್ಕಳಿಗೆ ನೀಡಲಾಗುತ್ತಿದೆ.

**ಮಾನಸಿಕ ಒತ್ತಡ ಇದಕ್ಕೆ ಕಾರಣ**

**ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 12ನೇ ತರಗತಿವರೆಗಿನ ಮಕ್ಕಳಲ್ಲಿ ಶೇ.5 ರಿಂದ 7ರಷ್ಟು ಮಂದಿಗೆ ಅಧಿಕ ರಕ್ತದೊತ್ತಡ ಇರುವುದು ಆರೋಗ್ಯ ಇಲಾಖೆಯ ತಪಾಸಣೆಯಲ್ಲಿ ಬೆಳಕಿಗೆ ಬಂದಿದೆ. ಇದು ಗಂಭೀರ ಸಮಸ್ಯೆಯಾಗಿದ್ದು, ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಲಾಗಿದೆ. ಬದಲಾದ ಜೀವನಶೈಲಿ, ಆಹಾರ ಪದ್ಧತಿ, ಸ್ಥೂಲಕಾಯ, ಮಾನಸಿಕ ಒತ್ತಡ ಇದಕ್ಕೆ ಕಾರಣವಾಗಿವೆ. ಮಕ್ಕಳ ಆರೋಗ್ಯ ರಕ್ಷಣೆಗೆ 11 ಮಾಡ್ಯೂಲ್‌ಗಳ ಅರಿವು ಮೂಡಿಸಲಾಗುತ್ತಿದೆ.**

**ಸಮಸ್ಯೆಗೆ ಕಾರಣವೇನು?**

**ಜನ್ಮದತ್ತವಾದ ಸಮಸ್ಯೆಗಳಿಂದ (ಹೃದಯ, ಶ್ವಾಸಕೋಶ ಸಂಬಂಧಿ ಕಾಯಿಲೆಗಳು), ಆಹಾರ ಕ್ರಮ, ಸ್ಥೂಲಕಾಯ, ಕಿಡ್ನಿ ಸೇರಿದಂತೆ ಇನ್ನಿತರ ತೊಂದರೆ ಇರುವ ಕಾರಣಕ್ಕೆ, ಮಾನಸಿಕ ಒತ್ತಡದಂತಹ ಕಾರಣಗಳಿಗೆ ಮಕ್ಕಳಲ್ಲಿ ಅಧಿಕ ರಕ್ತದೊತ್ತಡ ಕಾಣಿಸಿಕೊಳ್ಳುತ್ತದೆ. ಇದರ ಜತೆಗೆ ಶಿಕ್ಷಣದಲ್ಲಿ ಮಕ್ಕಳಿಗೆ ಅತಿಯಾದ ಗುರಿ ಹಾಗೂ ಮಕ್ಕಳ ಬುದ್ಧಿಶಕ್ತಿಗೂ ಮೀರಿದ ಚಟುವಟಿಕೆಗಳನ್ನು ಮಾಡಿಸುವುದು, ಮೊಬೈಲ್ ಬಳಕೆಯಂತಹ ಕಾರಣಗಳೂ ಇದಕ್ಕೆ ಪೂರಕವಾಗುವ ಸಾಧ್ಯತೆ ಇದೆ. ಆರ್‌ಬಿಎಸ್‌ಕೆ ಯೋಜನೆಯಡಿ ಇದನ್ನು ನಿಯಂತ್ರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.**


ಅಂತರಾಳದಿಂದ... EDITORIAL

# ಕೇಂದ್ರ ಬಜೆಟ್ ಮಂಡನೆ:
## ರಾಜ್ಯಗಳ ಬೆನ್ನಿಗೆ ಚೂರಿ ಹಾಕಲು ಸಿದ್ಧತೆ?

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಫೆಬ್ರವರಿ 3ರಂದು ತಮ್ಮ 9ನೇ ಕೇಂದ್ರ ಬಜೆಟನ್ನು ಮಂಡಿಸಲಿದ್ದಾರೆ. ಈ ಬಾರಿಯ ಬಜೆಟ್ ಬೇರೆ ಬೇರೆ ಕಾರಣಗಳಿಗಾಗಿ ವಿಶೇಷವಾಗಲಿದೆ ಎಂದು ಮಾಧ್ಯಮಗಳು ತುತ್ತೂರಿ ಊದಲಾರಂಭಿಸಿವೆ. ಹಾಗೆಂದು, ಈ ಬಾರಿಯ ಬಜೆಟ್ ದೇಶದ ಆರ್ಥಿಕತೆಯ ದಿಕ್ಕನ್ನು ಬದಲಿಸಲಿದೆ ಎನ್ನುವ ನಿರೀಕ್ಷೆಯನ್ನು ಯಾರೂ ಇಟ್ಟುಕೊಂಡಿಲ್ಲ. ಈ ಹಿಂದೆ ಸೀತಾರಾಮನ್ ಅವರು ಬಜೆಟ್ ಮಂಡನೆಯ ಸಂದರ್ಭದಲ್ಲಿ ಉಟ್ಟ ಸೀರೆಯನ್ನೇ ಮಾಧ್ಯಮಗಳು ಬಗೆ ಬಗೆಯಾಗಿ ಮಂಡಿಸಿ, ಅದನ್ನೇ ಬಜೆಟ್ ವಿಶೇಷವೆಂದು ಜನರನ್ನು ನಂಬಿಸುವಲ್ಲಿ ಯಶಸ್ವಿಯಾಗಿದ್ದವು. ಈ ಬಾರಿ ಬಜೆಟನ್ನು ಫೆಬ್ರವರಿ 1 ಅಂದರೆ ರವಿವಾರ ಮಂಡಿಸಲಿರುವುದು ಮಾಧ್ಯಮಗಳ ಪಾಲಿಗೆ ಒಂದು ವಿಶೇಷವಾಗಿದೆ. ರವಿವಾರ ರಜಾ ದಿನವಾಗಿರುವುದರಿಂದ ಆ ದಿನ ಬಜೆಟ್ ಮಂಡನೆ ಮಾಡಲಾಗುತ್ತದೆಯೋ ಇಲ್ಲವೋ ಎನ್ನುವುದು ಚರ್ಚೆಯಲ್ಲಿತ್ತು ರವಿವಾರ ಬಜೆಟ್ ಮಂಡನೆ ಭಾರತಕ್ಕೆ ಹೊಸತೇನೂ ಅಲ್ಲ. 1999ರಲ್ಲಿ ಯಶವಂತ ಸಿನ್ಹಾ ಅವರು ಫೆ. 28ರಂದು ರವಿವಾರವೇ ಬಜೆಟ್ ಮಂಡನೆ ಮಾಡಿದ್ದರು. 2017ರ ಅಂತರ ಫೆರಂದು ಬಜೆಟ್ ಮಂಡನೆ ಮಾಡುತ್ತಾ ಬರಲಾಗಿದ್ದು ಇದೀಗ ಮೊದಲ ಬಾರಿಗೆ ರವಿವಾರದಂದು ಬಜೆಟ್ ಮಂಡನೆ ಮಾಡುವ ಸಂದರ್ಭ ಬಂದಿದೆ. ಇರುವ ಕಲಾಪಗಳನ್ನು ದೇಶದ ಅಭಿವೃದ್ಧಿಗೆ ಸಂಬಂಧಿಸಿದ ಚರ್ಚೆಗೆ ಬಳಸದೆ ವಂದೇ ಮಾತರಂ ಚರ್ಚೆಗೆ ಮೀಸಲಿರಿಸಿ ವ್ಯರ್ಥಗೊಳಿಸಿದ ಹೆಗ್ಗಳಿಕೆಯನ್ನು ಹೊಂದಿರುವ ಸರಕಾರ, ರವಿವಾರ ಬಜೆಟ್ ಮಂಡನೆ ಮಾಡುವುದರಿಂದ ದೇಶದ ಆರ್ಥಿಕತೆಗೆ ವಿಶೇಷ ಲಾಭವಾಗುತ್ತದೆ ಎಂದು ನಿರೀಕ್ಷಿಸಲು ಸಾಧ್ಯವೆ? ಉಳಿದಂತೆ, ಈ ಬಾರಿ ಕೇಂದ್ರ ಬಜೆಟ್ ಹೊಸ 'ಕರ್ತವ್ಯ ಭವನದಲ್ಲಿ ನಡೆಯಲಿದೆ. ಈ ಹಿನ್ನೆಲೆಯಲ್ಲಾದರೂ, ವಿತ್ತ ಸಚಿವರು ತನ್ನ ಕರ್ತವ್ಯವನ್ನು ಪ್ರಾಮಾಣಿಕವಾಗಿ, ಜನಪರವಾಗಿ ನಿಭಾಯಿಸುತ್ತಾರೆಯೇ ಎಂದು ಕಾದು ನೋಡಬೇಕಾಗಿದೆ.

> **ಅತಿ ಹೆಚ್ಚು ಜಿಎಸ್‌ಟಿ ತೆರಿಗೆ ಪಾವತಿಸುವ ರಾಜ್ಯಗಳಿಗೆ ಕೇಂದ್ರ ಸರಕಾರ ಅನ್ಯಾಯ ಮಾಡುತ್ತಿದೆ ಎನ್ನುವ ಆಕ್ರೋಶ ದಕ್ಷಿಣ ರಾಜ್ಯಗಳದ್ದಾಗಿವೆ. ದಕ್ಷಿಣ ರಾಜ್ಯಗಳು ಕಟ್ಟುವ ತೆರಿಗೆಯ ಹಣವನ್ನು ಕೇಂದ್ರ ಸರಕಾರ ಉತ್ತರ ಭಾರತದ ರಾಜ್ಯಗಳಿಗೆ ಸುರಿಯುತ್ತಿವೆ. ಈ ಹಣ ಅಭಿವೃದ್ಧಿ ಕಾರ್ಯಗಳಿಗೆ ಬಳಕೆಯಾಗದೆ ಮಂದಿರ, ಪ್ರತಿಮೆ, ಪಾರ್ಕ್ ಎಂದು ಭಾವನಾತ್ಮಕ ರಾಜಕೀಯಗಳಿಗೆ ದುರ್ಬಳಕೆಯಾಗುತ್ತಿದೆ. ಕರ್ನಾಟಕ ಸರಕಾರವಂತೂ ತನ್ನ ಆಕ್ರೋಶವನ್ನು ಹಲವು ಬಾರಿ ವ್ಯಕ್ತಪಡಿಸಿದೆ.**

ಹಣಕಾಸು ಸಚಿವಾಲಯದಲ್ಲಿ ಬಹಳಷ್ಟು ಬದಲಾವಣೆಗಳಾಗಿದ್ದು, ಮೊತ್ತ ಮೊದಲ ಬಾರಿಗೆ ಬಜೆಟ್ ರೂಪಿಸುವಾಗ ನಿರ್ಮಲಾ ಸೀತಾರಾಮನ್ ನಿಯೋಜಿತ ಹಣಕಾಸು ಕಾರ್ಯದರ್ಶಿಯ ಹೊರತಾಗಿ ಕೆಲಸ ಮಾಡಲಿದ್ದಾರೆ. ಬಜೆಟ್ ಸಿದ್ಧಪಡಿಸಲು ವಿವಿಧ ತಂಡಗಳ ಜೊತೆಗಿನ ಸಮನ್ವಯವನ್ನು ಆರ್ಥಿಕ ವ್ಯವಹಾರಗಳ ಕಾರ್ಯದರ್ಶಿ ಹೊರಲಿದ್ದಾರೆ. ಕೋರ್ ಸಮಿತಿಯಲ್ಲಿ ಅನುಭವಿ ತಲೆಗಳು ಮಾತ್ರವಲ್ಲ ಹೊಸ ಮುಖಗಳೂ ಇವೆ. ಇವೆಲ್ಲವೂ ಬಜೆಟ್‌ನ ಮೇಲೆ ಯಾವ ರೀತಿಯಲ್ಲಿ ಪ್ರಭಾವ ಬೀರಲಿದೆ ಎನ್ನುವುದನ್ನು ಕಾದು ನೋಡಬೇಕಾಗಿದೆ.ದೇಶದ ಆರ್ಥಿಕತೆ ಭಾರೀ ಸಂಕಟದಲ್ಲಿರುವ ಸಮಯ. ಅಮೆರಿಕ ಹೇರುತ್ತಿರುವ ಸುಂಕ ಮತ್ತು ಇನ್ನಿತರ ಬೆದರಿಕೆಗಳು ಭಾರತದ ಆರ್ಥಿಕತೆಯ ಮೇಲೆ ಭಾರೀ ದುಷ್ಪರಿಣಾಮಗಳನ್ನು ಬೀರುತ್ತಿವೆ. ಆಮದು ರಫ್ತುಗಳಲ್ಲಾಗಿರುವ ಏರುಪೇರುಗಳು ದೇಶದಲ್ಲಿ ಆರ್ಥಿಕ ಬಿಕ್ಕಟ್ಟನ್ನು ಸೃಷ್ಟಿಸುವ ಸಾಧ್ಯತೆಗಳಿವೆ. ಒಂದೆಡೆ ಬೆಲೆಯೇರಿಕೆ, ಮಗದೊಂದೆಡೆ ರಫ್ತನಲ್ಲಾಗಿರುವ ಇಳಿಕೆಯಿಂದಾಗಿ ಎದುರಾಗಿರುವ ನಿರುದ್ಯೋಗಗಳು ಭಾರತವನ್ನು ಇಕ್ಕಟ್ಟಿನಲ್ಲಿ ಸಿಲುಕಿಸಿದೆ. ಇರಾನ್ ಮತ್ತು ರತ್ನದ ಜೊತೆಗೆ ಯಾವುದೇ ವ್ಯವಹಾರಿಕ ಸಂಬಂಧಗಳನ್ನು ಇಟ್ಟುಕೊಳ್ಳುವುದಕ್ಕೆ ಅಮೆರಿಕ ಅಡ್ಡಿಯಾಗಿದೆ. ಇದೇ ಸಂದರ್ಭದಲ್ಲಿ ಭಾರತದಲ್ಲಿ ಬಂಡವಾಳ ಹೂಡಿಕೆ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿದೆ. ಇವೆಲ್ಲವುಗಳನ್ನು ಹಣಕಾಸು ಸಚಿವರು ತನ್ನ ಬಜೆಟ್‌ನಲ್ಲಿ ಹೇಗೆ ನಿಭಾಯಿಸುತ್ತಾರೆ ಎನ್ನುವುದರ ಮೇಲೆ ಭಾರತದ ಆರ್ಥಿಕತೆಯ ಭವಿಷ್ಯ ನಿಂತಿದೆ. ಪ್ರಧಾನಿ ಮೋದಿಯ ತುತ್ತೂರಿಯ ಬಣ್ಣ ಕರಗಿದೆ. ಅವರು ವಂದೇಮಾತರಂ, ಸೋಮನಾಥ ದೇವಾಲಯ ಎಂದು ತನ್ನ ವರ್ಚಸ್ಸನ್ನು ಉಳಿಸಿಕೊಳ್ಳಲು ಭಾವನಾತ್ಮಕ ವಿಷಯಗಳ ಮೊರೆ ಹೋಗಿದ್ದಾರೆ. ಆದರೆ, ಈ ಪಲಾಯನ ವಾದ ಭಾರತದ ಆರ್ಥಿಕತೆಯನ್ನು ಇನ್ನಷ್ಟು ಕಂಗೆಡಿಸಲಿದೆ. ಈ ನಿಟ್ಟಿನಲ್ಲಿ ವಿತ್ತ ಸಚಿವರ ಮೇಲೆ ಭಾರೀ ಒತ್ತಡಗಳಿವೆ ರೈತರ ಕನಿಷ್ಠ ಬೆಂಬಲ ಬೆಲೆಯೂ ಸೇರಿದಂತೆ ನನೆಗುದಿಯಲ್ಲಿರುವ ರೈತರ ಬೇಡಿಕೆಗಳಿಗೆ ಹೇಗೆ ಸ್ಪಂದಿಸುತ್ತಾರೆ ಎನ್ನುವುದನ್ನು ಕಾದು ನೋಡಬೇಕು. ಸ್ವದೇಶಿ ಉದ್ಯಮಗಳಿಗೆ ಉತ್ತೇಜನ ನೀಡಲು ಸರಕಾರ ಏನೇನು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತವೆ ಎನ್ನುವುದು ಕೂಡ ಮುಖ್ಯವಾಗುತ್ತದೆ. ಇದೇ ಸಂದರ್ಭದಲ್ಲಿ ರಾಜ್ಯ ಸರಕಾರಗಳು ಕೇಂದ್ರದಿಂದ ಭಾರೀ ನಿರೀಕ್ಷೆಯಲ್ಲಿವೆ. ಜಿಎಸ್‌ಟಿ ವ್ಯವಸ್ಥೆಯ ಸರಳೀಕರಣದ ಬಳಿಕ ರಾಜ್ಯಗಳ ಆದಾಯ ಭಾರೀ ಪ್ರಮಾಣದಲ್ಲಿ ಇಳಿಕೆಯಾಗಿವೆ. ಬಿಜೆಪಿಯೇತರ ಸರಕಾರಗಳಿರುವ ರಾಜ್ಯಗಳ ಜೊತೆಗೆ ಕೇಂದ್ರ ಸರಕಾರ ಮಲತಾಯಿ ಧೋರಣೆ ಅನುಸರಿಸುತ್ತಿದೆ ಎನ್ನುವ ವ್ಯಾಪಕ ಆರೋಪಗಳಿವೆ. ಮಾತ್ರವಲ್ಲ ದಿಲ್ಲಿಯಲ್ಲಿ ಪ್ರತಿಭಟನೆಗಳನ್ನೂ ನಡೆಸಿವೆ. ರಾಜ್ಯಗಳಿಗೆ ಬಲವಾದ ಆದಾಯ ಸಂರಕ್ಷಣಾ ಕಾರ್ಯವಿಧಾನ ರೂಪಿಸಬೇಕು, ಜಿಎಸ್‌ಟಿ ಪರಿಹಾರ ಸಸ್‌ನಂತೆಯೇ ಆದಾಯ ನಷ್ಟಕ್ಕೆ ಸಂಪೂರ್ಣ ಪರಿಹಾರ ನೀಡಬೇಕು ಎಂದು ಕರ್ನಾಟಕ ಸರಕಾರ ಕೇಂದ್ರವನ್ನು ಒತ್ತಾಯಿಸಿದೆ. ಹಣಕಾಸಿನ ಸಮಾನತೆ ಮತ್ತು ಸಹಕಾರಿ ಒಕ್ಕೂಟ ಪುನಃ ಸ್ಥಾಪಿಸಲು ತಂಬಾಕಿನ ಮೇಲಿನ ಅಬಕಾರಿ ಸುಂಕ ಮತ್ತು ಪಾನ್ ಮಸಾಲಾ ಮೇಲಿನ ಸೆಸ್‌ನ್ನು 50:50 ಅನುಪಾತದಲ್ಲಿ ಕೇಂದ್ರ ಹಾಗೂ ರಾಜ್ಯ ಹಂಚಿಕೊಳ್ಳಬೇಕು ಎಂಬ ಬೇಡಿಕೆಯನ್ನು ವಿತ್ತ ಸಚಿವರ ಮುಂದಿಟ್ಟಿದೆ.ಜಿ ರಾಮ್ ಜಿ ಕಾಯ್ದೆಯು ರಾಜ್ಯದ ಮೇಲೆ ಹೆಚ್ಚುವರಿ ಹೊರೆಯನ್ನು ಹಾಕಲಿದೆ. ಜಿ ರಾಮ್‌ಜಿ ಯಶಸ್ವಿಯಾಗಬೇಕಾದರೆ ಕರ್ನಾಟಕಕ್ಕೆ ಸುಮಾರು 2000 ಕೋಟಿ ರೂಪಾಯಿ ಬೇಕಾಗುತ್ತದೆ.



# ರಾಮಾಯಣ
## ಸಪ್ತ ಜನಾಶ್ರಮದ ವರ್ಣನೆ

• ಹಿಂದಿನ ಸಂಚಿಕೆಯಿಂದ **120 ನೆಯ ಅಧ್ಯಾಯ**

ನಿಮ್ಮಿಬ್ಬರಲ್ಲಿ ವಾಲಿ ಯಾರು ನೀನಾರು ಎಂಬ ಭೇದವನ್ನು ತಿಳಿಯಲಾರದೆ ಸಮಸ್ತ ಶತ್ರುಗಳ ಪ್ರಾಣಗಳನ್ನ ಪಹರಿಸುವ ನನ್ನ ಬಾಣಗಳನ್ನು ಸಂಧಾನಮಾಡದಿದ್ದೆನು. ಮೊದಲು ನಿನ್ನನ್ನು ವಾಲಿಯಿಂದೆಣಿಸಿ ಶರಸಂಧಾನಮಾಡಲೆತ್ನಿಸಿ ಆಮೇಲೆ ನೀನಿರಬಹುದೆಂಬ ಸಂದೇಹದಿಂದ ಸುಮ್ಮನಾದೆನು. ನಾನು ತಿಳಿಯದೆ ಬಾಣವನ್ನೆಸೆಯುವುದರಿಂದ ನನ್ನ ಪ್ರಾಣಸಖನಾದ ನೀನು ಹೋದರೆ, ಆ ಬಳಿಕ ಕೋಪದಿಂದ ವಾಲಿಯ ಮೇಲೆಯೂ ಅಂಬನ್ನು ತೊಟ್ಟರೆ, ನಿಮ್ಮ ವಂಶಕ್ಕೆಲ್ಲಾ ಹಾನಿಬರುವುದೆಂದು ಸುಮ್ಮನಿದ್ದೆನು. ಅದಲ್ಲದೆ ನಿನ್ನನ್ನು ವಾಲಿಯೆಂದು ಶರಸಂಧಾನಮಾಡುವುದರಿಂದ ಹಾನಿಯಾದರೆ ನನ್ನಲ್ಲಿ ಅಜ್ಞಾನವೂ ಮೂಢತ್ವವೂ ಪ್ರಮಾಣಹೀನತೆಯೂ ಮಕ್ಕಳಾಟಿಕೆಯೂ ಇದೆಯೆಂದು ಜನರು ತಿಳಿದುಕೊಳ್ಳುವರು. ವಿಶ್ವಾಸ ಘಾತಕನೆಂಬ ಮಹತ್ತಾದ ಅಪವಾದವು ನನಗೆ ಸಂಭವಿಸುವುದು. ನಾನೂ ಲಕ್ಷ್ಮಣನ ಸೀತಾ ದೇವಿಯ ನಿನ್ನ ಅಧೀನರಾಗಿದ್ದೇವೆ. ಆದಕಾರಣ ನೀನು ನನ್ನಲ್ಲಿ ಸಂಶಯವನ್ನು ಮಾಡದೆ ಪುನಃ ವಾಲಿಯೊಡನೆ ಯುದ್ಧವನ್ನು ಮಾಡು. ನಾನು ಒಂದು ಕ್ಷಣಮಾತ್ರದಲ್ಲಿ ಆತನನ್ನು ಕೊಲ್ಲುತ್ತೇನೆ. ಇಂದು ನನ್ನ ಶರಹತಿಯಿಂದ ವಾಲಿಯು ಗಾಯಪಡೆದು ಬಿದ್ದು ಹೊರಳುವುದನ್ನು ನೀನು ಕಾಣುವೆ. ಆದರೆ ನಿಮ್ಮಿಬ್ಬರ ಭೇದವನ್ನು ತಿಳಿಯುವುದಕ್ಕೆ ಒಂದು ಉಪಾಯವನ್ನು ಹೇಳುತ್ತೇನೆ ಕೇಳು. ನೀವಿಬ್ಬರೂ ಯುದ್ಧವನ್ನು ಮಾಡುವ ಸಮಯದಲ್ಲಿ ನಿನ್ನ ಸ್ವರೂಪವು ತಿಳಿಯುವಂತೆ ಒಂದು ಕುರುಹನ್ನು ಮಾಡಿಕೊ. ಕುಸುಮಿತವಾದ ನಾಗಪುಷ್ಪಿಯ ಲತೆಯನ್ನು ಕೊರಳಿಗೆ ಅಲಂಕಾರವಾಗಿ ಧರಿಸಿಕೊಂಡರೆ ನೀನು ಸುಗ್ರೀವನೆಂದು ನನಗೆ ಕುರುಹಾಗಿರುವುದು ಎಂದು ನುಡಿದು ಲಕ್ಷ್ಮಣನನ್ನು ಕರೆದು ಎಲೈ ಲಕ್ಷ್ಮಣ, ನೀನು ಮಹಾತ್ಮನಾದ ಸುಗ್ರೀವನಿಗೆ ಪುಷ್ಪಿತವಾದ ನಾಗಪುಷ್ಪಿಯ ಲತೆಯನ್ನು ತಂದು ಕೊರಳಿಗೆ ಹಾಕು ಎಂದು ಹೇಳಿದನು. ಆಗ ಲಕ್ಷ್ಮಣನು ಆ ವನದಲ್ಲಿ ಹುಡುಕಿ ಕುಸುಮಿತವಾದ ಒಂದು ನಾಗಪುಷ್ಪಿಯ ಲತೆಯನ್ನು ತಂದು ಆತನ ಕೊರಳಿಗೆ ಹಾಕಿದನು. ಆಗ ಸುಗ್ರೀವನು ಬಲಾಕಾಪಕ್ಷಿಗಳ ಮಾಲೆಯಿಂದ ಕೂಡಿದ ಸಂಜೆಯ ಮೇಘದಂತೆ ಒಪ್ಪುತ್ತಿದ್ದನು.

**ಸಪ್ತ ಜನಾ ಶ್ರಮದ ವರ್ಣನೆ:** ಆ ಬಳಿಕ ಶ್ರೀರಾಮನು ಸುವರ್ಣಮಯವಾದ ಬಿಲ್ಲಿಗೆ ಹೆದೆಯನ್ನೇರಿಸಿ ಯುದ್ಧ ಸಾಧಕವಾದ ಸೂರ್ಯಪ್ರಭೆಯಂತೆ ಕಾಂತಿಯುಳ್ಳ ಅಂಬುಗಳನ್ನು ತೆಗೆದುಕೊಂಡು ಋಷ್ಯಮೂಕಪರ್ವತವನ್ನು ಬಿಟ್ಟು ವಾಲಿಯ ಭುಜಬಲಪರಾಕ್ರಮದಿಂದ ರಕ್ಷಿಸಲ್ಪಟ್ಟ ಕಿಷ್ಕಿಂಧೆಗೆ ಸುಗ್ರೀವನನ್ನು ಮುಂದಿಟ್ಟುಕೊಂಡು ಹೊರಟನು. ಆತನ ಹಿಂದೆ ಲಕ್ಷ್ಮಣನೂ ಹನುಮಂತ ನೀಲ ನಳ ತಾದರೂ ಹೊರಟರು. ಹೀಗೆ ಅವರು ಕಿಷ್ಕಿಂದಾಪಟ್ಟಣಕ್ಕೆ ಹೋಗುತ್ತ ಮಧ್ಯಮಾರ್ಗದಲ್ಲಿ ಅನೇಕ ಪುಷ್ಪಿತವಾದ ವೃಕ್ಷಗಳನ್ನೂ ನಿರ್ಮಲೋದಕವುಳ್ಳ ಬೇರೆಬೇರೆ ಸಮುದ್ರಗಾಮಿಗಳಾದ ನದಿಗಳನ್ನೂ ಅನೇಕ ಪರ್ವತಗಳನ್ನೂ ಆ ಪರ್ವತಗಳ ನಿರ್ಝರಗಳನ್ನೂ ಗುಹೆಗಳನ್ನೂ ಭಯಂಕರವಾದ

ಮುಂದುವರಿಯುವುದು...

# 10ಸಾವಿರ ಜನ, ಪೌರ ಕಾರ್ಮಿಕ ಮಹಿಳೆಯರಿಗೆ ಕಬ್ಬು, ಎಳ್ಳು, ಬೆಲ್ಲ ವಿತರಣೆ

• ಉದಯವಾಹಿನಿ, ಜಯನಗರ



ತಿಲಕ್ ನಗರ ವಾರ್ಡ್ ಎಲ್.ಐ.ಸಿ.ಕಾಲೋನಿಯಲ್ಲಿ ಜಯನಗರ ಸಂಕ್ರಾಂತಿ ಪ್ರಯುಕ್ತ ಹತ್ತು ಸಾವಿರ ಜನ ಮತ್ತು ಪೌರ ಕಾರ್ಮಿಕ ಮಹಿಳೆಯರಿಗೆ ಎಳ್ಳು-ಬೆಲ್ಲ ವಿತರಿಸಲಾಯಿತು. ಬಿಬಿಎಂಪಿ ಮಾಜಿ ಆಡಳಿತ ಪಕ್ಷದ ನಾಯಕ ಮತ್ತು ಜಯನಗರ ಗ್ಯಾರಂಟಿ ಯೋಜನೆಗಳು ಅನುಷ್ಠಾನ ಸಮಿತಿ ಅಧ್ಯಕ್ಷ ಎನ್.ನಾಗರಾಜು ಗೋಪೂಜೆ ನೆರವೇರಿಸಿ ಕಬ್ಬು, ಎಳ್ಳು ವಿತರಿಸಿದರು.

ನಂತರ ಮಾತನಾಡಿದ ಎನ್.ನಾಗರಾಜು ಮಾತನಾಡಿ, ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಮತ್ತು ಕೆಪಿಸಿಸಿ ಮಹಿಳಾ ವಿಭಾಗದ ರಾಜ್ಯಾಧ್ಯಕ್ಷೆ ಸೌಮ್ಯ ರೆಡ್ಡಿ ನೇತೃತ್ವದಲ್ಲಿ ಪ್ರತಿ ವರ್ಷ ಸಂಕ್ರಾಂತಿ ಹಬ್ಬದ ಪ್ರಯುಕ್ತ ಕಬ್ಬು, ಎಳ್ಳು ಬೆಲ್ಲ ವಿತರಿಸಿ ಸಂಕ್ರಾಂತಿಯನ್ನು ಸಂಭ್ರಮಿಸಲಾಗುತ್ತಿದೆ. ಜಯನಗರ ವಿಧಾನಸಭಾ ಕ್ಷೇತ್ರದಲ್ಲಿ ಸರ್ಕಾರದ 5 ಗ್ಯಾರಂಟಿ ಯೋಜನೆಗಳನ್ನು ಮನೆ, ಮನೆಗೆ ತಲುಪಿಸಲಾಗಿದೆ.

**ಜಯನಗರ ಸಂಕ್ರಾಂತಿ ಹಬ್ಬ**

ಇದರಿಂದ ನಮ್ಮ ಕ್ಷೇತ್ರದಲ್ಲಿ ಲಕ್ಷಾಂತರ ಫಲಾನುಭವಿಗಳಿಗೆ ಅನುಕೂಲವಾಗಿದೆ ಎಂದರು. ಕಬ್ಬನ್ನು ರೈತರಿಂದ ನೇರವಾಗಿ ರೈತರಿಂದ ಖರೀದಿಸಿ 10 ಸಾವಿರ ಜನರಿಗೆ ವಿತರಿಸಲಾಗುತ್ತಿದೆ. ಸಂಕ್ರಾಂತಿ ಹಬ್ಬದ ಕಿಚ್ಚು ಹಾಯಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಸಂಕ್ರಾಂತಿ ಹಬ್ಬ ಎಲ್ಲರ ಬಾಳಿನಲ್ಲಿ ಬೆಳಕು ಮೂಡಲಿ, ನಂಬಿಕೆ, ಪ್ರೀತಿ, ವಿಶ್ವಾಸದಿಂದ ಎಲ್ಲರು ಬಾಳೋಣ ಎಂದು ಹೇಳಿದರು.

ಎಲ್.ಸಿ.ಹೆಚ್ ನಿವಾಸಿಗಳ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ಸದಸ್ಯರು ಸಹಕಾರ ನೀಡಿದರು, ಸಂಕ್ರಾಂತಿ ಹಬ್ಬದ ಅಂಗವಾಗಿ ಮಹಿಳೆಯರು ಬೃಹತ್ ರಂಗೋಲಿ ಬಿಡಿಸಿ ಸಂಭ್ರಮಾಚಣೆ ಮಾಡಿದರು.

# 2026 ಈ ಸಂವತ್ಸರದ ಮಕರ ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು



ಕಲಾ ಸಾಹಿತ್ಯ
ಕೃಷ್ಣಪ್ಪ ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

**ಬಹುಶಹ:** ಪ್ರತಿವರ್ಷ ಜನವರಿ ಮಾಹೆ ದಿನಾಂಕ 14 ರಂದೇ ಬರುವ ಸುಗ್ಗಿ ಕಾಲದ ಹೊಸ ವರ್ಷದ ಪ್ರಾರಂಭಿಕ ಮೊದಲ ಹಬ್ಬ ಮಕರ ಸಂಕ್ರಾಂತಿ ಹಬ್ಬ.

ಈ ಹಬ್ಬವನ್ನು ನಾವು ರೈತರ ಹಬ್ಬ, ಜನಪದರ ಹಬ್ಬ, ದೇಸಿ ಹಬ್ಬ ಎಂದು ಬಿಂಬಿಸುತ್ತೇವೆ. ಆದರೆ ಕಳೆದ ಮೂರು ವರ್ಷಗಳಿಂದ ಜನವರಿ 15 ರಂದು ಸಂಕ್ರಾಂತಿ ಹಬ್ಬ ಬಂದಿರುವುದು ಒಂದು ವಿಧದಲ್ಲಿ ಕ್ಯಾಲೆಂಡರಿನ ವಿಶೇಷ. ಭೂ ಮಧ್ಯರೇಖೆಯ ದಕ್ಷಿಣಕ್ಕೆ ಸೂರ್ಯನು ಸಂಚರಿಸುತ್ತಾನೆ. ಸೂರ್ಯನು ಮಕರ ರಾಶಿಗೆ ಹೋಗುವ ಸಮಯ. ಅಂದರೆ ಸೂರ್ಯನು ಒಂದು ರಾಶಿಯಿಂದ ಮತ್ತೊಂದು ರಾಶಿಗೆ ಚಲಿಸುವಿಕೆ ಅಥವಾ ಪಥಸಂಚಲನವಾಗುವುದೇ ಮಕರ ಸಂಕ್ರಾಂತಿಯ ವಿಶೇಷ.

ಇದನ್ನೇ ನಾವು ಉತ್ತರಾಯಣ ಪುಣ್ಯಕಾಲ ಅಥವಾ ಮಕರ ಸಂಕ್ರಮಣ ಎಂಥಲೂ ಕರೆಯುತ್ತೇವೆ. ವರ್ಷದಲ್ಲಿ ಮೊದಲನೆಯ ಹಬ್ಬ ಇಡೀ ವರ್ಷಪೂರ್ತಿ ಪುಣ್ಯ ಕಾಲವಾಗಲಿ ಎಂದು ಪ್ರಾರ್ಥಿಸಿ,ಪೂಜಿಸುವ ಹಬ್ಬ ಮಕರ ಸಂಕ್ರಾಂತಿ ಹಬ್ಬ. ಪ್ರಕೃತಿಯನ್ನು ಪೂಜಿಸಿ,ಗೌರವಿಸಿ, ಕಾಪಾಡಿ,ಆರಾಧಿಸುವ ಹಬ್ಬ ಈ ಹಬ್ಬ. ಮಿಗಿಲಾಗಿ ಪಂಚಭೂತಗಳ ಹಬ್ಬ. ಭಾರತೀಯ ಸಂಸ್ಕೃತಿಯ ಸಂಪ್ರದಾಯವನ್ನು ಪರಂಪರಾಗತವಾಗಿ ಹಿರಿಯರು ಆಚರಿಸಿಕೊಂಡು ಬಂದ ಶುಭ ಸೂಚನೆಯ ಹಬ್ಬ ಈ ಮಕರ ಸಂಕ್ರಾಂತಿ ಹಬ್ಬ. ಈ ಹಬ್ಬವು ಎಲ್ಲರಲ್ಲೂ ಭಾವೈಕ್ಯತೆ, ಐಕ್ಯತೆ,ಏಕತೆ, ಸಹಬಾಳ್ವಿಕೆ, ಸಹೋದರಿ ಸಹೋದರತ್ವ, ಸಮಬಾಳು, ಸಮಪಾಲು, ಎಲ್ಲಾ ಧರ್ಮಗಳ ಭಾವನೆ ಒಂದೇ, ಮೊದಲಿಗೆ ನಾವೆಲ್ಲಾ ಮನುಷ್ಯರು ಹಾಗೂ ನಾವೆಲ್ಲಾ ಒಂದೇ ಎಂಬುದೇ ವಸುದೈವ ಕುಟುಂಬಕಂ ಈ ಹಬ್ಬದ ವಿಶೇಷ ಮತ್ತು **ವೈಶಿಷ್ಟ್ಯ.** ಬಹುತೇಕ ಎಲ್ಲರ ದೇಹಕ್ಕೆ ಆರೋಗ್ಯ ಇದೆ, ಆದರೆ ಮನಸ್ಸಿಗೆ ಆರೋಗ್ಯ, ನೆಮ್ಮದಿ, ಶಾಂತಿ, ತಾಳ್ಮೆ, ಸಹನೆ, ಕರುಣೆ,ಮಮತೆ ಇಲ್ಲದಿರುವುದೇ ಒಂದು ತರಹ **ವಿಪರ್ಯಾಸ.** ಮನಸ್ಸು ಶುದ್ಧಿ ಹಾಗೂ ಭಕ್ತಿ ಇಲ್ಲದೇ ಮಂತ್ರದ ಫಲವೇನು ಎಂಬ ಪುರಂದರದಾಸರ ವಾಣಿಯನ್ನು ನೆನಯಬೇಕಾಗಿದೆ. ಆದ್ದರಿಂದ ಈ ಹಬ್ಬವನ್ನು ಆಚರಿಸುವುದರ ಜೊತೆಗೆ ಈ ವರ್ಷಕ್ಕೆ ಮಾತ್ರ ಸೀಮಿತವಾಗದೇ ನಿತ್ಯೋತ್ಸವವಾಗಬೇಕು. ವರ್ಷ ಪೂರ್ತಿ ನಿರ್ಮಲ ವಾತಾವರಣದಲ್ಲಿ ಕಾಯಾ-ವಾಚಾ ಮನಸ್ಸನ್ನು ಶುದ್ಧ- ಪರಿಶುದ್ಧವಾಗಿ ಇಟ್ಟುಕೊಳ್ಳುವುದು ಮನುಷ್ಯನ ಆದರ್ಶ ಗುಣವಾಗಬೇಕು.

ಬಾಹ್ಯ ಸೌಂದರ್ಯ ನಾಗರೀಕತೆಯ ಸಂಕೇತವಾದರೆ, ಆಂತರಿಕ ಸೌಂದರ್ಯ ಸಂಸ್ಕೃತಿಯ ಸಂಕೇತ. ಅಂತರಂಗ ಮತ್ತು ಬಹಿರಂಗ ಶುದ್ಧಿ ಗೊಳಿಸುವುದು ಧರ್ಮದ ಮುಖ್ಯ ಗುರಿ. ಆಗ ನಾವುಗಳು ನಮ್ಮ ನಮ್ಮ ಧರ್ಮಗಳಲ್ಲಿ ಬರುವ ನಂಬಿಕೆಯ ಹಬ್ಬಗಳನ್ನು ಆಚರಿಸುವುದರಲ್ಲಿ ಅರ್ಥವಿದೆ. ಸಜ್ಜನ ಎಲ್ಲಾ ಹಿರಿಯ ಮತ್ತು ಕಿರಿಯ ನಾಗರೀಕ ಸಹೃದಯ ಮನಸ್ಸುಗಳಿಗೆ 2026 ರ ಮಕರ ಸಂಕ್ರಾಂತಿ ಹಬ್ಬದ ಹಾರ್ದಿಕ ಶುಭಾಶಯಗಳು



# ರಾಷ್ಟ್ರೀಯ ಭದ್ರತೆಗೆ ಗಂಭೀರ ಅಪಾಯ !

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಹಾಗೂ ಕರ್ನಾಟಕದಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶಿ ನುಸುಳುಕೋರರ ಸಂಖ್ಯೆ ಅಪಾಯಕಾರಿ ಮಟ್ಟದಲ್ಲಿ ಹೆಚ್ಚುತ್ತಿದೆ. ಇದು ರಾಷ್ಟ್ರದ ಭದ್ರತೆ, ಕಾನೂನು ಸುವ್ಯವಸ್ಥೆ ಮತ್ತು ಸಾಮಾಜಿಕ ಸಮತೋಲನಕ್ಕೆ ನೇರ ಸವಾಲಾಗಿದೆ ಎಂದು ಹಿಂದೂ ಜನಜಾಗೃತಿ ಸಮಿತಿಯ ಶ್ರೀ. ಮೋಹನ್ ಗೌಡ ಇವರು ಗಂಭೀರ ಎಚ್ಚರಿಕೆ ನೀಡಿದರು. ಇತ್ತೀಚಿನ ಗುರುತಿನ ಅಭಿಯಾನದಲ್ಲಿ ಅನೇಕ ಅಕ್ರಮ ನುಸುಳುಗಾರರ ಬಳಿ ನಕಲಿ ಆಧಾರ್, ಪ್ಯಾನ್ ಕಾರ್ಡ್ ಹಾಗೂ ಮತದಾರರ ಗುರುತಿನ ಚೀಟಿಗಳು ಪತ್ತೆಯಾಗಿವೆ. ಕೇವಲ ರೂ.1500ಕ್ಕೆ ಆಧಾರ್ ಕಾರ್ಡ್ ಸಿಗುತ್ತಿರುವುದು ದೇಶದ ಗುರುತಿನ ವ್ಯವಸ್ಥೆಯ ದುರ್ಬಲತೆಯನ್ನು ತೋರಿಸುತ್ತದೆ.

**ಪ್ರಮುಖ ಬೇಡಿಕೆಗಳು**


- ಅಕ್ರಮ ಬಾಂಗ್ಲಾದೇಶಿ ನುಸುಳುಗಾರರ ವಿರುದ್ಧ ವಿಶೇಷ ತನಿಖಾ ಅಭಿಯಾನ ತಕ್ಷಣ ಆರಂಭಿಸಿ, ದೇಶದ್ರೋಹದ ಆರೋಪ ದಾಖಲಿಸಬೇಕು.
- ನಕಲಿ ದಾಖಲೆ ತಯಾರಿಸುವ ಜಾಲವನ್ನು ಬೇರುಸಮೇತ ನಾಶಪಡಿಸಬೇಕು.
- ಎಲ್ಲಾ ಅಕ್ರಮ ಬಾಂಗ್ಲಾದೇಶಿಗಳನ್ನು ಗುರುತಿಸಿ ತಕ್ಷಣವೇ ಡಿಪೋರ್ಟ್ ಮಾಡಬೇಕು.
- ಅವರಿಗೆ ಬೆಂಬಲ ನೀಡುವ ಅಧಿಕಾರಿಗಳು ಮತ್ತು ಮಧ್ಯವರ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು.
- UNHCR ಕಾರ್ಡ್ ದುರುಪಯೋಗ ಕುರಿತು ಕೇಂದ್ರ ಸರ್ಕಾರ ತಕ್ಷಣ ಹಸ್ತಕ್ಷೇಪ ಮಾಡಬೇಕು.



ಕೆಲವರ ಬಳಿ ಬಾಂಗ್ಲಾದೇಶ, ಭಾರತದ ಎರಡೂ ಮತದಾರರ ಗುರುತಿನ ಚೀಟಿಗಳು ಇರುವುದೂ ಬೆಳಕಿಗೆ ಬಂದಿದೆ. ಬೆಟ್ಟದಾಸನಪುರ, ಹುಲಿಮಂಗಲ ಹಾಗೂ ಯಲಹಂಕ ಸೇರಿ ಹಲವೆಡೆ ಅಕ್ರಮ ವಸತಿಗಳು ಬೆಳೆಯುತ್ತಿದ್ದು, ಜನನ ಪ್ರಮಾಣಪತ್ರ, ಬ್ಯಾಂಕ್ ಖಾತೆ, ಸಾಲ ಹಾಗೂ ಇತರ ಸರ್ಕಾರಿ ಸೌಲಭ್ಯಗಳನ್ನು ದುರುಪಯೋಗ ಮಾಡಲಾಗುತ್ತಿದೆ. ಎಕ್ಸ್‌ಪೈರ್ಡ್ ಗ್ಯಾಸ್ ಸಿಲಿಂಡರ್‌ಗಳ ಮರುಮಾರಾಟದಂತಹ ಜೀವಘಾತಕ ಅಕ್ರಮ ಚಟುವಟಿಕೆಗಳೂ ಪತ್ತೆಯಾಗಿವೆ. ಹುಲಿಮಂಗಲದಲ್ಲಿ ನಡೆದ ತೆರವು ಕಾರ್ಯಾಚರಣೆ ವೇಳೆ ಭಾರತ ಮಾತಾ ಕೀ ಜೈ ಗೆ ನಿರಾಕರಣೆ ಮಾಡಿ ಜೈ ಬಂಗ್ಲಾ ಘೋಷಣೆ ಕೂಗಿದ ಘಟನೆ ರಾಷ್ಟ್ರವಿರೋಧಿ ಮನೋಭಾವವನ್ನು ಬಹಿರಂಗಪಡಿಸಿದೆ. ಹಿಂದಿನ ವರ್ಷಗಳಲ್ಲಿ ಬಾಂಗ್ಲಾದೇಶ ಮೂಲದ ಭಯೋತ್ಪಾದಕರ ಬಂಧನಗಳು ನಡೆದಿರುವುದರಿಂದ ಈ ಸಮಸ್ಯೆಯ ಗಂಭೀರತೆ ಇನ್ನಷ್ಟು ಹೆಚ್ಚಾಗಿದೆ. ಪೊಲೀಸ್ ಹಾಗೂ ಆಡಳಿತದ ನಿರ್ಲಕ್ಷ್ಯದಿಂದ ನಕಲಿ ದಾಖಲೆ ತೋರಿಸಿ ಅಕ್ರಮ ನುಸುಳಿಗಾರರು ತಪ್ಪಿಸಿಕೊಳ್ಳುತ್ತಿದ್ದಾರೆ. ಸಂಘಟನೆಗಳ ಒತ್ತಡದಿಂದ ಇತ್ತೀಚೆಗೆ ಹೆಬ್ಬಗೋಡಿ ಹಾಗೂ ಆನೇಕಲ್ ವ್ಯಾಪ್ತಿಯಲ್ಲಿ 33 ಅಕ್ರಮ ಬಾಂಗ್ಲಾದೇಶಿಗಳು ಬಂಧನ ಆಗಿದ್ದಾರೆ. ಮಾಧ್ಯಮ ವರದಿಗಳ ಪ್ರಕಾರ, ಕರ್ನಾಟಕದಲ್ಲಿ ಸುಮಾರು 20 ಲಕ್ಷ ಅಕ್ರಮ ಬಾಂಗ್ಲಾದೇಶಿಗಳು ವಾಸಿಸುತ್ತಿರುವ ಅಂದಾಜಿದೆ.

# ಸಂಕ್ರಾಂತಿ ಹಬ್ಬ: ಸಂಸ್ಕೃತಿ, ಸಂಭ್ರಮ, ಸಹಭಾಗಿತ್ವದ ಸಂಕೇತ

ತಿಲಗುಳ ಹಬ್ಬ ಎಲ್ಲೆಡೆ ಆಚರಣೆಗಳ ರೂಪ ವಿಭಿನ್ನವಾದರೂ ಭಾವನೆ ಒಂದೇ. ಈ ವೈವಿಧ್ಯದಲ್ಲಿನ ಏಕತೆ ಭಾರತದ ಸಂಸ್ಕೃತಿಯ ಶ್ರೇಷ್ಠತೆಯನ್ನು ಪ್ರತಿಬಿಂಬಿಸುತ್ತದೆ. ಈ ವರ್ಷದ ಸಂಕ್ರಾಂತಿ ಈ ಏಕತೆಯ ಭಾವನೆಯನ್ನು ಇನ್ನಷ್ಟು ಗಟ್ಟಿಗೊಳಿಸಿತು. ಸಂಕ್ರಾಂತಿ ಮಕ್ಕಳಿಗೆ ವಿಶೇಷ ಉಲ್ಲಾಸ ತರುತ್ತದೆ. ಗಾಳಿಪಟ ಹಾರಿಸುವ ಸಂಭ್ರಮ, ಹೊಸ ಬಟ್ಟೆಗಳು, ಸಿಹಿತಿಂಡಿಗಳು ಇವೆಲ್ಲ ಮಕ್ಕಳ ಮನಸ್ಸಿನಲ್ಲಿ ಹಬ್ಬದ ಸಂತಸವನ್ನು ತುಂಬುತ್ತವೆ. ಕುಟುಂಬದ ಹಿರಿಯರು ತಮ್ಮ ಅನುಭವಗಳನ್ನು ಹಂಚಿಕೊಳ್ಳುತ್ತಾರೆ; ಹೊಸ ಪೀಳಿಗೆ ಪರಂಪರೆಯ ಮೌಲ್ಯಗಳನ್ನು ಕಲಿಯುತ್ತದೆ. ಈ ಸಂವಾದವೇ ಸಂಸ್ಕೃತಿಯ ನಿರಂತರತೆಗೆ ಜೀವಾಳ. ಧಾರ್ಮಿಕ ದೃಷ್ಟಿಯಿಂದಲೂ ಸಂಕ್ರಾಂತಿ ಮಹತ್ವದ್ದಾಗಿದೆ. ನದಿಗಳಲ್ಲಿ ಪುಣ್ಯಸ್ನಾನ, ದೇವಾಲಯಗಳಲ್ಲಿ ವಿಶೇಷ ಪೂಜೆ, ದಾನ ಧರ್ಮಗಳು ನಡೆಯುತ್ತವೆ. ಈ ಎಲ್ಲಾ ಆಚರಣೆಗಳ ಮೂಲ ಉದ್ದೇಶ ಆತ್ಮಶುದ್ಧಿ, ಕೃತಜ್ಞತೆ ಮತ್ತು ಸಮಾಜದ ಒಳಿತಿಗೆ ಕೈಜೋಡಿಸುವ ಮನೋಭಾವ. ಈ ವರ್ಷ ವಿಶೇಷವಾಗಿ ದಾನ ಕಾರ್ಯಗಳಲ್ಲಿ ಯುವಜನರ ಭಾಗವಹಿಸುವಿಕೆ ಹೆಚ್ಚಿದ್ದು ಗಮನಾರ್ಹವಾಗಿದೆ. ಒಟ್ಟಿನಲ್ಲಿ, ಈ ವರ್ಷದ ಸಂಕ್ರಾಂತಿ ಕೇವಲ ಸಂಪ್ರದಾಯದ ಆಚರಣೆಯಾಗಿ ಸೀಮಿತವಾಗದೆ, ಜೀವನ ಮೌಲ್ಯಗಳನ್ನು ನೆನಪಿಸುವ ಹಬ್ಬವಾಗಿ ಪರಿಣಮಿಸಿದೆ. ಪ್ರಕೃತಿಯೊಂದಿಗೆ ಸೌಹಾರ್ದ, ಮಾನವ ಸಂಬಂಧಗಳಲ್ಲಿ ಸೌಮ್ಯತೆ, ಸಮಾಜದ ಒಳಿತಿಗಾಗಿ ಸಹಕಾರ ಇವೆಲ್ಲವೂ ಸಂಕ್ರಾಂತಿಯ ಸಂದೇಶಗಳು. ಇಂತಹ ಹಬ್ಬಗಳು ನಮ್ಮ ಬದುಕಿಗೆ ಅರ್ಥವನ್ನು ತುಂಬಿ, ಭವಿಷ್ಯದತ್ತ ವಿಶ್ವಾಸದಿಂದ ಹೆಜ್ಜೆ ಇಡಲು ಪ್ರೇರಣೆ ನೀಡುತ್ತವೆ. ಸಂಕ್ರಾಂತಿಯ ಈ ಬೆಳಕು ವರ್ಷಪೂರ್ತಿ ನಮ್ಮ ಜೀವನದಲ್ಲಿ ಬೆಳಗಲಿ ಎಂಬ ಆಶಯವೇ ಈ ಹಬ್ಬದ ನಿಜವಾದ ಸಾರ್ಥಕತೆ.




## ☛ ವಿಶ್ವಾಸ್.ಡಿ.ಗೌಡ



ಭಾರತದ ಹಬ್ಬಗಳ ಸಾಲಿನಲ್ಲಿ ಸಂಕ್ರಾಂತಿ ಅತ್ಯಂತ ಮಹತ್ವದ, ವೈಶಿಷ್ಟ್ಯಪೂರ್ಣ ಹಬ್ಬವಾಗಿದೆ. ಸೂರ್ಯನು ಮಕರ ರಾಶಿಗೆ ಪ್ರವೇಶಿಸುವ ಈ ಪವಿತ್ರ ಕ್ಷಣವನ್ನು ಗುರುತಿಸುವ ಹಬ್ಬವೇ ಮಕರ ಸಂಕ್ರಾಂತಿ. ಪ್ರತಿವರ್ಷ ಜನವರಿ ಮಧ್ಯಭಾಗದಲ್ಲಿ ಆಚರಿಸಲ್ಪಡುವ ಈ ಹಬ್ಬವು ಕೇವಲ ಒಂದು ಧಾರ್ಮಿಕ ಆಚರಣೆಯಷ್ಟೇ ಅಲ್ಲ; ಅದು ಕೃಷಿ, ಪ್ರಕೃತಿ, ಮಾನವೀಯತೆ ಮತ್ತು ಸಾಮಾಜಿಕ ಬಾಂಧವ್ಯಗಳ ಒಕ್ಕೂಟವಾಗಿದೆ. ಈ ವರ್ಷದ ಸಂಕ್ರಾಂತಿ ವಿಶೇಷವಾಗಿ ಹೊಸ ನಿರೀಕ್ಷೆಗಳು, ಹೊಸ ಆರಂಭಗಳು ಮತ್ತು ಒಗ್ಗಟ್ಟಿನ ಸಂದೇಶವನ್ನು ಹೊತ್ತುತಂದಿದೆ. ಸಂಕ್ರಾಂತಿಯ ಮೂಲಾರ್ಥವೇ ಬದಲಾವಣೆ. ಸೂರ್ಯನ ದಕ್ಷಿಣಾಯನದಿಂದ ಉತ್ತರಾಯನಕ್ಕೆ ನಡೆಯುವ ಸಂಕ್ರಮಣವು ಪ್ರಕೃತಿಯ ಚಕ್ರದ ಮಹತ್ವದ ತಿರುವಾಗಿದೆ. ಈ ಸಮಯದಿಂದ ದಿನಗಳು ಉದ್ದಗೊಳ್ಳುತ್ತವೆ, ಬೆಳಕಿನ ಪ್ರಾಬಲ್ಯ ಹೆಚ್ಚಾಗುತ್ತದೆ. ಇದನ್ನು ಭಾರತೀಯ ಪರಂಪರೆ ಜ್ಞಾನ, ಸಕಾರಾತ್ಮಕತೆ ಮತ್ತು ಶುಭಾರಂಭಗಳ ಸಂಕೇತವಾಗಿ ಕಂಡಿದೆ. ಈ ವರ್ಷದ ಸಂಕ್ರಾಂತಿಯೂ ಸಹ ಸಮಾಜಕ್ಕೆ ಆಶಾವಾದದ ಬೆಳಕನ್ನು ಹರಡಿದೆ.

ಕೃಷಿ ಸಂಸ್ಕೃತಿಯೊಂದಿಗೆ ಸಂಕ್ರಾಂತಿಯ ನಂಟು ಅತ್ಯಂತ ಗಾಢ. ರೈತರು ತಮ್ಮ ಬೆಳೆಗಳ ಕೊಯ್ಲನ್ನು ಮುಗಿಸಿ ದೇವರಿಗೆ ಕೃತಜ್ಞತೆ ಸಲ್ಲಿಸುವ ಹಬ್ಬವಿದು. ಕರ್ನಾಟಕದಲ್ಲಿ ಎಳ್ಳು ಬೆಲ್ಲ, ಕಬ್ಬು, ಹುರಳಿ, ಕಡಲೆಕಾಯಿ ಮುಂತಾದವು ಸಂಕ್ರಾಂತಿಯ ಅವಿಭಾಜ್ಯ ಅಂಗಗಳು. ಎಳ್ಳು ಬೆಲ್ಲ ತಿನ್ನಿ, ಒಳ್ಳೆ ಮಾತಾಡಿ ಎಂಬ ಮಾತು ಈ ಹಬ್ಬದ ಸಾರವನ್ನು ಹೇಳುತ್ತದೆ. ಈ ಸಾಲು ಕೇವಲ ಆಹಾರದ ಹಂಚಿಕೆಯಲ್ಲ; ಅದು ಮನುಷ್ಯನ ಮನಸ್ಸಿನ ಸೌಮ್ಯತೆಯನ್ನು, ಸಂಬಂಧಗಳ ಸೌಹಾರ್ದತೆಯನ್ನು ಸಾರುವ ಸಂದೇಶವಾಗಿದೆ. ಈ ವರ್ಷದ ಸಂಕ್ರಾಂತಿಯಲ್ಲಿ ಪರಿಸರಸ್ನೇಹಿ ಆಚರಣೆಗಳಿಗೂ ಹೆಚ್ಚು ಒತ್ತು ಕಂಡುಬಂದಿತು. ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಿ, ಪ್ರಕೃತಿಗೆ ಹಾನಿಯಿಲ್ಲದ ಅಲಂಕಾರಗಳು, ಹೂವುಗಳು, ಮಣ್ಣಿನ ಪಾತ್ರೆಗಳು ಬಳಸುವ ಪ್ರವೃತ್ತಿ ಹೆಚ್ಚಾಯಿತು.

ಹಳ್ಳಿಗಳಲ್ಲಿ ಮಾತ್ರವಲ್ಲ, ನಗರಗಳಲ್ಲಿಯೂ ಈ ಅರಿವು ವಿಸ್ತರಿಸಿದೆ. ಇದು ನಮ್ಮ ಹಬ್ಬಗಳು ಕಾಲದೊಂದಿಗೆ ಹೊಂದಿಕೊಂಡು ಹೊಸ ಅರ್ಥಗಳನ್ನು ಪಡೆಯುತ್ತಿವೆ ಎಂಬುದಕ್ಕೆ ಸಾಕ್ಷಿ. ಭಾರತದ ವಿಭಿನ್ನ ಭಾಗಗಳಲ್ಲಿ ಸಂಕ್ರಾಂತಿ ವಿಭಿನ್ನ ಹೆಸರುಗಳಿಂದ ಆಚರಿಸಲ್ಪಡುತ್ತದೆ.

ತಮಿಳುನಾಡಿನಲ್ಲಿ ಪೊಂಗಲ್, ಆಂಧ್ರ ತೆಲಂಗಾಣದಲ್ಲಿ ಸಂಕ್ರಾಂತಿ, ಪಂಜಾಬಿನಲ್ಲಿ ಲೋಹ್ರಿ, ಮಹಾರಾಷ್ಟ್ರದಲ್ಲಿ

## ವಿ.ಎಂ.ಎಸ್.ಗೋಪಿ



• ಉದಯವಾಹಿನಿ, ವಿಶೇಷ

ಹೊಸ ವರ್ಷ ಆರಂಭದಲ್ಲಿ ಬರುವ ಮೊದಲ ಹಬ್ಬ ಸಂಕ್ರಾಂತಿ ಮಕರ ಸಂಕ್ರಾಂತಿಯನ್ನು ಉತ್ಸವ ಸಂಭ್ರಮದಿಂದ ಆಚರಿಸುತ್ತಾರೆ.

ಆದರೆ ದಕ್ಷಿಣ ಭಾರತದಲ್ಲಿ ಇದರ ಸಂಭ್ರಮ ಹೆಚ್ಚು ತಮ್ಮದೇ ಆದ ರೀತಿಯಲ್ಲಿ. ಪದ್ಧತಿಯಲ್ಲಿ ನಡೆಯುವ ಹಬ್ಬದ ಸಿದ್ಧತೆಗಳು ಆರಂಭವಾಗುತ್ತದೆ. ಅಕ್ಕ ಪಕ್ಕದ ಮನೆಯ ಹೆಂಗಸರು ಒಬ್ಬರನ್ನೊಬ್ಬರು ಕೇಳುತ್ತಾ... ಹಬ್ಬಕ್ಕೆ ಸಿದ್ಧವಾಗುತ್ತಾರೆ ಎಳ್ಳು ಬೆಲ್ಲಕ್ಕೆ ಬೇಕೆಂದು ಕಡಲೆಕಾಯಿ ಸುಲಿಯೋದು ಮತ್ತು ಕೊಬ್ಬರಿ ಕಾಯಿ ಸಣ್ಣದಾಗಿ ಹಚ್ಚೋದು ಸಕ್ಕರೆ ಅಚ್ಚುಗಳನ್ನು ಮಾಡುವುದು ಬಿಳಿ ಎಳ್ಳನ್ನು ಹುರಿದು ಅದಕ್ಕೆ ಕಡಲೇ ಬೀಜ ಕೊಬ್ಬರಿ ಸಕ್ಕರೆ ಅಚ್ಚುಗಳನ್ನು ಸೇರಿಸಿ ಪ್ಯಾಕೇಟ್ ಮಾಡುವುದು.

ಹಬ್ಬದ ದಿನ ಬೆಳಿಗ್ಗೆ ಎದ್ದು, ಮನೆಯಂಗಳದಲ್ಲಿ ಪೊಂಗಲ್ ಉಕ್ಕುತ್ತಿರುವ ರಂಗೋಲಿ ಮತ್ತು ಕಬ್ಬುಗಳ ಚಿತ್ರಗಳ ರಂಗೋಲಿ ಬಿಡಿಸಿ. ಬಣ್ಣ ಮತ್ತು ಹೂಗಳಿಂದ ರಂಗೋಲಿಗೆ ಅಲಂಕಾರ ಮಾಡುತ್ತಾರೆ. ಮನೆಯ ಹೊಸ್ತಿಲು ಮತ್ತು ದೇವರ ಕೋಣೆಯನ್ನು ಮಾವಿನ ತಳಿರು ತೋರಣಗಳು ಮತ್ತು ಕಬ್ಬು ಹೂವುಗಳಿಂದ ಅಲಂಕರಿಸುತ್ತಾರೆ.

ಮನೆಯಲ್ಲಿ ಪೂಜೆ ಪುನಸ್ಕಾರ ಮುಗಿಸಿ ಊಟ ಮಾಡುವ ಹೊತ್ತಿಗೆ ಮಧ್ಯಾಹ್ನ ಆಗುತ್ತದೆ.

ಸಂಜೆ ವೇಳೆಗೆ ದೇವಸ್ಥಾನಕ್ಕೆ ಹೋಗಿ ಬರುತ್ತಾರೆ. ಅಕ್ಕ ಪಕ್ಕದ ಮನೆಗಳಿಗೆ ಕಬ್ಬು, ಗೆಣಸು, ಅವರೇಕಾಯಿ, ಎಳ್ಳು ಬೆಲ್ಲ ಕೊಡುವುದರ ಮೂಲಕ ಸಂಕ್ರಾಂತಿ ಹಬ್ಬದ ಶುಭಾಶಯಗಳು ಹೇಳುತ್ತಾರೆ.

ತಮಿಳುನಾಡಿನಲ್ಲಿ ಪೊಂಗಲ್ ಸುಗ್ಗಿ ಹಬ್ಬವೆಂದೂ ಸಂಕ್ರಾಂತಿಯನ್ನು ಕರೆಯುತ್ತಾರೆ. ಮಡಿಕೆಯಲ್ಲಿ ಅಕ್ಕಿ ಬೇಳೆಯನ್ನು ಬೇಯಿಸಿ ಮಾಡುವ ಪೊಂಗಲ್ ಹಬ್ಬದ ವಿಶೇಷ. ಹೊಸ ಬಟ್ಟೆ ತೊಟ್ಟು ಬಂಧು ಮಿತ್ರರು ಮತ್ತು ಸ್ನೇಹಿತರಿಗೆ ಸಂಕ್ರಾಂತಿಯ ಶುಭಾಶಯ ಹೇಳಿ ಕಬ್ಬು ಎಳ್ಳು ಬೆಲ್ಲಗ್ಗಳ ವಿನಿಮಯ ಮಾಡುವುದು ಹಬ್ಬದ ಆಚಾರ. ಕರ್ನಾಟಕ, ಕೇರಳ, ಆಂಧ್ರಪ್ರದೇಶ, ತಮಿಳುನಾಡಿನಲ್ಲಿ ಹಬ್ಬದ ಸಡಗರ ಭೋಗಿ, ಪೊಂಗಲ್, ಮಾಟ್ಟು ಪೊಂಗಲ್, ಕಾಣು ಪೊಂಗಲ್ ಮತ್ತು ಜಲ್ಲಿ ಕಟ್ಟು ಎನ್ನುವ ಗೂಳಿಯನ್ನು ಪಳಗಿಸುವ ಆಟವೂ ತಮಿಳುನಾಡಿನಲ್ಲಿ ನಡೆಯುತ್ತದೆ. ಹೊಸ ಮಡಿಕೆ ಹೊಸ ಪಾತ್ರೆಗಳಿಗೆ ಅರಿಶಿನ ಕುಂಕುಮ ಇಟ್ಟು, ಅರಿಶಿನ ದಾರದಲ್ಲಿ ಹಸಿ ಅರಿಶಿನ ಗಡ್ಡೆ ಮಡಿಕೆಗೆ ಕಟ್ಟಿ ಒಲೆಯ ಮೇಲಿಟ್ಟು ಮಡಿಕೆಯಲ್ಲಿ ಅಕ್ಕಿ ಬೇಳೆ ಮತ್ತು ಹಾಲು ತುಪ್ಪ ಬೆಲ್ಲಗಳನ್ನು ಮಡಿಕೆಯಲ್ಲಿ ಕುದಿಸಿ ಪೊಂಗಲ್

# ಹೊಸ ವರ್ಷ – 2026
# ಸಂಕ್ರಾಂತಿ...!



ಉಕ್ಕಿಸಲಾಗುತ್ತದೆ. ಇದು ಶುಭ ಸಮೃದ್ಧಿಯ ಸಂಕೇತವಾಗಿರುತ್ತದೆ.

ಗೋಪೂಜೆ ಹೆಚ್ಚು ಜನಪ್ರಿಯ ವರ್ಷವಿಡಿ ತಮ್ಮ ವ್ಯವಸಾಯ ಕ್ಷೇತ್ರದಲ್ಲಿ ದುಡಿದು ಧಾನ್ಯ ಸಮೃದ್ಧಿಗೆ ಕಾರಣವಾಗುವ ಮತ್ತು ಹಾಲು ನೀಡುವ ಗೋವುಗಳನ್ನು ಸಂಕ್ರಾಂತಿಯೆಂದು ಪೂಜಿಸುವ ಮೂಲಕ ಕೃತಜ್ಞತೆ ಅರ್ಪಿಸುವುದು ಧಾನ್ಯಗಳ ಜೊತೆಗಿರುವ ಕಸ ಕಡ್ಡಿಗಳನ್ನು ಬೇಪಡಿಸಿ ಹುಲ್ಲು ಕಡ್ಡಿಗಳಿಗೆ ಬೆಂಕಿ ಹಚ್ಚುತ್ತಾರೆ.

**ಮಕರ ಸಂಕ್ರಾಂತಿ ಉತ್ಸವ ಸಂಭ್ರಮ**

ಜಾನುವಾರುಗಳನ್ನು ಕಿಚ್ಚು ಹಾಯಿಸುವಿಕೆ ಸಂಭ್ರಮ ಆಟ ಆಚರಣೆ ನಡೆಯುತ್ತದೆ. ಪೊಂಗಲ್ ಹಬ್ಬದ ದೀನವೆ ಕೇರಳ ರಾಜ್ಯದಲ್ಲಿ ಮಕರ ಸಂಕ್ರಾಂತಿಯೆಂದು ಶಬರಿಮಲೆಯಲ್ಲಿ ಕಾಣ್ಣುವ ಮಕರ ಜ್ಯೋತಿ ನೋಡಲು ಅಯ್ಯಪ್ಪ ಭಕ್ತಾದಿಗಳು ಶಬರಿ ಮಲೆಗೆ ಹೋಗಿ ಅಯ್ಯಪ್ಪ ಸ್ವಾಮಿ ನೋಡಲು ಅಯ್ಯಪ್ಪ ಭಕ್ತಾದಿಗಳು ಶಬರಿಮಲೆಗೆ ಹೋಗಿ ಅಯ್ಯಪ್ಪ ಸ್ವಾಮಿ ಮತ್ತು ಮಕರ ಜ್ಯೋತಿಯ ದರ್ಶನವನ್ನು ಮಾಡುತ್ತಾರೆ.



ಹಿಂಡು ಹಿಂಡಾಗಿ ಬರುವ ನಾಯಿಗಳು, ಜನ ಮತ್ತು ಸಾಕುಪ್ರಾಣಿಗಳ ಮೇಲೆ ದಾಳಿಗೆ ಮುಂದಾಗುತ್ತಿವೆ

# ಬೀದಿನಾಯಿಗಳ ಹಾವಳಿಗೆ ಬೆಚ್ಚಿಬಿದ್ದ ಸಾರ್ವಜನಿಕರು: ಕಡಿವಾಣಕ್ಕೆ ಆಗ್ರಹ


ಉದಯವಾಹಿನಿ ಚಿತ್ರ

• ಉದಯವಾಹಿನಿ ನರೇಗಲ್

ಪಟ್ಟಣದಲ್ಲಿ ಬೀದಿನಾಯಿಗಳ ಹಾವಳಿ ಮಿತಿ ಮೀರಿದ್ದು ಮಕ್ಕಳು, ಮಹಿಳೆಯರು, ವೃದ್ಧರು, ಶಾಲಾ ಕಾಲೇಜಿಗೆ ಹೋಗುವ ವಿದ್ಯಾರ್ಥಿಗಳು, ಬೈಕ್ ಸವಾರರು ಓಡಾಡಲು ಭಯ ಪಡುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹಿಂಡು ಹಿಂಡಾಗಿ ಬರುವ ನಾಯಿಗಳು ಜನರು, ಸಾಕುಪ್ರಾಣಿಗಳ ಮೇಲೆ ದಾಳಿಗೆ ಮುಂದಾಗುತ್ತಿವೆ. ಮನೆಗಳ ಅಂಗಳಕ್ಕೂ ಲಗ್ಗೆಯಿಡುತ್ತಿದ್ದು ಅನೇಕ ವಸ್ತುಗಳನ್ನು ಹೊತ್ತೊಯ್ಯುತ್ತಿವೆ. ರಾತ್ರಿ ವೇಳೆ ಮನೆ ಅಂಗಳದಲ್ಲಿರುವ ಚಪ್ಪಲಿ, ಬಟ್ಟೆ ಸೇರಿದಂತೆ ಇನ್ನಿತರ ವಸ್ತುಗಳನ್ನು ಬೀದಿನಾಯಿಗಳು ಕಚ್ಚಿ ಹಾಳು ಮಾಡುತ್ತಿದ್ದು ಮನೆಯವರು ತೊಂದರೆ ಅನುಭವಿಸುವಂತಾಗಿದೆ.

ಹೀಗಾಗಿ ಬೀದಿನಾಯಿಗಳ ಹಾವಳಿಗೆ ಸ್ಥಳೀಯ ಸಂಸ್ಥೆ ಕಡಿವಾಣ ಹಾಕಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. ಬೀದಿನಾಯಿ ದಾಳಿಗೆ ಪಟ್ಟಣದ ಮೂರನೇ ವಾರ್ಡ್, ಆಶ್ರಯ ಕಾಲೊನಿಯ ಮಾರುತಿ ಈರಪ್ಪ ಚಳ್ಳಮರದ ಎನ್ನುವರ 2 ಆಕಳು ಈಚೆಗೆ ಬಲಿಯಾಗಿವೆ. ಮನೆಮುಂದೆ ಕಟ್ಟಿದಾಗ ದಾಳಿ ಮಾಡಿವೆ. ಹೀಗೆ ಆಡು, ಕುರಿ, ಕೋಳಿಗಳ ಬಲಿ ಸಾಮಾನ್ಯವಾಗಿವೆ. ಜನರು ಕಚ್ಚಿಸಿಕೊಂಡು ಚಿಕಿತ್ಸೆ ಪಡೆಯುತ್ತಿರುವ ಪ್ರಕರಣಗಳು ನಡೆಯುತ್ತಿವೆ. ಅನೇಕ ಬೈಕ್ ಸವಾರರು ಅಪಘಾತಕ್ಕೆ ಒಳಗಾಗಿ ಪೆಟ್ಟುತಿಂದಿದ್ದಾರೆ. ಆಗಾಗ ಹುಚ್ಚುನಾಯಿಗಳ ಹಾವಳಿಯೂ ಪಟ್ಟಣದಲ್ಲಿ ನಡೆಯುತ್ತಿದೆ.

ಆದ್ದರಿಂದ ಸ್ಥಳೀಯ ಆಡಳಿತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ. ಪಟ್ಟಣದ ಹೊಸ ಬಸ್ ನಿಲ್ದಾಣ, ಹಳೆ ಬಸ್ ನಿಲ್ದಾಣದ ಸುತ್ತಲೂ ಎಗ್ ರೈಸ್ ಅಂಗಡಿಗಳು, ಅಬ್ಬಿಗೇರಿ ಮಾರ್ಗದ ರಸ್ತೆ ಬದಿ, ಕೆರೆ ಪಕ್ಕದಲ್ಲಿ ಚಿಕನ್ ಅಂಡಿಗಳು, ಹಳೆ ಬಸ್ ನಿಲ್ದಾಣದಿಂದ ಕುಕನೂರ ಕಡೆಗೆ ಹೋಗುವ ಮಾರ್ಗದಲ್ಲಿ ಕೋಳಿ ಫಾರಂ ಕಡೆ ಚಿಕನ್ ಅಂಗಡಿಗಳ ಸಂಖ್ಯೆ ಅಧಿಕವಾಗಿದೆ.

ಅವುಗಳ ಜೊತೆಗೆ ಶಾಖಾಹಾರಿ ಹೊಟೇಲ್‌ಗಳ ತ್ಯಾಜ್ಯ ಮತ್ತು ಆಹಾರ ಪದಾರ್ಥಗಳ ತ್ಯಾಜ್ಯವನ್ನು ಸೂಕ್ತವಾಗಿ ನಿರ್ವಹಿಸದಿರುವ ಕಾರಣ ಬೀದಿ ನಾಯಿಗಳು ಹಿಂಡುಗಟ್ಟಲೆ ಅಲ್ಲಿಯೇ ಸುತ್ತಾಡುತ್ತವೆ.

ಅಲ್ಲಲ್ಲಿ ಬೀದಿಬದಿ, ಕೆರೆಯ ಸಮೀಪ ಸುರಿಯುವ ಕೋಳಿ, ಮಾಂಸದಂಗಡಿಗಳ ತ್ಯಾಜ್ಯ ನಾಯಿಗಳ ಮತ್ತೊಂದು ಅಡ್ಡೆಯಾಗಿದ್ದು, ತ್ಯಾಜ್ಯದಲ್ಲಿನ ಆಹಾರ ತಿನ್ನಲು ಶ್ವಾನಗಳ ಗುಂಪುಗಳ ನಡುವೆ ಕಾದಾಟ ನಡೆಯುತ್ತಲೇ ಇರುತ್ತದೆ. ರಾತ್ರಿ ವೇಳೆ ಪಟ್ಟಣದ 17 ವಾರ್ಡ್‌ಗೂ ಲಗ್ಗೆಯಿಡುತ್ತವೆ. ಅವುಗಳ ಕೂಗಾಟ, ಚೀರಾಟದಿಂದ ನೆಮ್ಮದಿಯಾಗಿ ನಿದ್ದೆ ಮಾಡಲು ಸಾಧ್ಯವಾಗುವುದಿಲ್ಲ. ನಾಯಿಗಳ ಉಪಟಳಕ್ಕೆ ಕಡಿವಾಣ ಹಾಕಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

**482**
**ಬೀದಿನಾಯಿಗಳು**

**ನರೇಗಲ್ ಪಟ್ಟಣ ಪಂಚಾಯಿತಿಯ 17 ವಾರ್ಡ್‌ಗಳಲ್ಲಿ 482 ಬೀದಿ ನಾಯಿಗಳಿವೆ. 45 ಸಂಸ್ಥೆಗಳಿಗೆ ನೋಟಿಸ್ ನೀಡಲಾಗಿತ್ತು, ಅಲ್ಲಿನ ವಿವಿಧ ಸಂಸ್ಥೆಗಳಲ್ಲಿ 179 ನಾಯಿಗಳಿವೆ. ಪಟ್ಟಣದಲ್ಲಿ ಸಾಕು ನಾಯಿಗಳಿಗೆ ಯಾರೂ ಪರವಾನಗಿ ಪಡೆದಿಲ್ಲ. ಹಾಗಾಗಿ ಸಾಕು ನಾಯಿಗಳ ನಿಖರ ಮಾಹಿತಿ ದೊರೆಯುತ್ತಿಲ್ಲ. ಆದರೂ ಅವರನ್ನು ಗುರುತಿಸಿ ನೋಟಿಸ್ ನೀಡಲಾಗುವುದು ಎಂದು ಪಟ್ಟಣ ಪಂಚಾಯಿತಿಯ ಪ್ರಭಾರ ಆರೋಗ್ಯ ನಿರೀಕ್ಷಕ ಎಂ.ಎಸ್.ಬರದೂರ ಮಾಹಿತಿ ನೀಡಿದರು. ಸದ್ಯ ಸ್ಥಳೀಯ ಪೊಲೀಸ್ ಠಾಣೆಯ ಹಿಂದುಗಡೆಯಿರುವ ಪಟ್ಟಣ ಪಂಚಾಯಿತಿಯ ಡ್ರೈವ್ ವೇಸ್ಟ್ ಕಲೆಕ್ಷನ್ ಸೆಂಟರ್ ಅನ್ನೇ ಬೀದಿನಾಯಿಗಳ ಸಂತಾನ ಶಕ್ತಿಹರಣ ಮತ್ತು ನಿರ್ವಹಣಾ ಕೇಂದ್ರವೆಂದು ತಾತ್ಕಾಲಿಕವಾಗಿ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಶಾಶ್ವತ ಪರಿಹಾರಕ್ಕೆ ಟೆಂಡರ್ ಕರೆದಿದ್ದೇವೆ. ಶೆಡ್ ನಿರ್ಮಾಣಕ್ಕೆ ರೂ.7.63 ಕ್ಷ ಅನುದಾನ ಬಂದಿದೆ ಎಂದು ತಿಳಿಸಿದರು.**

**ಬೀದಿನಾಯಿಗಳಿಗೆ ನಿರ್ವಹಣೆಗೆ ಟೆಂಡರ್ ಕರೆದರೂ ಯಾರು ಮುಂದೆ ಬರದ ಕಾರಣ ತಡವಾಗುತ್ತಿದೆ. ಸಂಬಂಧಪಟ್ಟ ಹಿರಿಯ ಅಧಿಕಾರಿಗಳ ಸಲಹೆ ಪಡೆದು ಉಪಟಳಕ್ಕೆ ಕಡಿವಾಣ ಹಾಕಲಾಗುವುದು. -ಮಲ್ಲೇಶ ಪಚ್ಚಿ, ಪ್ರಭಾರ ಮುಖ್ಯಾಧಿಕಾರಿ, ನರೇಗಲ್ ಪ.ಪಂ**

## ಗ್ರಾಮಾಭಿವೃದ್ಧಿಯ ಆಶಾಭಾವ: ಸಾಮಾಜಿಕ ಜಾಲತಾಣದಲ್ಲಿ ಪ್ರಚಾರ ಜೋರು

• ಉದಯವಾಹಿನಿ ಔರಾದ್

ವಿದ್ಯಾಭ್ಯಾಸ ಮುಗಿಸಿದರೂ ನೌಕರಿ ಸಿಗದೇ, ಸಿಕ್ಕರೂ ಕಲಿತ ವಿದ್ಯೆಗೆ ತಕ್ಕ ಸಂಭಾವನೆ ಸಿಗದೇ ಬೇಸತ್ತ ಯುವಕರು ಈಗ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾ.ಪಂ ಚುನಾವಣೆಗೆ ಸ್ಪರ್ಧಿಸುವ ಒಲವು ತೋರಿದ್ದಾರೆ. ಕಳೆದ ವರ್ಷಾಂತ್ಯದಲ್ಲಿ ಗ್ರಾ.ಪಂ ಚುನಾವಣೆ ಎಂದು ಅಧಿಸೂಚನೆ ಬರುತ್ತಿದ್ದಂತೆಯೇ ಪದವಿ ಮುಗಿಸಿದ ವಿದ್ಯಾರ್ಥಿಗಳು ಮತ್ತು ಯುವಕರು ಚುನಾವಣೆಗೆ ಸ್ಪರ್ಧಿಸುವ ಯೋಚನೆ ಮಾಡುತ್ತಿದ್ದಾರೆ.

ಔರಾದ್ ಮತ್ತು ಕಮಲನಗರ ತಾಲ್ಲೂಕಿನಲ್ಲಿ 39 ಪಂಚಾಯಿತಿಗಳು ಕಾರ್ಯನಿರ್ವಹಿಸುತ್ತವೆ. ಈ ಬಾರಿ ಶೇ.70ಕ್ಕೂ ಹೆಚ್ಚು ಯುವಕರೇ ಸ್ಪರ್ಧಿಸುವ ಲಕ್ಷಣಗಳು ಮತ್ತು ಆಸಕ್ತಿ ತೋರುತ್ತಿದ್ದಾರೆ. ಈಗಾಗಲೇ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚಾರವನ್ನೂ ಜೋರಾಗಿ ಆರಂಭಿಸಿದ್ದಾರೆ. ಯುವಕರ ಸ್ಪರ್ಧೆ ಉತ್ಸಾಹ ಹಾಲಿ ಅಭ್ಯರ್ಥಿಗಳನ್ನು ಚಿಂತೆಗೀಡು ಮಾಡಿದೆ ಒಟ್ಟಾರೆ ಗ್ರಾ.ಪಂ ಚುನಾವಣೆ ಕ್ರೇಜ್ ದಿನೇ ದಿನೇ ಹೆಚ್ಚುತ್ತಿದೆ.ಯುವಕರು ಈ ವರ್ಷ ಹೊಸ ಮೈಲಿಗಲ್ಲು ಸೃಷ್ಟಿಸುವ ಸಾಧ್ಯತೆಯಿದೆ. ರಾಜ್ಯಾದ್ಯಂತ ಬಹುತೇಕ ಗ್ರಾ.ಪಂ ಗಳಲ್ಲಿ ಈ ಬಾರಿ

ಯುವಕರೇ ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಿಸಲು ಉತ್ಸುಕತೆ ತೋರುತ್ತಿದ್ದು ಅದು ಗ್ರಾಮಗಳ ಅಭಿವೃದ್ಧಿಗೆ ಮತ್ತು ವಿವಿಧ ಯೋಜನೆಗಳನ್ನು ರೂಪಿಸುವ ಹೊಸ ಪರ್ವ ಆರಂಭವಾಗುವ ಆಶಾಭಾವ ಸೃಷ್ಟಿಯಾಗಿದೆ.


ಉದಯವಾಹಿನಿ ಚಿತ್ರ

ಅಲ್ಲದೇ ಉದ್ಯೋಗ ಕಳೆದುಕೊಂಡಿರುವ ಅಥವಾ ಉದ್ಯೋಗ ಇಲ್ಲದ ಯುವಕರು ಈ ಗ್ರಾಮಗಳಲ್ಲಿ ಬೀಡು ಬಿಟ್ಟು ಈಗ ಈ ವರ್ಷದ ಸ್ಥಳೀಯ ಚುನಾವಣೆ ಅಖಾಡಕ್ಕೆ ಇಳಿಯುವ ಉತ್ಸವ ತೋರುತ್ತಿದ್ದಾರೆ. ಯಾವ ವಾರ್ಡಗೆ ಏನು ಬೇಕು ಎಂಬ ಮಾಹಿತಿ ಇದ್ದು ಜನರ ಬೇಕು ಬೇಡಗಳನ್ನು ತಿಳಿದುಕೊಂಡು ತಮ್ಮಿಂದ ಕೈಲಾದಷ್ಟು ಸೇವೆ ಸಲ್ಲಿಸುತ್ತಿದ್ದಾರೆ. ತಾಲ್ಲೂಕ ಮತ್ತು ಜಿಲ್ಲಾ ಮಟ್ಟದಲ್ಲಿ ಎಲ್ಲರೊಂದಿಗೆ ಉತ್ತಮ ಒಡನಾಟ ಬೆಳೆಸಿಕೊಳ್ಳುತ್ತಿದ್ದಾರೆ. ಪಕ್ಷ ಮತ್ತು ಪಕ್ಷೇತರವಾಗಿ ರಾಜಕೀಯ, ಸಾಮಾಜಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುತ್ತ ಹಿರಿಯರ ಮಾರ್ಗದರ್ಶನ ತೆಗೆದುಕೊಳ್ಳುತ್ತಿದ್ದಾರೆ. ಗ್ರಾಮ ಮಟ್ಟದಲ್ಲಿ ಜನರ ಜತೆ ಬಾಂಧವ್ಯ ಗಟ್ಟಿಗೊಳಿಸಿಕೊಂಡು ಪ್ರಬಲ ಸಂಘಟನಾ ಬಲವನ್ನು ನಿರ್ಮಾಣ ಮಾಡಿಕೊಳ್ಳುತ್ತಿದ್ದಾರೆ.

**ಬ್ಯಾನರ್ ಹವಾ!:** ಯುವಕರು ಈಗಿನಿಂದಲೇ ಸರಕಾರಿ, ಖಾಸಗಿ ಕಾರ್ಯಕ್ರಮ, ಇತರ ವಾರ್ಷಿಕ ದಿನಾಚರಣೆಗಳಂದು ಶುಭ ಕೋರುವ ಬ್ಯಾನರ್ ರೆಡಿ ಮಾಡಿಕೊಂಡು ಪ್ರಮುಖ ಬೀದಿಗಳಲ್ಲಿ ಹಾಕುತ್ತಿದ್ದಾರೆ. ಅಲ್ಲದೇ ಸಾಮಾಜಿಕ ಜಾಲತಾಣಗಳಲ್ಲಿ ಸ್ಟೇಟಸ್, ಸ್ಟೋರಿ ಪೋಸ್ಟ್ ಮಾಡಿಕೊಂಡು ಹವಾ ಮಾಡುತ್ತಿದ್ದಾರೆ.

**ದೇಶದ ಜನಸಂಖ್ಯೆಯಲ್ಲಿ ಶೇ.65ರಷ್ಟು ಯುವಕರಿದ್ದಾರೆ. ಯುವಕರು ಗ್ರಾ.ಪಂ ಚುನಾವಣೆ ಮೂಲಕ ರಾಜಕೀಯ ಪ್ರವೇಶಕ್ಕೆ ಆಸಕ್ತಿ ತೋರುತ್ತಿರುವುದು ದೇಶದ ಅಭಿವೃದ್ಧಿಗೆ ಒಳ್ಳೆಯ ಬೆಳವಣಿಗೆ ಇದರಿಂದ ಗ್ರಾಮಗಳ ಸರ್ವತೋಮುಖ ಬೆಳವಣಿಗೆಗೆ ಅನುಕೂಲ. ಮುಂಬರುವ ಗ್ರಾ.ಪಂ ಚುನಾವಣೆಯಲ್ಲಿ ಸ್ಪರ್ಧಿಸಲು ಉತ್ಸುಕರಾಗಿ ಗ್ರಾಮಗಳ ಅಭಿವೃದ್ಧಿಗೆ ಮುಂದಾಗಿ. -ಸುಭಾಷ್ ಲಾಢಾ ಯುವ ನಾಯಕರು ಔರಾದ್**

## ನಲುಗುತ್ತಿರುವ ಶಾಸಕರ ಮಾದರಿ ಶಾಲೆ

• ಉದಯವಾಹಿನಿ ಹಾನಗಲ್

ಶಾಲಾಭಿವೃದ್ಧಿ ಸಮಿತಿ ಮತ್ತು ಶಿಕ್ಷಕರ ನಡುವೆ ಸಮನ್ವಯತೆ ಕೊರತೆಯ ಪರಿಣಾಮ ಇಲ್ಲಿನ ಶಾಸಕರ ಮಾದರಿ ಸರ್ಕಾರಿ ಶಾಲೆ ನಾನಾ ಸಮಸ್ಯೆಗಳಿಂದ ನಲಗುತ್ತಿದೆ. ಈಚೆಗೆ ಶಾಲೆ ಅಂಗಳದಲ್ಲಿ ಶಾಲಾಭಿವೃದ್ಧಿ ಸಮಿತಿ ಅಧ್ಯಕ್ಷ ಮತ್ತು ಅತಿಥಿ ಶಿಕ್ಷಕ ಪರಸ್ಪರ ಬಡಿದಾಡಿಕೊಂಡಿದ್ದು, ಇದರ ವಿಡಿಯೋ ಸಾಮಾಜಿಕ ಮಾಧ್ಯಮಗಳಲ್ಲಿ ಹರಿದಾಡಿದೆ.

ಶಾಲಾಭಿವೃದ್ಧಿ ಸಮಿತಿಯಿಂದ ಶೈಕ್ಷಣಿಕ ಪ್ರೋತ್ಸಾಹ ಸಿಗುತ್ತಿಲ್ಲ, ಎಲ್ಲದಕ್ಕೂ ಅನುಮಾನದ ನೋಟವಿದೆ. ಅರ್ಪಣಾ ಭಾವದಿಂದ ಕೆಲಸ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಹೊಸದಾಗಿ ವರ್ಗಾವಣೆಗೊಂಡು ಬಂದಿರುವ ಶಿಕ್ಷಕರ ಅಳಲು ತೋಡಿಕೊಳ್ಳುತ್ತಿದ್ದಾರೆ. ಎಲ್‌ಕೆಜಿಯಿಂದ 10 ನೇ ತರಗತಿ ತನಕ ಈ ಶಾಲೆಯಲ್ಲಿ 690 ವಿದ್ಯಾರ್ಥಿಗಳು ಓದುತ್ತಾರೆ. 29 ಶಿಕ್ಷಕರ ಹುದ್ದೆಗಳು ಕಾಯಂ ಇದೆ. ಆದರೆ, 12 ಶಿಕ್ಷಕರು ಮಾತ್ರ ಇದ್ದಾರೆ. ಉಳಿದವರು ಅತಿಥಿ ಶಿಕ್ಷಕರು. ಇನ್ನೂ 8 ಕೊಠಡಿಗಳ ಅಗತ್ಯವಿದೆ. 7 ನೇ ತರಗತಿಯಲ್ಲಿ 75 ವಿದ್ಯಾರ್ಥಿಗಳಿದ್ದರೂ,


ಉದಯವಾಹಿನಿ ಚಿತ್ರ

ವಿಭಾಗ ಮಾಡಿಲ್ಲ, ಶುದ್ಧ ಕುಡಿಯುವ ನೀರು ಇಲ್ಲ. ಆರು ತಿಂಗಳಿನಿಂದ ಶಾಲೆಯ 5 ಅತಿಥಿ ಶಿಕ್ಷಕರಿಗೆ ಗೌರವ ಧನ ನೀಡಿಲ್ಲ. ರೂ. 23 ಲಕ್ಷ ವೆಚ್ಚದಲ್ಲಿ ನಿರ್ಮಿಸಿದ ಶೌಚಾಲಯ ಸಹ ವಾರದಲ್ಲಿಯೇ ದುರ್ವಾಸನೆ ಬೀರುತ್ತಿದ್ದು, ಬಳಕೆ ಆಗದಂತೆ ವಸ್ತುಗಳು ಕಳಚಿ ಬಿದ್ದು ಒಡೆದಿವೆ. ಎರಡನೇ ದಿನಕ್ಕೆ ಶೌಚಾಲಯ ಹಾಳಾಗಿದೆ. ಈ ಶಾಲೆಯಲ್ಲಿ ಪ್ರೌಢಶಾಲೆ ವಿಭಾಗ ಆರಂಭವಾಗಿದೆ. ಅಧ್ಯಕ್ಷ ಹಾಗೂ ಮುಖ್ಯಶಿಕ್ಷಕರ ನಡುವೆ ಸಮನ್ವಯದ ಕೊರತೆಯಿಂದ ಅನುದಾನ ಸೂಕ್ತ ರೀತಿಯಲ್ಲಿ ಬಳಕೆಯಾಗುತ್ತಿಲ್ಲ. ಕಳೆದ ವರ್ಷ 1.5 ಲಕ್ಷ ಅನುದಾನ ಬಳಕೆಯಾಗದೇ ಸರ್ಕಾರಕ್ಕೆ ವಾಪಸು ಹೋಗಿರುವ ಬಗ್ಗೆ ಪೋಷಕರು ಮಾಹಿತಿ ನೀಡುತ್ತಿದ್ದಾರೆ.

## ಭಯ ಬಿಟ್ಟು ಪರೀಕ್ಷೆ ಬರೆಯಿರಿ: ಶಿಕ್ಷಕಿ ಜಯಲಲಿತಾ ಹೊಸಮನಿ

• ಉದಯವಾಹಿನಿ ರಾಣೆಬೆನ್ನೂರು

ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ಮಕ್ಕಳ ಜೀವನದ ಒಂದು ತಿರುವು. ಈ ಅವಧಿಯಲ್ಲಿ ವಿದ್ಯಾರ್ಥಿಗಳು ಸಮಯ ಸದುಪಯೋಗ ಪಡಿಸಿಕೊಂಡು ಕಠಿಣ ಪರಿಶ್ರಮದಿಂದ ಅಧ್ಯಯನ ಕೈಗೊಳ್ಳಬೇಕು ಎಂದು ಮುಖ್ಯ ಶಿಕ್ಷಕಿ ಜಯಲಲಿತಾ ಹೊಸಮನಿ ಹೇಳಿದರು. ಇಲ್ಲಿನ ವಿದ್ಯಾನಗರದ ಡಾ.ಬಿ.ಆರ್. ಅಂಬೇಡ್ಕರ್ ಪ್ರೌಢಶಾಲೆಯಲ್ಲಿ ಜೆಸಿಐ ರಾಣೆಬೆನ್ನೂರು, ಜೆಸಿ ಅಲ್ಯೂಮಿನಿ ಸಂಸ್ಥೆಯಿಂದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಪರೀಕ್ಷಾ ಭಯ ನಿವಾರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಭಯವನ್ನು ಬಿಟ್ಟು ಧೈರ್ಯ ಮತ್ತು ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಲು ಮುಂದಾಗಬೇಕು. ಪಾಠ ಪ್ರವಚನಗಳನ್ನು ಮನನ ಮಾಡಿಕೊಳ್ಳಬೇಕು. ಉತ್ತಮ ಫಲಿತಾಂಶದೊಂದಿಗೆ ಜಿಲ್ಲೆಗೆ ಒಳ್ಳೆಯ ಹೆಸರು ತರಬೇಕಾಗಿದೆ ಎಂದರು. ಜೆಸಿಐ ವಲಯ ತರಬೇತುದಾರ ಪ್ರಭುಲಿಂಗಪ್ಪ ಹಲಗೇರಿ ಅವರು ವಿದ್ಯಾರ್ಥಿಗಳಿಗೆ ಪರೀಕ್ಷಾ ಪೂರ್ವ ಸಿದ್ಧತೆ, ಏಕಾಗ್ರತೆ, ಗ್ರಹಣಶಕ್ತಿ ಮತ್ತು ಆಸಕ್ತಿ ಹುಟ್ಟಿಸುವ ಕುರಿತು ಚಟುವಟಿಕೆ ಆಧಾರಿತ ತರಬೇತಿ ನೀಡಿದರು. ಜೆಸಿ ಅಲುಮಿ ಸಂಸ್ಥೆ ವಲಯ ಚೇರಮನ್ ರುದ್ರಪ್ಪ ಬಾಳಿಕಾಯಿ ಅವರು ಮಕ್ಕಳಿಗೆ ಅಪರಾಧ ತಡೆಯುವಿಕೆ ಮತ್ತು ಮೊಬೈಲ್ ಬಳಕೆ ಬಗ್ಗೆ ಜಾಗೃತಿ ಮೂಡಿಸಿದರು. ಶಿಕ್ಷಕರಾದ ಎಂ.ಬಿ. ಶಿವಾನಂದ, ಎಸ್.ಆರ್. ತೆವರಿ, ದೊಡ್ಡಮನಿ, ಎಚ್. ಶಾಂತರಾಜ್, ಜ್ಯೋತಿ, ನಿವೇದಿತಾ ಇದ್ದರು.

## ಕೊಲೆ ಅಪರಾಧಿಗೆ ಜೀವಾವಧಿ ಶಿಕ್ಷೆ

• ಉದಯವಾಹಿನಿ ಶಿರಸಿ

ದಾಂಡೇಲಿ ನಗರದ ಹಿರಿಯ ವಕೀಲ ಅಜಿತ ನಾಯ್ಕ ಅವರ ಕೊಲೆ ಪ್ರಕರಣದಲ್ಲಿ ಪ್ರಮುಖ ಆರೋಪಿ ಪಾಂಡುರಂಗ ಮಾರುತಿ ಕಾಂಬಳೆ ಅಲಿಯಾಸ್ ದೀಪ್ಯಾನಿಗೆ ಶಿರಸಿಯ 1ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ಕೋರ್ಟ್ ಜೀವಾವಧಿ ಶಿಕ್ಷೆ ವಿಧಿಸಿದೆ. ನ್ಯಾಯಾಧೀಶ ಕಿರಣ ಕಿಣಿ ಅವರು ಅಪರಾಧಿಗೆ ಶಿಕ್ಷೆಯೊಂದಿಗೆ ರೂ.25 ಸಾವಿರ ದಂಡ ಹಾಗೂ ಮೃತರ ಕುಟುಂಬಕ್ಕೆ ರೂ.50 ಸಾವಿರ ಪರಿಹಾರ ನೀಡುವಂತೆ ಆದೇಶಿಸಿದ್ದಾರೆ. ಜಮೀನಿನ ವಿಚಾರದಲ್ಲಿ ರಾಮಕುಮಾರ ಮಾಳಗೆ ಪರವಾಗಿ ವಕೀಲ ಅಜಿತ ನಾಯ್ಕ ವಕಾಲತ್ತು ವಹಿಸಿದ್ದರು. ಇದನ್ನು ಪಾಂಡುರಂಗ ಕಾಂಬಳೆ ಹಾಗೂ ಸಹಚರರು ಸಹಿಸಿರಲಿಲ್ಲ. ಜಮೀನನ್ನು ವಶಪಡಿಸಿಕೊಳ್ಳಲು ಯತ್ನಿಸಿದ ಕಾರಣದಿಂದ ಪಾಂಡುರಂಗ ಕಾಂಬಳೆ ಎರಡು ಬಾರಿ ಜೈಲಿಗೆ ಹೋಗಿದ್ದ. ತನಿಖೆಯ ವೇಳೆ ಜೈಲಿನಲ್ಲಿದ್ದಾಗಲೇ ಕೊಲೆಗೆ ಸಂಚು ರೂಪಿಸಿದ್ದು ಬಹಿರಂಗವಾಗಿತ್ತು. ವಿಶೇಷವಾಗಿ, ಆರೋಪಿ ನಡೆಸಿದ್ದ ಮೊಬೈಲ್ ಕರೆಗಳ ಧ್ವನಿ ಮಾದರಿಯು ಎಫ್.ಎಸ್.ಎಲ್ ವರದಿಯಲ್ಲಿ ಹೊಂದಾಣಿಕೆಯಾಗಿದ್ದು ಈ ಪ್ರಕರಣದ ನಿರ್ಣಾಯಕ ಸಾಕ್ಷ್ಯವಾಗಿತ್ತು. ಸಿಪಿಐ ಅನಿಸ್ ಮುಜಾವರ ನೇತೃತ್ವದ ತಂಡ ಸಂಗ್ರಹಿಸಿದ ವೈಜ್ಞಾನಿಕ ಸಾಕ್ಷ್ಯಗಳ ಆಧಾರದ ಮೇಲೆ ಸರ್ಕಾರಿ ಅಭಿಯೋಜಕ ರಾಜೇಶ ಮಳಗೀಕರ ವಾದ ಮಂಡಿಸಿದ್ದರು.

## ಗೋಡೆ ಬರಹ ವೀಕ್ಷಣೆ: ಬಸವರಾಜ ರಾಯರಡ್ಡಿ ಮೆಚ್ಚುಗೆ

• ಉದಯವಾಹಿನಿ ಯಲಬುರ್ಗಾ

ಗೋಡೆ ಬರಹ ಸೇವಾ ಕಾರ್ಯ ವೀಕ್ಷಿಸಿದ ಶಾಸಕರು ಹಾಗೂ ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರಾದ ಸನ್ಮಾನ್ಯ ಶ್ರೀ ಬಸವರಾಜ ರಾಯರಡ್ಡಿ ರವರಿಂದ ಮೆಚ್ಚುಗೆ. ವಿಶ್ವಬಂಧು ಸೇವಾ ಗುರುಬಳಗ ಯಲಬುರ್ಗಾ-ಕುಕನೂರು ರವರಿಂದ ಬಸಾಪೂರ ಶಾಲೆಯಲ್ಲಿ 26 ನೇ ಗೋಡೆ ಬರಹ ಸೇವಾ ಕಾರ್ಯ ಜರುಗಿತು..

ಜನ ಸಂಪರ್ಕ ಸಭೆಯಲ್ಲಿ ಹಾಗೂ ಬಸಾಪೂರ ಗ್ರಾಮದ ಶಾಲೆಯ ನೂತನ ಕೊಠಡಿಗಳ ಉದ್ಘಾಟನೆಗೆ ಮಾನ್ಯ ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಸನ್ಮಾನ್ಯ ಶ್ರೀ ಬಸವರಾಜ ರಾಯರಡ್ಡಿ ರವರು ಆಗಮಿಸಿದ್ದ ಸಂದರ್ಭದಲ್ಲಿ ಗೋಡೆ ಬರಹ ಸೇವಾ ಕಾರ್ಯವನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿ ಸೇವಾ ಕಾರ್ಯಗಳನ್ನು ಮುಂದುವರಿಸಲು ತಿಳಿಸಿದರು. ವಿಶ್ವಬಂಧು ಸೇವಾ ಗುರುಬಳಗದ ಮುಖ್ಯಸ್ಥರಾದ ಸಿದ್ದಲಿಂಗಪ್ಪ ಶ್ಯಾಗೋಟಿ ರವರು ಮಾತನಾಡಿ ಸಮರ್ಪಣಾ ಮನೋಭಾವದಿಂದ ಸೇವೆ ಸಲ್ಲಿಸುವ ಅತ್ಯುತ್ತಮ ತಂಡ ಇರುವುದರಿಂದ ಹಲವಾರು ರಚನಾತ್ಮಕ ಕಾರ್ಯಗಳನ್ನು ಮಾಡಲು ಸಾಧ್ಯವಾಗಿದೆ ಎಂದರು.ಸಮೂಹ ಸಂಪನ್ಮೂಲ ವ್ಯಕ್ತಿ ನಾಗರಾಜ ಕುರಿ ಹಾಗೂ ಶಾಲೆಯ ಮುಖ್ಯ ಶಿಕ್ಷಕರಾದ ದೇವಪ್ಪ ತಳವಾರ ರವರು ಮಾತನಾಡಿ ಗೋಡೆ ಬರಹ ಸೇವಾ ಕಾರ್ಯದಿಂದ ಶಾಲೆ ಸುಂದರವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ಶಾಲೆಯ ಶಿಕ್ಷಕರಾದ ಸಕ್ರಪ್ಪ ಕುಷ್ಟಗಿ ಸರ್ವರಿಗೂ ಧನ್ಯವಾದಗಳನ್ನು ತಿಳಿಸಿದರು.


ಉದಯವಾಹಿನಿ ಚಿತ್ರ

ಗೋಡೆ ಬರಹ ಸೇವಾ ಕಾರ್ಯದಲ್ಲಿ ಶಿವಶಂಕ್ರಪ್ಪ ಹಳ್ಳದ, ಕೊಟ್ರೇಶ ಪಟ್ಟಣ, ಪ್ರಭು ಶಿವನಗೌಡ್ರ, ಅನ್ವರಹುಸೇನ ಸಂತು, ಪರಮೇಶ ಚಿಂತಾಮಣಿ, ಶರಣು ವಾಳದ,ಶಿವರಾಜ ಕವಡಿಮಟ್ಟಿ, ಮಂಜುನಾಥ ಮನ್ನಾಪುರ, ಮೆಹಬೂಬ ಬಾವಿಕಟ್ಟಿ, ಸಿದ್ರಾಮಪ್ಪ ತಿಪ್ಪರಸನಾಳ, ಹುಸೇನಸಾಬ ಬಾಗವಾನ್, ರಾಜಮಹ್ಮದ್ ಬಾಳಿಕಾಯಿ, ನಾಗರಾಜ ಕುರಿ,ಮುರ್ತುಜಾಸಾಬ ಮುಜಾವರ, ನಾಗರಾಜ ನಡುವಲಕೇರಿ,ಉಪಸ್ಥಿತರಿದ್ದರು.

## ಮುಳವಾಡ ಕಾಲುವೆಗಳಿಗೆ ನೀರು ಹರಿಸಲು ಒತ್ತಾಯಿಸಿ ರೈತರ ಪ್ರತಿಭಟನೆ

• ಉದಯವಾಹಿನಿ ಕೊಲ್ಹಾರ

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಕೊಲ್ಹಾರ ತಾಲ್ಲೂಕ ಘಟಕದಿಂದ ಮುಳವಾಡ ಪೂರ್ವ ಹಾಗೂ ಪಶ್ಚಿಮ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸುವಂತೆ ಒತ್ತಾಯಿಸಿ ತಾಲ್ಲೂಕಿನ ಮಟ್ಟಿಹಾಳ ಕ್ರಾಸ್ ನಲ್ಲಿರುವ ಕೆಬಿಜೆಎನ್‌ಎಲ್ ಕಚೇರಿ ಎದುರುಗಡೆ ಬೃಹತ್ ಪ್ರತಿಭಟನೆಯನ್ನು ನಡೆಸಿದರು.

ತಾಲ್ಲೂಕಾಧ್ಯಕ್ಷ ಸೋಮು ಬಿರಾದಾರ ನೇತೃತ್ವದಲ್ಲಿ ಹಮ್ಮಿಕೊಂಡ ಪ್ರತಿಭಟನೆಗೆ ರಾಜ್ಯ ರೈತ ಸಂಘದ ಅಧ್ಯಕ್ಷ ಚೂನಪ್ಪ ಪೂಜಾರಿ ಸಾಥ್ ನೀಡಿದರು. ಈ ವೇಳೆ ಸಾವಿರಾರು ಸಂಖ್ಯೆಯಲ್ಲಿ ಸೇರಿದ್ದ ರೈತರು ಸರ್ಕಾರ ಹಾಗೂ ನೀರಾವರಿ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿದರು. ಪ್ರತಿಭಟನಾ ಸ್ಥಳಕ್ಕೆ ನೀರಾವರಿ ಎಜುಕೇಟಿವ್ ಇಂಜನಿಯರ್ ಭೇಟಿ ನೀಡಿ ರೈತರ ಬೇಡಿಕೆಗಳನ್ನು ಈಡೇರಿಸುವುದಾಗಿ ಭರವಸೆ ನೀಡಿದರು. ನಂತರ ರಾಜ್ಯಾಧ್ಯಕ್ಷ ಚೂನಪ್ಪ ಪೂಜಾರಿ ಮಾತನಾಡಿ, 10 ದಿನ ಕಾಲುವೆ ನೀರನ್ನು ಬಂದ್ ಮಾಡುವುದರಿಂದ ಇಲ್ಲಿ ಬಿತ್ತಿದ ಈರುಳ್ಳಿ ಬೆಳೆ ಸಂಪೂರ್ಣವಾಗಿ ನಾಶವಾಗುತ್ತಿತ್ತು.

ಹೀಗಾಗಿ 5 ದಿನ ನೀರು ಬಂದ್ ಮಾಡಬೇಕೆಂಬ ಹೋರಾಟವಿತ್ತು. ಆದರೆ ಇವತ್ತು 7 ದಿನ ಬಂದ್ ಮಾಡಿ 10 ದಿನ ನೀರು ಬಿಡುವುದಕ್ಕೆ ಅಧಿಕಾರಿಗಳು ಒಪ್ಪಿಕೊಂಡಿದ್ದಾರೆ. ಏಪ್ರಿಲ್ ನಲ್ಲಿ ಕೇನಾಲ ಹೂಳು ಎತ್ತುವುದಕ್ಕೆ ಟೆಂಡರ್ ಕರೆದು ಮೇ ನಲ್ಲಿ ಹೂಳು ಎತ್ತುವ ಕೆಲಸ ಮುಗಿಬೇಕು. ಕೇನಾಲ ಮೇಲಿನ ರಸ್ತೆಗಳನ್ನು ಸುಧಾರಣೆ ಮಾಡಬೇಕು. ಕಾಲುವೆ ನಿರ್ಮಾಣಕ್ಕೆ ಭೂಮಿ ಕಳೆದುಕೊಂಡ ಕೆಲವು ರೈತರಿಗೆ ಪರಿಹಾರ ಕೊಟ್ಟಿಲ್ಲ, ತಕ್ಷಣ ಪರಿಹಾರ ಕೊಡಿಸುವ ಕೆಲಸ ಮಾಡಬೇಕು ಎಂದು ಅಧಿಕಾರಿಗಳಿಗೆ ಒತ್ತಾಯಿಸಿದ್ದೇವೆ ಅವರು ಕೂಡಾ ಬೇಡಿಕೆ ಈಡೇರಿಸುವ ಭರವಸೆ ನೀಡಿದ್ದಾರೆ ಎಂದರು.


ಉದಯವಾಹಿನಿ ಚಿತ್ರ

**ತಾಲ್ಲೂಕಾಧ್ಯಕ್ಷ ಸೋಮು ಬಿರಾದಾರ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಕೂಡ ನಮಗೆ ಸದಾ ನೀರಿನ ಸಮಸ್ಯೆ ಆಗುತ್ತಿದ್ದು,ಇದು ಆಗಬಾರದು ಎಂಬ ಕಾರಣಕ್ಕಾಗಿ ಈ ಒಂದು ಹೋರಾಟವನ್ನು ಹಮ್ಮಿಕೊಂಡಿದ್ದೇವೆ.ಇವತ್ತು ರಾಜ್ಯ ಅಧ್ಯಕ್ಷರು ನಮಗೆ ಬೆಂಬಲ ನೀಡಿದ್ದಾರೆ ಇವರಿಂದ ನಮಗೆ ನ್ಯಾಯ ದೊರಕಿದೆ ಎಂದರು. ಈ ಭಾಗದಲ್ಲಿ ಉಳ್ಳಾಗಡ್ಡಿ ಬೆಳೆಯುವ ರೈತರು ಸಾಕಷ್ಟು ಜನ ಇದ್ದು ನಮಗೆ ಏಪ್ರಿಲ್ ಅಂತ್ಯದವರೆಗೆ ನೀರನ್ನು ಪೂರೈಸಬೇಕೆಂದರು.**

## ಅಕ್ರಮವಾಗಿ ದಾಸ್ತಾನು: ಮರ ವಶಕ್ಕೆ

• ಉದಯವಾಹಿನಿ ಸಿದ್ದಾಪುರ

ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ಮರ ಕಡಿದು ಮನೆಯ ಬಳಿ ದಾಸ್ತಾನು ಇಟ್ಟಿದ್ದ ಮರದ ತುಂಡುಗಳು ಮತ್ತು ಸಾಗಾಟ ಮಾಡಲು ಬಳಸಿದ ವಾಹನವನ್ನು ಅರಣ್ಯ ಇಲಾಖೆಯ ಅಧಿಕಾರಿಗಳು ವಶಕ್ಕೆ ಪಡೆದ ಘಟನೆ ತಾಲ್ಲೂಕಿನ ಕ್ಯಾದಗಿ ವಲಯದ ಹಸ್ತಿಗುಳಿಯಲ್ಲಿ ನಡೆದಿದೆ.

ಕ್ಯಾದಗಿ ವಲಯದ ಅ.ಸ.ನಂ.40ರಲ್ಲಿ ಭರಣಿಗೆ ಜಾತಿಯ ಮರಗಳನ್ನು ಕೊರೆದು ವಿವಿಧ ಅಳತೆಯಲ್ಲಿ ಪರಿವರ್ತಿಸಿದ ಕಿರಣ ರಾಮಾ ನಾಯ್ಕ ತಮ್ಮ ಮನೆಯ ಬಳಿ ದಾಸ್ತಾನು ಇರಿಸಿಕೊಂಡಿದ್ದನು. ಖಚಿತ ಮಾಹಿತಿ ಮೇರೆಗೆ ಅರಣ್ಯ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ ಸುಮಾರು 3.820 ಕ್ಯೂ.ಮೀ ಭರಣಿ ಜಾತಿಗೆ ಸೇರಿದ ಮರದ ತುಂಡುಗಳು ಮತ್ತು ಸಾಗಾಟ ಮಾಡಲು ಬಳಸಿದ ವಾಹನವನ್ನು ಜಪ್ತಿಪಡಿಸಿಕೊಂಡಿದ್ದು, ಮಾಲೀಕನನ್ನು ವಶಕ್ಕೆ ಪಡೆದಿದ್ದಾರೆ. ಪ್ರಕರಣದ ಮೊದಲ ಆರೋಪಿ ಕಿರಣ ರಾಮಾ ನಾಯ್ಕ ತಪ್ಪಿಸಿಕೊಂಡಿದ್ದು ಶೋಧ ಕಾರ್ಯ ನಡೆಸಲಾಗುತ್ತಿದೆ. ಕಾರ್ಯಾಚರಣೆಯಲ್ಲಿ ಉಪವಲಯ ಅರಣ್ಯಾಧಿಕಾರಿ ಪ್ರಶಾಂತ ಎಚ್.ನಾಯ್ಕ, ಮಹಮ್ಮದ್ ಅಶ್ವಾಕ್, ಮತ್ತು ಗಸ್ತು ಅರಣ್ಯ ಪಾಲಕರಾದ ಮಹಮ್ಮದ್ ಇಸ್ಮಾಯಿಲ್, ವೆಂಕಟೇಶ ಪೂಜಾರಿ, ಲೋಕೇಶ್ವರ ಎಂ. ಗೌಡ ಹಾಗೂ ವಾಹನ ಚಾಲಕ ಅಶೋಕ ನಾಯ್ಕ ಹಾಗೂ ಸಿಬ್ಬಂದಿ ಪಾಲ್ಗೊಂಡಿದ್ದರು.

## ಸಾಮಾಜಿಕ ಕ್ರಾಂತಿ, ವಚನ ಕ್ರಾಂತಿಯ ಮೂಲಕ ಮಾನವ ಧರ್ಮದ ಶ್ರೇಷ್ಠತೆಯನ್ನು ಸಾರುವಲ್ಲಿ ಗುರು ಸಿದ್ದರಾಮೇಶ್ವರರ ಕೊಡುಗೆ ಶರಣ ಸಂಸ್ಕೃತಿಯ ಇತಿಹಾಸದಲ್ಲಿ ಬಹುದೊಡ್ಡ ಮೈಲುಗಲ್ಲು

• ಉದಯವಾಹಿನಿ ಕಾರಟಗಿ

ಶಿವಯೋಗಿ ಶ್ರೀ ಸಿದ್ದರಾಮೇಶ್ವರ 854 ಜಯಂತಿಯನ್ನು ಪಟ್ಟಣದ ತಹಶೀಲ್ದಾರ ಕಛೇರಿಯಲ್ಲಿ ತಹಶೀಲ್ದಾರ್ ಕುಮಾರ ಸ್ವಾಮಿ ಎಂ, ನೇತೃತ್ವದಲ್ಲಿ, ಪುರಸಭೆ,ಅಧಿಕಾರಿಗಳು ಸಿಬ್ಬಂದಿ ವರ್ಗ,ಆರಕ್ಷಕ ಠಾಣೆ ಅಧಿಕಾರಿಗಳು ಸಿಬ್ಬಂದಿ ವರ್ಗ,31 ನೇ ವಿತರಣಾ ಕಾಲುವೆ ಕಚೇರಿ, ಇನ್ನಿತರ ಸರ್ಕಾರಿ ಇಲಾಖೆಗಳಲ್ಲಿ ಶ್ರೀಯೋಗಿ ಸಿದ್ದರಾಮೇಶ್ವರ ಸಮುದಾಯದ ಮುಖಂಡರ ಸಹಯೋಗದಲ್ಲಿ ಶಿವಯೋಗಿ ಸಿದ್ದರಾಮೇಶ್ವರರ ಭಾವ ಚಿತ್ರದೊಂದಿಗೆ ಪೂಜೆ ಸಲ್ಲಿಸಿ ಪುಷ್ಪ ಅರ್ಪಿಸಿ ಸಂಭ್ರಮ ಸಡಗರದಿಂದ ಆಚರಿಸಿದರು, ಇದಕ್ಕೂ ಮುನ್ನ ಸಮಾಜದ ಅಧ್ಯಕ್ಷರು ಪ್ರಮುಖರು ಮುಖಂಡರು ಪಟ್ಟಣದ ವಿವಿಧ ಪ್ರಮುಖ ವೃತ್ತಗಳಲ್ಲಿ ಸ್ವಚ್ಛತೆಯೊಂದಿಗೆ ತೆಂಗಿನ ಗರಿಯಿಂದ ಶೃಂಗರಿಸಿ ಹಬ್ಬದ ವಾತಾವರಣ ಸೃಷ್ಟಿಸಿದರು.

ಈ ವೇಳೆ ಸಮಾಜದ ಮುಖಂಡರು ಮಾತನಾಡಿ ಕಾಯಕಯೋಗಿ, ಶಿವಯೋಗಿ ಸಿದ್ದರಾಮೇಶ್ವರರ ಭೋಧಿಸಿದ ಆದರ್ಶಗಳು ನಮ್ಮೆಲ್ಲರಿಗೂ ಸದಾ ದಾರಿದೀಪವಾಗಲಿ.ಸಾಮಾಜಿಕ ಕ್ರಾಂತಿ, ವಚನ ಕ್ರಾಂತಿಯ ಮೂಲಕ ಮಾನವ ಧರ್ಮದ ಶ್ರೇಷ್ಠತೆಯನ್ನು ಸಾರುವಲ್ಲಿ ಗುರು ಸಿದ್ದರಾಮೇಶ್ವರರ ಕೊಡುಗೆ ಶರಣ ಸಂಸ್ಕೃತಿಯ ಇತಿಹಾಸದಲ್ಲಿ ಬಹುದೊಡ್ಡ ಮೈಲುಗಲ್ಲು. ಶಿವಯೋಗಿ ಶ್ರೀ ಸಿದ್ದರಾಮೇಶ್ವರರು ಭೋವಿ ಸಮಾಜದ ಕುಲ ಗುರುಗಳು.. ವಿಶೇಷವಾಗಿ 13ನೇ ಶತಮಾನದಲ್ಲಿ ನಡೆದ ವಚನ ಚಳವಳಿಯಲ್ಲಿ ಪ್ರಮುಖ ಪಾತ್ರ ವಹಿಸಿದವರು. ಅನುಭವ ಮಂಟಪದ ಮೂರನೇ ಪೀಠಾಧ್ಯಕ್ಷರು. ಕೆರೆಗಳನ್ನು ಕಟ್ಟುವ ಮೂಲಕ ಕಾಯಕ ಯೋಗಿ ಎಂದೇ ಹೆಸರಾದವರು,ಇವರ ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿ ಕೊಳ್ಳಬೇಕು ಎಂದು ಹೇಳಿದರು,

ಈ ಸಂದರ್ಭದಲ್ಲಿ ಸಮಾಜದ ಹಿರಿಯರು ಗುರಪ್ಪ, ಹೇಮಚಂದ್ರ, ದುರುಗೇಶ್, ವೆಂಕೋಬ ನವಲಿ, ಪಂಪಪಾತಿ ತಾ,ಅಧ್ಯಕ್ಷರು, ರವಿಕುಮಾರ ಅಧ್ಯಕ್ಷರು, ನಾಗರಾಜ, ದೊಡ್ಡ ಹನುಮೇಶ,ರಾಘವೇಂದ್ರ ಆರ್, ರವಿ ವಿಜಾಪುರ, ನಾಗೇಶ್, ಮತ್ತು ತಹಶೀಲ್ದಾರ್, ಸಿಬ್ಬಂದಿ ವರ್ಗ, ಪುರಸಭೆ ಸಿಬ್ಬಂದಿ ವರ್ಗ ಮತ್ತಿತರರು ಇದ್ದರು,


ಉದಯವಾಹಿನಿ ಚಿತ್ರ

**ಆದರ್ಶ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಿ**

## ಕಿಂಡಿ ಅಣೆಕಟ್ಟೆ ನಿರ್ವಹಣೆಗೆ ಬೇಕು ಯೋಜನೆ: ಅಂತರ್ಜಲ ವೃದ್ಧಿಗೂ ಸಹಕಾರಿ

• ಉದಯವಾಹಿನಿ ಉಡುಪಿ

ಜಿಲ್ಲೆಯಲ್ಲಿ ಬೇಸಿಗೆ ಕಾಲದಲ್ಲಿ ಕಿಂಡಿ ಅಣೆಕಟ್ಟೆಗಳು ಪ್ರಮುಖ ಜಲಮೂಲಗಳಾಗಿದ್ದು, ನಿರ್ವಹಣೆ ಕೊರತೆಯಿಂದ ವಿವಿಧೆಡೆ ಅವುಗಳ ಪ್ರಯೋಜನ ಸಿಗುತ್ತಿಲ್ಲ ಎಂಬುದು ರೈತರ ಅಳಲಾಗಿದೆ.

ಕೃಷಿಗೆ ನೀರು ಒದಗಿಸುವುದರ ಜೊತೆಗೆ ಅಂತರ್ಜಲ ವೃದ್ಧಿಗೂ ಕಿಂಡಿ ಅಣೆಕಟ್ಟೆಗಳು ಅತ್ಯಂತ ಸಹಕಾರಿಯಾಗಿದೆ. ಭತ್ತದ ಎರಡನೇ ಬೆಳೆಗೆ ಮತ್ತು ತರಕಾರಿ ಬೆಳೆಗೂ ಇದರ ನೀರನ್ನು ಆಶ್ರಯಿಸುವ ರೈತರೂ ಜಿಲ್ಲೆಯಲ್ಲಿದ್ದಾರೆ. ಈ ಭಾಗದ ರೈತರಿಗೆ ಹೆಚ್ಚು ಪ್ರಯೋಜನಕಾರಿಯಾಗಿರುವ ಕಿಂಡಿ ಅಣೆಗಟ್ಟೆಗಳ ನಿರ್ವಹಣೆಗಾಗಿ ಬಜೆಟ್‌ನಲ್ಲಿ ಸಮರ್ಪಕ ಅನುದಾನ ಘೋಷಿಸಿ, ಯೋಜನೆ ರೂಪಿಸಬೇಕೆಂಬ ಬೇಡಿಕೆ ರೈತರಿಂದ ಕೇಳಿ ಬಂದಿದೆ. ಜಿಲ್ಲೆಯಲ್ಲಿ ಸಾವಿರಕ್ಕೂ ಹೆಚ್ಚು ಸಣ್ಣ ಮತ್ತು ದೊಡ್ಡ ಕಿಂಡಿ ಅಣೆಕಟ್ಟುಗಳಿದ್ದು, ಸಣ್ಣ ನೀರಾವರಿ ಇಲಾಖೆ, ಜಲಾನಯನ ಇಲಾಖೆ, ಜಿಲ್ಲಾ ಪಂಚಾಯಿತಿ ಅಧೀನದಲ್ಲಿ ಅವುಗಳನ್ನು ನಿರ್ಮಿಸಲಾಗಿದೆ.

ಕೆಲವೆಡೆ ಈ ಕಿಂಡಿ ಅಣೆಕಟ್ಟೆಗಳ ನಿರ್ವಹಣೆಯನ್ನು ಗ್ರಾಮ ಪಂಚಾಯಿತಿಯವರು ನೋಡಿಕೊಳ್ಳುತ್ತಿದ್ದು, ಸಮರ್ಪಕ ಅನುದಾನದ ಕೊರತೆಯಿಂದ ಅವುಗಳ ನಿರ್ವಹಣೆ ನಡೆಯುತ್ತಿಲ್ಲ ಎಂಬುದು ಕೃಷಿಕರ ಆರೋಪ. ಕಿಂಡಿ ಅಣೆಕಟ್ಟೆಗಳಿಗೆ ಸೂಕ್ತ ಸಮಯದಲ್ಲಿ ಹಲಗೆ ಅಳವಡಿಸದಿರುವುದರಿಂದಲೂ ಸಮಸ್ಯೆಯಾಗುತ್ತಿದೆ. ಮಳೆಗಾಲ ಮುಗಿದ ಕೂಡಲೇ ಅಳವಡಿಸಿದರೆ ನೀರು ಸಂಗ್ರಹವಾಗುತ್ತದೆ. ವಿಳಂಬ ಮಾಡಿದರೆ ಸಾಕಷ್ಟು ನೀರು ಸಂಗ್ರಹವಾಗುವುದಿಲ್ಲ. ಕೆಲವೆಡೆ ಹಲಗೆ ಅಳವಡಿಸದಿರುವುದರಿಂದ ಉಪ್ಪುನೀರು ನುಗ್ಗುತ್ತದೆ ಎನ್ನುತ್ತಾರೆ ರೈತರು. ಸಾಮಾನ್ಯವಾಗಿ ನವೆಂಬರ್, ಡಿಸೆಂಬರ್ ತಿಂಗಳಲ್ಲಿ ಕಿಂಡಿ ಅಣೆಕಟ್ಟೆಗಳಿಗೆ ಹಲಗೆ ಅಳವಡಿಸಲಾಗುತ್ತದೆ, ಆದರೆ ಕೆಲವೆಡೆ ಜನವರಿ ತಿಂಗಳವರೆಗೂ ವಿಳಂಬವಾಗುತ್ತಿದೆ ಎಂದೂ ದೂರುತ್ತಾರೆ.

ಕಿಂಡಿ ಅಣೆಕಟ್ಟೆಗಳ ನಿರ್ವಹಣೆಗಾಗಿ ಗ್ರಾಮ ಪಂಚಾಯಿತಿಗಳಿಗೆ ಬಜೆಟ್‌ನಲ್ಲಿ ಅನುದಾನ ಮೀಸಲಿಡಬೇಕು ಎಂಬುದು ಜನರ ಆಗ್ರಹವಾಗಿದೆ. ಕೆಲವೆಡೆ ಕಿಂಡಿ ಅಣೆಕಟ್ಟೆಗಳಲ್ಲಿ ನಿರಂತರ ಸೋರಿಕೆಯಾಗುವುದರಿಂದಲೂ ಬೇಸಿಗೆಯಲ್ಲಿ ನೀರಿನ ಕ್ಷಾಮ ತಲೆದೋರುತ್ತದೆ. ಅವುಗಳ ಪುನರ್‌ಶ್ಚೇತನಕ್ಕೂ ಅನುದಾನ ಘೋಷಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

# ಪಾಳುಬಿದ್ದ ಸರ್ಕಾರಿ ಕಟ್ಟಡ: ಅಕ್ರಮ ಚಟುವಟಿಕೆಗಳ ತಾಣ

ಸರ್ಕಾರವು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಹಲವು ಯೋಜನೆಯಡಿ ಕಟ್ಟಡಗಳನ್ನು ನಿರ್ಮಿಸಿದ್ದು, ಹಣವೆಲ್ಲವೂ ವ್ಯರ್ಥ

• ಉದಯವಾಹಿನಿ ಜಮಖಂಡಿ

ಜಿಲ್ಲಾ ಕೇಂದ್ರವಾಗಿರುವ ಜಮಖಂಡಿ ನಗರದ ಬಡಾವಣೆ ಒಂದರಲ್ಲಿ ನಿರ್ಮಿಸಿರುವ ಸರ್ಕಾರಿ ಕಟ್ಟಡ ಪಾಳು ಬಿದ್ದಿದ್ದು, ಅಕ್ರಮ ಚಟುವಟಿಕೆಗಳ ತಾಣವಾಗಿ ಮಾರ್ಪಟ್ಟಿದೆ.

ಸರ್ಕಾರವು ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಹಲವು ಯೋಜನೆಯಡಿ ಕಟ್ಟಡಗಳನ್ನು ನಿರ್ಮಿಸಿದ್ದು, ಹಣವೆಲ್ಲವೂ ವ್ಯರ್ಥವಾಗಿದೆ.

ಉಪವಿಭಾಗಾಧಿಕಾರಿಗಳಿಗಾಗಿ ನಿರ್ಮಿತವಾಗುತ್ತಿರುವ ವಸತಿ ಕಟ್ಟಡವು ದಶಕಗಳಿಂದ ಪೂರ್ಣಗೊಳ್ಳದೇ ಹಾಗೇ ನಿಂತಿದೆ ಎಷ್ಟೋ ಉಪವಿಭಾಗಾಧಿಕಾರಿಗಳು ಬಂದು ಹೋದರು ಆದರೆ ಇತ್ತ ಕಡೆ ಗಮನವೇ ಹರಿಸಿಲ್ಲ. ಕಳೆದ 20 ವರ್ಷದ ಈ ವಸತಿ ಕಟ್ಟಡವು ನಿರ್ಮಾಣಗೊಳ್ಳದೇ ಹಾಗೇ ನಿಂತಿದ್ದರಿಂದ ಇದು ಅನೈತಿಕ ಚಟುವಟಿಕೆ ತಾಣವಾಗಿದೆ.

ಕಟ್ಟಡದ ಸುತ್ತಲೂ ಗಿಡಗಂಟಿಗಳು ಎತ್ತರಕ್ಕೆ ಬೆಳೆದು ವಿಷಜಂತುಗಳ ತಾಣವಾಗಿ ಮಾರ್ಪಟ್ಟಿವೆ. ಕಟ್ಟಡವು ಭಾಗಶಃ ಶಿಥಿಲಗೊಂಡಿದೆ. ಪಾಳು ಬಿದ್ದಿರುವುದನ್ನು ಸ್ಥಳೀಯರ ಆಕ್ರೋಶ ಹೊರಹಾಕುತ್ತಿದ್ದಾರೆ. 2005 ರಲ್ಲಿ ಅಂದಿನ ಉಪವಿಭಾಗಾಧಿಕಾರಿ ಎನ್.ಎಚ್ ಸೂಳೇಬಾವಿಯವರು ಅಧಿಕೃತ ಸರಕಾರಿ ನಿವೇಶನಕ್ಕಾಗಿ ಖಾಸಗಿಯಿಂದ ಖರೀದಿಸಿ ಸುಮಾರು 25 ಲಕ್ಷ ರೂ ಅನುದಾದಲ್ಲಿ ನಿರ್ಮಿತಿ ಕೇಂದ್ರಕ್ಕೆ ನಿರ್ಮಾಣದ ಕಾರ್ಯವನ್ನು ನೀಡಿದ್ದರು ಒಂದು ವರ್ಷದಲ್ಲಿ ಅವರು ಮೇಲ್ಛಾವಣೆಯನ್ನು ಹಾಕಿ ಅನುದಾನದ ಕೊರತೆಯಿಂದು ನಿರ್ಮಾಣಕಾರ್ಯವನ್ನು ನಿಲ್ಲಿಸಿದ್ದಾರೆ.

2005 ರಿಂದ 2025ರ ವರೆಗೆ ಸುಮಾರು 20 ಕ್ಕೂ ಅಧಿಕ ಉಪವಿಭಾಗಾಧಿಕಾರಿಗಳು ಕರ್ತವ್ಯ ನಿರ್ವಹಿಸಿದ್ದಾರೆ ಇವರಿಗೆ ಈ ಅರ್ಧ ನಿರ್ಮಾಣ ಕಟ್ಟಡದ ಬಗ್ಗೆ ಗೊತ್ತೊದೆಯೋ ಅಥವಾ ಜಾಣ ಕುರುಡು ಪ್ರದರ್ಶಿದ್ದಾರೆಯೇ ತಿಳಿದಿಲ್ಲ. ಇನ್ನೊಂದು ಸೋಜಿಗವೇನೆಂದರೆ ಈ ನಿವೇಶನದ ಬಗ್ಗೆ ಯಾರಿಗೂ ತಿಳಿದಿಯೇ ಇಲ್ಲ ದಾಖಲೆಗಳ ಬಗ್ಗೆ ವಿಚಾರಿಸಿದರೆ ದಾಖಲೆಗಳೇ ಸಿಗುತ್ತಿಲ್ಲ. ಅದೂ ಅಲ್ಲದೆ ನಮ್ಮಲ್ಲಿ ಅರ್ಧಕ್ಕೆ ನಿಂತ ಕಟ್ಟಡವೇ ಇಲ್ಲವೆಂದು ಉತ್ತರ ಕೇಳಿಬರುತ್ತಿದೆ.

ಅಂದರೆ ಈ ಸರಕಾರಿ ನಿವೇಶನ ಕಟ್ಟಡಕ್ಕೆ ಯಾರು ವಾರಸುದಾರರು ಎನ್ನುವ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕಾಡುತ್ತಿದೆ. ಇಂತಹ ಸರ್ಕಾರಿ ಕಟ್ಟಡಗಳ ಬಗ್ಗೆ ಜನಪ್ರತಿನಿಧಿಗಳು ಸಂಬಧಪಟ್ಟ ಅಧಿಕಾರಿಗಳು ಹೆಚ್ಚಿನ ಮುತುವರ್ಜಿ ವಹಿಸಬೇಕು. ಈಗಾಗಲೇ ವಸತಿ ಕಟ್ಟಡ ಅಪೂರ್ಣಗೊಂಡ ವರ್ಷಗಳಿಂದ ಶಿಥಿಲಗೊಂಡಿದ್ದು, ಅದರ ಬಗ್ಗೆ ಜಿಲ್ಲಾಧಿಕಾರಿಗಳು ಗಮನ ಹರಿಸಬೇಕು ಎಂದು ಹೆಸರು ಹೇಳಲು ಇಚ್ಚಿಸದ ವ್ಯಕ್ತಿ ತಿಳಿಸಿದ್ದಾರೆ.

ಅಧಿಕಾರಿಗಳು ಸಾರ್ವಜನಿಕರ ಹಣವನ್ನು ಬೇಕಾಬಿಟ್ಟಿ ಖರ್ಚು ಮಾಡುತ್ತಿದ್ದಾರೆ. ತಾಲ್ಲೂಕಿನಲ್ಲಿ ಎಷ್ಟೋ ಸರ್ಕಾರಿ ಕಟ್ಟಡಗಳು ಅರ್ಧದಲ್ಲೇ ನಿಂತು ಅನೈತಿಕ ತಾಣಗಳಾಗಿವೆ. ಮೇಲಾಧಿಕಾರಿಗಳು, ಜನಪ್ರತಿನಿಧಿಗಳು ಇಂತಹ ಕಟ್ಟಡಗಳ ಬಗ್ಗೆ ಗಮನ ಹರಿಸಿ ಕಾಮಗಾರಿಗಳನ್ನು ಪೂರ್ಣಮಾಡಬೇಕು ಎಂದು ಸಾರ್ವಜನಿಕರು ತಿಳಿಸಿದ್ದಾರೆ.

ಈ ನಮ್ಮ ಬಡಾವಣೆಯಲ್ಲಿ ಈ ಕಟ್ಟಡದಿಂದ ನಮಗೆಲ್ಲ ಬಹಳ ತೊಂದರೆಯಾಗಿದೆ ರಾತ್ರಿಯಾಯಿತೆಂದರೆ ಕುಡುಕರ ಹಾವಳಿ ಹೆಚ್ಚು ಅದರಿಂದ ಮಹಿಳೆಯರಿಗೆ ಮುಜುಗರವಾಗುತ್ತದೆ ಎಂದು ಅಲ್ಲಿಯ ನಿವಾಸಿಗಳು ಆಕ್ಷೇಪವೆತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಉಪವಿಭಾಗಾಧಿಕಾರಿಗಳ ಪಿಡಬ್ಲ್ಯೂಡಿ ವಸತಿ ಗೃಹ ತುಂಬಾ ಹಳೆಯ ಕಟ್ಟಡವಿದ್ದು ಅದು ಶೀಥಿಲಗೊಂಡಿದೆ. ಈ ಹಿಂದೆ 2002-03 ನೇ ಸಾಲಿನಲ್ಲಿ ಕಂದಾಯ ಇಲಾಖೆ ವತಿಯಿಂದ ನಿರ್ಮಿತಿ ಕೇಂದ್ರದ ಮೂಲಕ ಉಪವಿಭಾಗಾಧಿಕಾರಿಗಳ ವಸತಿ ಗೃಹ ನಿರ್ಮಿಸಲಾಗಿತ್ತು. ಆದರೆ ಅನುದಾನದ ಕೊರತೆಯಿಂದ ಕಾಮಗಾರಿ ಪೂರ್ಣಗೊಂಡಿಲ್ಲ. ಇನ್ನು ಅರ್ಧವಿದ್ದ ಕಟ್ಟಡವನ್ನು ಪುನರುಜ್ಜೀವನಗೊಳಿಸಲು ಸುಮಾರು 26.39 ಲಕ್ಷ ರೂಗಳ ಅನುದಾನವು ಬೇಕಾಗಬಹುದು ಎಂದು ಜಿಲ್ಲಾಧಿಕಾರಿಗಳಲ್ಲಿ ಮನವಿ ಮಡಿಕೊಂಡಿದ್ದೇವೆ. -ಶ್ವೇತಾ ಬೀಡಿಕರ, ಉಪವಿಭಾಗಾಧಿಕಾರಿ**

**ಲಕ್ಷಾಂತರ ರೂಪಾಯಿ ಖರ್ಚು**



# ಸಲ್ಲು ಜೊತೆ ಕಾರು ಡ್ರಿಫ್ಟ್ ಮಾಡಿದ ಧೋನಿ

ನಟ ಸಲ್ಮಾನ್ ಖಾನ್ ಹಾಗೂ ಕ್ರಿಕೆಟರ್ ಎಂಎಸ್ ಧೋನಿ ಮಧ್ಯೆ ಒಳ್ಳೆಯ ಒಡನಾಟ ಇದೆ. ಇದು ಆಗಾಗ ಸಾಬೀತಾಗುತ್ತಾ ಇರುತ್ತದೆ. ಈಗ ಸಲ್ಲು ಫಾರ್ಮ್‌ಹೌಸ್‌ನಲ್ಲಿ ಸೇರಿರೋ ಇವರು ಕಾರುಗಳನ್ನು ಡ್ರಿಫ್ಟ್ ಮಾಡಿದ್ದಾರೆ. ಈ ಫೋಟೋಗೆ ಫ್ಯಾನ್ಸ್ ನಾನಾ ರೀತಿಯಲ್ಲಿ ಕಮೆಂಟ್ ಮಾಡುತ್ತಿದ್ದಾರೆ. ಇದನ್ನು ಫ್ಯಾನ್ಸ್ ಇಷ್ಟಪಟ್ಟಿದ್ದಾರೆ. ಟೀಂ ಇಂಡಿಯಾ ಮಾಜಿ ಕ್ರಿಕೆಟರ್ ಎಂಎಸ್ ಧೋನಿಗೆ ವಾಹನಗಳ ಬಗ್ಗೆ ವಿಶೇಷ ಕ್ರೇಜ್ ಇದೆ. ಈಗ ಸಲ್ಮಾನ್ ಖಾನ್ ಫಾರ್ಮ್‌ಹೌಸ್‌ಗೆ ತೆರಳಿರೋ ಅವರು ವಾಹನವೊಂದನ್ನು ಓಡಿಸಿ ಅದನ್ನು ಡ್ರಿಫ್ಟ್ ಮಾಡಿ ಗಮನ ಸೆಳೆದಿದ್ದಾರೆ. ಸಿಂಗರ್ ಎಪಿ ದಿಲ್ಲೋನ್ ಅವರು ಸೋಶಿಯಲ್ ಮೀಡಿಯಾದಲ್ಲಿ ಈ ಅಪರೂಪದ ಫೋಟೋಗಳನ್ನು ಹಂಚಿಕೊಂಡಿದ್ದಾರೆ. ಈ ಫೋಟೋದಲ್ಲಿ ಅವರು ಧೋನಿ ಹಾಗೂ ಸಲ್ಲು ಹೆಗಲಮೇಲೆ ಕೈ ಹಾಕಿ ನಿಂತಿದ್ದಾರೆ. ಧೋನಿ ಅವರು ರೇನ್‌ಕೋಟ್ ಹಾಕಿ ಪೋಸ್ ಕೊಟ್ಟಿದ್ದಾರೆ. ಸಲ್ಮಾನ್ ಖಾನ್ ಫಾರ್ಮ್‌ಹೌಸ್‌ನಲ್ಲಿ ಅವರು ಸಮಯ ಕಳೆದಿದ್ದಾರೆ ಎನ್ನಲಾಗಿದೆ. ಪಾರ್ಟಿ ಮಾಡೋಕೆ ಇವರು ಆಗಾಗ ಒಟ್ಟಿಗೆ ಸೇರುತ್ತಾರೆ ಎಂಬುದು ವಿಶೇಷ.



# ಎರಡೇ ದಿನಕ್ಕೆ 100 ಕೋಟಿ ಗಳಿಕೆ

ಮೆಗಾಸ್ಟಾರ್ ಚಿರಂಜೀವಿ ನಟನೆಯ 'ಮನ ಶಂಕರ ವರಪ್ರಸಾದ್ ಗಾರು' ಚಿತ್ರವು ಸಂಕ್ರಾಂತಿ ಹಬ್ಬದಂದು ಬಿಡುಗಡೆಯಾಗಿ ಅಭೂತಪೂರ್ವ ಯಶಸ್ಸು ಗಳಿಸಿದೆ. ಅನಿಲ್ ರವಿಪುಡಿ ನಿರ್ದೇಶನದ ಈ ಚಿತ್ರ ಕೇವಲ ಎರಡು ದಿನಗಳಲ್ಲಿ 100 ಕೋಟಿ ರೂಪಾಯಿ ಕ್ಲಬ್ ಸೇರಿ ಬ್ಲಾಕ್‌ಬಸ್ಟರ್ ಎನಿಸಿಕೊಂಡಿದೆ.

ಚಿರಂಜೀವಿ ಅವರ ಅಭಿನಯ, ನಯನತಾರಾ ಉಪಸ್ಥಿತಿ, ಮತ್ತು ಕೌಟುಂಬಿಕ ಮನರಂಜನೆ ಪ್ರೇಕ್ಷಕರನ್ನು ಆಕರ್ಷಿಸಿದೆ. ಮೆಗಾಸ್ಟಾರ್ ಚಿರಂಜೀವಿ ಅವರ 'ಮನ ಶಂಕರ ವರಪ್ರಸಾದ್ ಗಾರು' ಚಿತ್ರವು ಅಭೂತಪೂರ್ವ ಯಶಸ್ಸನ್ನು ಗಳಿಸಿದೆ. ಈ ಚಿತ್ರವನ್ನು ಅನಿಲ್ ರವಿಪುಡಿ ನಿರ್ದೇಶಿಸಿದ್ದಾರೆ. ಈ ಚಿತ್ರವು ಜನವರಿ 12 ರಂದು ಸಂಕ್ರಾಂತಿ ಹಬ್ಬದ ಸಂದರ್ಭದಲ್ಲಿ ಅದ್ದೂರಿಯಾಗಿ ಬಿಡುಗಡೆಯಾಯಿತು.

ಮೆಗಾಸ್ಟಾರ್ ಚಿರಂಜೀವಿ ಮತ್ತೊಮ್ಮೆ ಈ ಚಿತ್ರದ ಮೂಲಕ ಬ್ಲಾಕ್ ಬಸ್ಟರ್ ಸಾಧನೆ ಮಾಡಿದ್ದಾರೆ. ಈ ಚಿತ್ರದಲ್ಲಿ ಮೆಗಾಸ್ಟಾರ್ ಚಿರಂಜೀವಿ ತಮ್ಮ ನಟನೆಯಿಂದ ಗಮನ ಸೆಳೆದಿದ್ದಾರೆ. ಈ ಚಿತ್ರ ಮೊದಲ ಎರಡು ದಿನದಲ್ಲಿ ಒಳ್ಳೆಯ ಕಲೆಕ್ಷನ್ ಮಾಡಿ 100 ಕೋಟಿ ರೂಪಾಯಿ ಕ್ಲಬ್ ಸೇರಿದೆ. 'ಮನ ಶಂಕರ ವರಪ್ರಸಾದ್ ಗಾರು' ಚಿತ್ರಕ್ಕೆ ನಯನತಾರಾ ನಾಯಕಿಯಾಗಿ ನಟಿಸಿದ್ದಾರೆ. ಚಿಕ್ಕವರು ಮತ್ತು ಹಿರಿಯರು ಎಲ್ಲರೂ ಈ ಚಿತ್ರವನ್ನು ಅಪಾರವಾಗಿ ಆನಂದಿಸುತ್ತಿದ್ದಾರೆ. ಮೊದಲ ದಿನವೇ ಈ ಚಿತ್ರ ಅದ್ಭುತ ಕಲೆಕ್ಷನ್ ಮಾಡಿದೆ. ವಿಶ್ವಾದ್ಯಂತ ಬಿಡುಗಡೆಯಾದ 'ಮನ ಶಂಕರ ವರಪ್ರಸಾದ್ ಗಾರು' ಚಿತ್ರ ಒಟ್ಟು 84 ಕೋಟಿ ರೂ. ಕಲೆಕ್ಷನ್ ಮಾಡಿದೆ.

# ಬಾಲಿವುಡ್‌ನಿಂದ ಕಾಂತಾರಕ್ಕೆ ಅವಮಾನ

ಕೆಲ ತಿಂಗಳ ಹಿಂದಷ್ಟೆ ಬಾಲಿವುಡ್ ನಟ ರಣ್ವೀರ್ ಸಿಂಗ್ ವೇದಿಕೆ ಮೇಲೆ ಅಸಹ್ಯಕರವಾಗಿ ದೈವದ ಅನುಕರಣೆ ಮಾಡಿ ನಿಂದನೆಗೆ ಗುರಿಯಾಗಿದ್ದರು ಬಳಿಕ ಕ್ಷಮೆಯನ್ನೂ ಕೇಳಿದರು. ಆದರೆ ಅಷ್ಟಕ್ಕೆ ಬಾಲಿವುಡ್ ಬುದ್ಧಿಕಲಿತಿಲ್ಲ, ಇದೀಗ ಬಾಲಿವುಡ್‌ನ ಹಾಸ್ಯ ಸಿನಿಮಾ ಒಂದು ದೈವವನ್ನು ಹಾಸ್ಯಕ್ಕೆ ಬಳಸಿಕೊಳ್ಳಲು ಯತ್ನಿಸಿದೆ. ಯಾವುದು ಆ ಸಿನಿಮಾ 'ಕಾಂತಾರ' ಮತ್ತು 'ಕಾಂತಾರ: ಚಾಪ್ಟರ್ 1' ಸಿನಿಮಾನಲ್ಲಿ ಕರಾವಳಿಯ ದೈವ ಆರಾಧನೆ ಅದರ ಮಹಿಮೆ ಇನ್ನಿತರೆ ವಿಚಾರಗಳನ್ನು ತೋರಿಸಲಾಗಿದೆ. ಸಿನಿಮಾ ಮಾಡುವಾಗ ತಾವು ದೈವಗಳಿಗೆ ಅಪಚಾರ ಆಗದಂತೆ ಬಲು ನೇಮ-ನಿಷ್ಠೆಯಿಂದ ಸಿನಿಮಾ ಮಾಡಿರುವುದಾಗಿ ರಿಷಬ್ ಶೆಟ್ಟಿ ಹೇಳಿದ್ದರು. ಅಲ್ಲದೆ ಯಾರೂ ಸಹ ದೈವವನ್ನು ಅನುಕರಣೆ ಮಾಡುವುದು ಬೇಡ, ದೈವವನ್ನು ಹಾಸ್ಯಕ್ಕೆ ಬಳಸಿಕೊಳ್ಳುವುದು ಅಕ್ಷಮ್ಯ ಎಂದು ಸಹ ಹೇಳಿದ್ದರು.



ಆದರೂ ಸಹ ಕೆಲವರು ಅದನ್ನು ಮಾಡುತ್ತಲೇ ಬಂದಿದ್ದಾರೆ. ಇತ್ತೀಚೆಗಷ್ಟೆ ಬಾಲಿವುಡ್‌ನ ಸ್ಟಾರ್ ನಟ ರಣ್ವೀರ್ ಸಿಂಗ್, ವೇದಿಕೆ ಮೇಲೆ ಕೆಟ್ಟದಾಗಿ ದೈವನ ಅನುಕರಣೆ ಮಾಡಿ ಕನ್ನಡಿಗರ ಸಿಟ್ಟಿಗೆ ಕಾರಣವಾಗಿದ್ದರು. ಆದರೆ ಇದೀಗ ಮತ್ತೊಂದು ಬಾಲಿವುಡ್ ತಂಡ ಇದೇ ಯತ್ನ ಮಾಡಿದೆ. ಬಾಲಿವುಡ್‌ನ ಹಾಸ್ಯ ಪ್ರಧಾನ ಸಿನಿಮಾಗಳಲ್ಲಿ ಅತಿರೇಕಕ್ಕೆ ಹೋಗಿ ಹಾಸ್ಯ ಮಾಡುವುದು ಮಾಮೂಲು, ಬಾಲಿವುಡ್‌ನಲ್ಲಿ ನಡೆಯುವುದು ಮೈಂಡ್ ಲೆಸ್ ಕಾಮಿಡಿ ಮತ್ತು ಬಾಡಿ ಶೇಮಿಂಗ್ ಕಾಮಿಡಿ. ಗೋಲ್‌ಮಾಲ್, ವೆಲ್‌ಹಮ್, 'ಹೌಸ್‌ಫುಯಲ್' ಇಂಥಹುಗಳಿಗೆ ಉದಾಹರಣೆ. ಇದೀಗ ಬಾಲಿವುಡ್‌ನ ಇಂಥಹುದೇ ಒಂದು ಹಾಸ್ಯ ಪ್ರಧಾನ ಸಿನಿಮಾನಲ್ಲಿ 'ಕಾಂತಾರ' ಸಿನಿಮಾವನ್ನು ಹಾಸ್ಯಕ್ಕೆ ಬಳಸಿಕೊಳ್ಳಲಾಗಿದೆ. 'ರಾಹು-ಕೇತು' ಹೆಸರಿನ ಹಿಂದಿ ಹಾಸ್ಯ ಪ್ರಧಾನ ಸಿನಿಮಾ ಕೆಲವೇ ದಿನಗಳಲ್ಲಿ ಬಿಡುಗಡೆ ಆಗಲಿದ್ದು, ಸಿನಿಮಾನಲ್ಲಿ 'ಕಾಂತಾರ' ಸಿನಿಮಾದ ಕೂಗು ಮತ್ತು ಸಿನಿಮಾದ ರೆಫೆರೆನ್ಸ್‌ಗಳನ್ನು ಸಹ ಬಳಸಲಾಗಿತ್ತು. ಆದರೆ ಸೆನ್ಸಾರ್ ಮಂಡಳಿ ಆ ಎರಡಕ್ಕೂ ಕತ್ತರಿ ಹಾಕಿದೆ. ಇಬ್ಬರು ಪೆದ್ದ ಯುವಕರ ಕತೆ 'ರಾಹು-ಕೇತು' ಆಗಿದ್ದು, ಸಿನಿಮಾನಲ್ಲಿ ಹಾಸ್ಯಕ್ಕಾಗಿ 'ಕಾಂತಾರ' ಸಿನಿಮಾದ ರೆಫೆರೆನ್ಸ್ ಅನ್ನು ಹಾಗೂ ದೈವದ ಕೂಗನ್ನು ಬಳಸಲಾಗಿತ್ತಂತೆ. ಆದರೆ ಅದರಿಂದ ಭಕ್ತರ ಭಾವನೆಗೆ ಧಕ್ಕೆ ಉಂಟಾಗುತ್ತದೆ ಎಂದು ಆ ದೃಶ್ಯವನ್ನು ತೆಗೆದಿದೆ. ರಿಷಬ್ ಶೆಟ್ಟಿ, ಹೊಂಬಾಳೆ ಫಿಲಮ್ಸ್ ಮತ್ತು 'ಕಾಂತಾರ' ಸಿನಿಮಾ ತಂಡಕ್ಕೆ ಸೇರಿದ ಹಲವರು ಹಲವು ಬಾರಿ ಈ ಬಗ್ಗೆ ಹೇಳಿದ್ದಾರೆ. ದೈವದ ಅನುಕರಣೆ ಮಾಡುವುದು, ದೈವವನ್ನು ಹಾಸ್ಯಕ್ಕೆ ಬಳಸಿಕೊಳ್ಳುವುದು ಬೇಡ ಎಂದು ಆದರೂ ಸಹ ಪದೇ ಪದೇ ಕೆಲವರು ಕಮರ್ಶಿಯಲ್ ಕಾರಣಗಳಿಗೆ, ಹಾಸ್ಯಕ್ಕೆ ದೈವದ ಅನುಕರಣೆ ಮಾಡುತ್ತಲೇ ಇದ್ದಾರೆ. ಇದೀಗ ಸೆನ್ಸಾರ್ ಮಂಡಳಿ ಸಮಯೋಚಿತವಾಗಿ ಬಾಲಿವುಡ್ ಸಿನಿಮಾದಿಂದ 'ಕಾಂತಾರ' ಸಿನಿಮಾದ ರೆಫೆರೆನ್ಸ್ ಅನ್ನು ತೆಗೆದು ಹಾಕಿದೆ.




# ಸಕ್ಸಸ್ ಮೀಟ್ ವೇದಿಕೆಯಲ್ಲಿ ಜಗಳ

**ನಿರೀಕ್ಷಿತ ಮಟ್ಟದಲ್ಲಿ ಪ್ರದರ್ಶನ ಕಾಣುತ್ತಿಲ್ಲ**

'ಪರಾಶಕ್ತಿ' ಸಿನಿಮಾ ಬಿಡುಗಡೆ ಆಗಿದ್ದು ಬಾಕ್ಸ್ ಆಫೀಸ್‌ನಲ್ಲಿ ನಿರೀಕ್ಷಿತ ಮಟ್ಟದ ಪ್ರದರ್ಶನ ಕಾಣುತ್ತಿಲ್ಲ. ಬಿಗಿಯಲ್ಲದ ಚಿತ್ರಕಥೆ ಸೇರಿದಂತೆ ವಿಜಯ್ ಅಭಿಮಾನಿಗಳ ವಿರೋಧ ಇನ್ನಿತರೆ ಕಾರಣಗಳಿಗಾಗಿ ಸಿನಿಮಾ ನಿರೀಕ್ಷಿತ ಮಟ್ಟದಲ್ಲಿ ಪ್ರದರ್ಶನ ಕಾಣುತ್ತಿಲ್ಲ. ಇದೀಗ ಸಿನಿಮಾದ ನಿರ್ದೇಶಕಿ ಮತ್ತು ನಾಯಕ ನಟ ಬಹಿರಂಗವಾಗಿಯೇ ಪರಸ್ಪರ ಆರೋಪಗಳನ್ನು ಮಾಡಿಕೊಂಡಿದ್ದು, ಚಿತ್ರತಂಡದಲ್ಲಿ ಎಲ್ಲವೂ ಸರಿಯಿಲ್ಲ ಎಂಬುದು ಜಗಜ್ಜಾಹೀರಾಗಿದೆ. ಭಾರಿ ನಿರೀಕ್ಷೆಯಿಂದ ಬಿಡುಗಡೆ ಆದ 'ಪರಾಶಕ್ತಿ' ಸಿನಿಮಾ ತಂಡದಲ್ಲಿ ಎಲ್ಲವೂ ಸರಿಯಿಲ್ಲ ಎಂಬುದು ಮತ್ತೆ ಸಾಬೀತಾಗಿದೆ. 'ಜನ ನಾಯಗನ್' ಸಿನಿಮಾದ ಎದುರು ಉದ್ದೇಶಪೂರ್ವಕವಾಗಿ ಸ್ಪರ್ಧೆಗೆ ಬಿದ್ದ 'ಪರಾಶಕ್ತಿ' ಸಿನಿಮಾ ಇದೇ ಕಾರಣಕ್ಕೆ ಹೆಚ್ಚು ಸುದ್ದಿಯಾಗಿತ್ತು. ಹಿಂದಿ ಹೇರಿಕೆ ವಿರುದ್ಧ ವಿಷಯವಿದ್ದ ಈ ಸಿನಿಮಾ ರಾಜಕೀಯ ಕಾರಣಗಳಿಗೂ ಕುತೂಹಲ ಹುಟ್ಟಿಸಿತ್ತು. 'ಪರಾಶಕ್ತಿ' ಸಿನಿಮಾ ತಮಿಳುನಾಡಿನ ಡಿಎಂಕೆ ಪಕ್ಷದ ಅಜೆಂಡ ಪ್ರಚಾರಕ್ಕಾಗಿ ಮಾಡಲಾದ ಸಿನಿಮಾ ಎಂಬ ಚರ್ಚೆ ಟ್ರೈಲರ್ ಬಿಡುಗಡೆ ಆದಾಗಿನಿಂದಲೂ ಇತ್ತು.

ಇದೀಗ 'ಪರಾಶಕ್ತಿ' ಸಿನಿಮಾ ಬಿಡುಗಡೆ ಆಗಿದ್ದು ಬಾಕ್ಸ್ ಆಫೀಸ್‌ನಲ್ಲಿ ನಿರೀಕ್ಷಿತ ಮಟ್ಟದ ಪ್ರದರ್ಶನ ಕಾಣುತ್ತಿಲ್ಲ. ಬಿಗಿಯಲ್ಲದ ಚಿತ್ರಕಥೆ ಸೇರಿದಂತೆ ವಿಜಯ್ ಅಭಿಮಾನಿಗಳ ವಿರೋಧ ಇನ್ನಿತರೆ ಕಾರಣಗಳಿಗಾಗಿ ಸಿನಿಮಾ ನಿರೀಕ್ಷಿತ ಮಟ್ಟದಲ್ಲಿ ಪ್ರದರ್ಶನ ಕಾಣುತ್ತಿಲ್ಲ. ಇದೀಗ ಸಿನಿಮಾದ ನಿರ್ದೇಶಕಿ ಮತ್ತು ನಾಯಕ ನಟ ಬಹಿರಂಗವಾಗಿಯೇ ಪರಸ್ಪರ ಆರೋಪಗಳನ್ನು ಮಾಡಿಕೊಂಡಿದ್ದು, ಚಿತ್ರತಂಡದಲ್ಲಿ ಎಲ್ಲವೂ ಸರಿಯಿಲ್ಲ ಎಂಬುದು ಜಗಜ್ಜಾಹೀರಾಗಿದೆ. 'ಪರಾಶಕ್ತಿ' ಸಿನಿಮಾವನ್ನು ಸುಧಾ ಕೊಂಗರ ನಿರ್ದೇಶನ ಮಾಡಿದ್ದು, ಶಿವಕಾರ್ತಿಕೇಯನ್ ನಾಯಕನಾಗಿ ನಟಿಸಿದ್ದಾರೆ. ಸಿನಿಮಾದ ನಾಯಕಿ ಶ್ರೀಲೀಲಾ. ನಿನ್ನೆಯಷ್ಟೆ ಸಿನಿಮಾದ ಸಕ್ಸಸ್ ಮೀಟ್ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.



# ಡಿಯರ್ ಹಸ್ಬೆಂಡ್ ಸಿನಿಮಾಗೆ ಕಿಚ್ಚ ಬೆಂಬಲ

**ಟೈಟಲ್ ಟೀಸರ್ ನೋಡಿ..**

ನಟ ಕಿಚ್ಚ ಸುದೀಪ್ ಅವರು 'ಡಿಯರ್ ಹಸ್ಬೆಂಡ್' ಸಿನಿಮಾ ತಂಡದ ಬೆನ್ನು ತಟ್ಟಿದ್ದಾರೆ. ಟೀಸರ್ ಬಿಡುಗಡೆ ಮಾಡಿದ್ದಾರೆ. ಈ ಸಿನಿಮಾದಲ್ಲಿ ಸೂರಜ್ ಗೌಡ, ಶರಣ್ಯಾ ಶೆಟ್ಟಿ ಮತ್ತು ಪ್ರವೀಣ್ ಅವರು ಪ್ರಮುಖ ಪಾತ್ರಗಳನ್ನು ಮಾಡುತ್ತಿದ್ದಾರೆ.

ಗುರುರಾಜ ಕುಲಕರ್ಣಿ ನಿರ್ದೇಶನ ಮಾಡುತ್ತಿರುವ 'ಡಿಯರ್ ಹಸ್ಬೆಂಡ್' ಸಿನಿಮಾಗೆ ಶೀಘ್ರದಲ್ಲೇ ಶೂಟಿಂಗ್ ಶುರು ಆಗಲಿದೆ. ಟೈಟಲ್ ಟೀಸರ್ ಮೂಲಕ 'ಡಿಯರ್ ಹಸ್ಬೆಂಡ್' ಸಿನಿಮಾ ಗಮನ ಸೆಳೆದಿದೆ. ಕಿಚ್ಚ ಸುದೀಪ್ ಅವರು ಇತ್ತೀಚೆಗೆ ಬೆಂಗಳೂರಿನ 'ಫಿನಿಕ್ಸ್ ಮಾಲ್ ಆಫ್ ಏಷ್ಯಾ'ದಲ್ಲಿ ಈ ಚಿತ್ರದ ಟೀಸರ್ ಬಿಡುಗಡೆ ಮಾಡಿದರು. 'ಜಿ9 ಕಮ್ಯುನಿಕೇಶನ್ ಆಂಡ್ ಮೀಡಿಯಾ' ಹಾಗೂ 'ನಿರಂತರ ಪ್ರೊಡಕ್ಷನ್ಸ್' ಮೂಲಕ ಈ ಸಿನಿಮಾ ನಿರ್ಮಾಣ ಆಗುತ್ತಿದೆ. ಗುರುರಾಜ ಕುಲಕರ್ಣಿ (ನಾಡಗೌಡ) ಅವರು ನಿರ್ದೇಶನದ ಜವಾಬ್ದಾರಿ ಹೊತ್ತಿದ್ದಾರೆ. ಇದೊಂದು ಸಸ್ಪೆನ್ಸ್ ಥ್ರಿಲ್ಲರ್ ಸಿನಿಮಾ. 'ಡಿಯರ್ ಹಸ್ಬೆಂಡ್' ಚಿತ್ರದಲ್ಲಿ ಸೂರಜ್ ಗೌಡ, ಶರಣ್ಯಾ ಶೆಟ್ಟಿ, ಪ್ರವೀಣ್ ಅವರು ನಟಿಸುತ್ತಿದ್ದಾರೆ. ಈ ವೇಳೆ ಕಿಚ್ಚ ಸುದೀಪ್ ಮಾತನಾಡಿದರು. 'ನಾವು ಚಿತ್ರರಂಗಕ್ಕೆ ಹೊಸಬರಾಗಿ ಬಂದಾಗ ಅನೇಕ ಹಿರಿಯರು ನಮಗೆ ಪ್ರೋತ್ಸಾಹಿಸಿ ಬೆನ್ನು ತಟ್ಟಿದ್ದರು. ಅದೇ ಕೆಲಸವನ್ನು ನಾವು ಈಗ ಹೊಸಬರಿಗೆ ಮಾಡುತ್ತಿದ್ದೇವೆ. ಅಂತಿಮವಾಗಿ ಕನ್ನಡ ಚಿತ್ರರಂಗ ಬೆಳೆಯಬೇಕು. ಇಡೀ ಚಿತ್ರತಂಡಕ್ಕೆ ಶುಭವಾಗಲಿ. ಹೊಸಬರ ತಂಡದ ಮೂಲಕ ಖಂಡಿತವಾಗಿಯೂ ಹೊಸ ರೀತಿಯ ಸಿನಿಮಾ ಬರಲಿದೆ' ಎಂದು ಹೇಳಿದರು.

ಟೈಟಲ್ ಟೀಸರ್ ಬಿಡುಗಡೆ ಸಮಾರಂಭದಲ್ಲಿ ಕಿಚ್ಚ ಸುದೀಪ್ ಅವರ ಜೊತೆ ಕುಮಾರ್ ಬಂಗಾರಪ್ಪ, ಪ್ರವೀಣ್ ತೇಜ್, ವಿ. ಹರಿಕೃಷ್ಣ, ಶಶಾಂಕ್, ಎ.ಪಿ. ಅರ್ಜುನ್, ವೈಶಾಕ್ ವಿಜಯಕುಮಾರ್, ರಿತೇಶ್ ಮುಂತಾದವರು ಆಗಮಿಸಿದ್ದರು. ಈ ಸಿನಿಮಾದ ಪ್ರೀ-ಪ್ರೊಡಕ್ಷನ್ ಕೆಲಸಗಳು ಪೂರ್ಣಗೊಂಡಿವೆ. ಇದೇ ತಿಂಗಳ ಅಂತ್ಯದಿಂದ ಶೂಟಿಂಗ್ ಆರಂಭವಾಗಲಿದೆ. ಬೆಂಗಳೂರು, ಗೋವಾ ಮತ್ತಿತರ ಕಡೆಗಳಲ್ಲಿ ಚಿತ್ರೀಕರಣ ಮಾಡಲಾಗುವುದು.

ಸಚಿನ್ ಬಸ್ರೂರು ಅವರು ಟೈಟಲ್ ಟೀಸರ್‌ಗೆ ಹಿನ್ನೆಲೆ ಸಂಗೀತ ನೀಡಿದ್ದಾರೆ. ಹಾಡುಗಳಿಗೆ ವೀರ್ ಸಮರ್ಥ್ ಸಂಗೀತ ಸಂಯೋಜಿಸುತ್ತಿದ್ದಾರೆ. ಪ್ರಮೋದ್ ಮರವಂತೆ ಅವರ ಗೀತರಚನೆ ಹಾಗೂ ರಘು ನಿಡುವಳ್ಳಿ ಅವರ ಸಂಭಾಷಣೆ ಈ ಚಿತ್ರಕ್ಕೆ ಇರಲಿದೆ. ಹರ್ಷ ಕುಮಾರ್ ಗೌಡ ಅವರು ಛಾಯಾಗ್ರಹಣ ಮಾಡುತ್ತಿದ್ದಾರೆ. ಬಿ.ಎಸ್. ಕೆಂಪರಾಜ್ ಅವರು ಸಂಕಲನದ ಜವಾಬ್ದಾರಿ ಹೊತ್ತಿದ್ದಾರೆ. ನಿರ್ಮಾಪಕ ಡಾ. ನಿರಂತರ ಗಣೇಶ್ ಅವರು 'ಐರಾವನ್' ಬಳಿಕ ನಿರ್ಮಾಣ ಮಾಡುತ್ತಿರುವ 2ನೇ ಸಿನಿಮಾ ಇದು. ಇಂದಿನ ಪ್ರೇಕ್ಷಕರಿಗೆ ಇಷ್ಟವಾಗುವಂತೆ ಸಿನಿಮಾ ಮೂಡಿಬರುತ್ತಿದೆ ಎಂದು ಅವರು ಹೇಳಿದರು. 'ನೋಡುಗರಿಗೆ ಈ ಸಿನಿಮಾ ಖಂಡಿತವಾಗಿಯೂ ಹೊಸಥರದ ಅನುಭವ ನೀಡಲಿದೆ' ಎಂದು ನಿರ್ದೇಶಕ ಗುರುರಾಜ ಕುಲಕರ್ಣಿ ಅವರು ಹೇಳಿದರು.



# 2ನೇ ಪಂದ್ಯದಲ್ಲೂ ವಿಕೆಟ್ ಗಿಫ್ಟ್ ಪವರ್ ಕಳೆದುಕೊಂಡ್ರಾ ಹಿಟ್‌ಮ್ಯಾನ್

ಆಸ್ಟ್ರೇಲಿಯಾ ಮತ್ತು ದಕ್ಷಿಣ ಆಫ್ರಿಕಾ ವಿರುದ್ಧ ಅಬ್ಬರಿಸಿದ್ದ ರೋಹಿತ್ ಶರ್ಮಾ, ನ್ಯೂಜಿಲೆಂಡ್ ವಿರುದ್ಧದ ಸರಣಿಯಲ್ಲಿ ವೈಫಲ್ಯ ಎದುರಿಸುತ್ತಿದ್ದಾರೆ. ಅವರ ಸ್ಫೋಟಕ ಆರಂಭದ ಆಟ ಮಾಯವಾಗಿ, ತಾಳ್ಮೆಯ ಆಟದ ಮೊರೆ ಹೋಗಿದ್ದಾರೆ. ಕಡಿಮೆ ಸ್ಟ್ರೈಕ್ ರೇಟ್, ಸುಲಭ ಎಸೆತಗಳಿಗೆ ವಿಕೆಟ್ ಒಪ್ಪಿಸುವುದು, ಮತ್ತು ಒತ್ತಡದಲ್ಲಿ ಆಡುತ್ತಿರುವುದು ತಂಡಕ್ಕೆ ಆಘಾತ ತಂದಿದೆ.

ಆಸ್ಟ್ರೇಲಿಯಾ ಪ್ರವಾಸದ ನಂತರ ದಕ್ಷಿಣ ಆಫ್ರಿಕಾ ವಿರುದ್ಧದ ತವರು ಸರಣಿಯಲ್ಲಿ ಆರಂಭಿಕನಾಗಿ ಅಬ್ಬರಿಸಿದ್ದ ರೋಹಿತ್ ಶರ್ಮಾ, ಕಿವೀಸ್ ವಿರುದ್ಧದ ಸರಣಿಯಲ್ಲಿ ಮಾತ್ರ ಎಡವಿದ್ದಾರೆ. ಇಷ್ಟು ದಿನ ಹೊಡಿಬಡಿ ಆಟದ ಮೂಲಕ ತಂಡಕ್ಕೆ ಸ್ಫೋಟಕ ಆರಂಭ ಒದಗಿಸಿಕೊಡುತ್ತಿದ್ದ ರೋಹಿತ್, ನ್ಯೂಜಿಲೆಂಡ್ ವಿರುದ್ಧ ಮಾತ್ರ ತಾಳ್ಮೆಯ ಆಟದ ಮೊರೆ ಹೋಗಿದ್ದಾರೆ. ಅಂತಿಮವಾಗಿ ಒತ್ತಡಕ್ಕೊಳಗಾಗಿ ವಿಕೆಟ್ ಕೈಚೆಲ್ಲುತ್ತಿದ್ದಾರೆ. ವಡೋದರಾದಲ್ಲಿ ನಡೆದ ಮೊದಲ ಏಕದಿನ ಪಂದ್ಯದಲ್ಲಿ 26 ರನ್‌ಗಳ ಇನ್ನಿಂಗ್ಸ್ ಆಡಿ ವಿಕೆಟ್ ಒಪ್ಪಿಸಿದ್ದ ರೋಹಿತ್, ಇದೀಗ ರಾಜ್‌ಕೋಟ್‌ನಲ್ಲಿ ನಡೆದ ಎರಡನೇ ಏಕದಿನ ಪಂದ್ಯದಲ್ಲೂ 24 ರನ್‌ಗಳಿಗೆ ತಮ್ಮ ಇನ್ನಿಂಗ್ಸ್ ಮುಗಿಸಿದ್ದಾರೆ. ಇಲ್ಲಿ ಗಮನಿಸಬೇಕಾದ ಸಂಗತಿಯೆಂದರೆ ರೋಹಿತ್ ಶರ್ಮಾ ಉತ್ತಮ ಆರಂಭ ಪಡೆದುಕೊಂಡ ಬಳಿಕ ವಿಕೆಟ್ ಕೈಚೆಲ್ಲುತ್ತಿದ್ದಾರೆ. ಅದರಲ್ಲೂ ಸಾಧಾರಣ ಎಸೆತಕ್ಕೆ ರೋಹಿತ್ ವಿಕೆಟ್ ಪತನವಾಗುತ್ತಿರುವುದು ತಂಡಕ್ಕೆ ಆಘಾತ ತಂದಿದೆ. ರೋಹಿತ್ ಶರ್ಮಾ ಮೈದಾನದಲ್ಲಿ ಸೆಟೆದು ನಿಂತರೆ ರನ್‌ಗಳ ಮಳೆ ಹೇಗೆ ಹರಿಯುತ್ತದೆ ಎಂಬುದನ್ನು ಹೊಸದಾಗಿ ಹೇಳಬೇಕಿಲ್ಲ. ಆದರೆ ವಡೋದರಾ ಮತ್ತು ರಾಜ್‌ಕೋಟ್‌ನಲ್ಲಿ ರೋಹಿತ್ ಬ್ಯಾಟಿಂಗ್ ಮಾಡಿದ ರೀತಿ ಎಲ್ಲರ ಅಚ್ಚರಿಗೆ ಕಾರಣವಾಯಿತು. ರಾಜ್‌ಕೋಟ್‌ನಲ್ಲಿ, ರೋಹಿತ್ 37 ಎಸೆತಗಳನ್ನು ಆಡಿ 24 ರನ್ ಗಳಿಸಿದ್ದರು. ಆದರೆ ಎದುರಿಸಿದ ಎಸೆತಗಳಿಗೂ ಗಳಿಸಿದ ರನ್‌ಗೂ ಅಂತರ ಹೆಚ್ಚಿದ್ದರಿಂದ ರನ್ ವೇಗ ಹೆಚ್ಚಿಸಲು ಪ್ರಯತ್ನಿಸಿದ ರೋಹಿತ್ ಮಿಡ್-ಆಫ್‌ನಲ್ಲಿ ಬೃಹತ್ ಸಿಕ್ಸರ್ ಹೊಡೆಯಲು ಪ್ರಯತ್ನಿಸಿದರು. ಆದರೆ ಚೆಂಡು ಸ್ವೀಪರ್ ಕವರ್‌ನಲ್ಲಿ ನಿಂತಿದ್ದ ವಿಲ್ ಯಂಗ್ ಅವರ ಕೈಸೇರಿತು.

ರೋಹಿತ್ ಸ್ವತಃ ತಮ್ಮ ಹೊಡೆತದಿಂದ ನಿರಾಶೆಗೊಂಡಂತೆ ಕಂಡುಬಂದರು. ಅವರ ಸ್ಟ್ರೈಕ್ ರೇಟ್ ಕೇವಲ 63.16 ಆಗಿದ್ದು, ವಿಮರ್ಶಕರಿಂದ ಟೀಕೆಗೆ ಕಾರಣವಾಯಿತು. ರೋಹಿತ್ ಶರ್ಮಾ ನಾಯಕನಾಗಿದ್ದಾಗ ಆಕ್ರಮಣಕಾರಿಯಾಗಿ ಬ್ಯಾಟಿಂಗ್ ಮಾಡುತ್ತಿದ್ದರು, ಆದರೆ ಈಗ ಅವರು ಮತ್ತೆ ನಿಧಾನವಾಗಿ ಆರಂಭಿಸುತ್ತಿದ್ದಾರೆ. ರಾಜ್‌ಕೋಟ್‌ನಲ್ಲಿ, ಅವರು 11 ನೇ ಎಸೆತದಲ್ಲಿ ತಮ್ಮ ಖಾತೆಯನ್ನು ತೆರೆದರು. ನಂತರ ನಾಲ್ಕು ಬೌಂಡರಿಗಳನ್ನು ಹೊಡೆಯುವ ಮೂಲಕ ತಮ್ಮ ಸ್ಟ್ರೈಕ್ ರೇಟ್ ಸುಧಾರಿಸಿಕೊಂಡರೂ, ಮತ್ತೆ ರನ್‌ಗಾಗಿ ಹೆಣಗಾಡಲಾರಂಭಿಸಿದರು.

ಇದರಿಂದ ಮತ್ತೆ ತಮ್ಮ ಸ್ಟ್ರೈಕ್ ರೇಟ್ ಸುಧಾರಿಸಲು ಪ್ರಯತ್ನಿಸಿದ ರೋಹಿತ್ ಶರ್ಮಾ ಸಾಧಾರಣ ಎಸೆತದಲ್ಲಿ ಸಿಕ್ಸರ್ ಬಾರಿಸುವ ಯತ್ನದಲ್ಲಿ ಕ್ಯಾಚ್ ನೀಡಿ ಔಟಾದರು. ರೋಹಿತ್ ತಮ್ಮ ಕೊನೆಯ ಮೂರು ಲಿಸ್ಟ್ ಎ ಪಂದ್ಯಗಳಲ್ಲಿ ವಿಫಲರಾಗಿದ್ದಾರೆ. ವಿಜಯ್ ಹಜಾರೆ ಟ್ರೋಫಿಯಲ್ಲಿ ಉತ್ತರಾಖಂಡ್ ವಿರುದ್ಧವೂ ರೋಹಿತ್‌ಗೆ ಖಾತೆ ತೆರೆಯಲು ಸಾಧ್ಯವಾಗಿರಲಿಲ್ಲ. ಈಗ ಅವರು ನ್ಯೂಜಿಲೆಂಡ್ ವಿರುದ್ಧ 26 ಮತ್ತು 24 ರನ್‌ಗಳಿಸಿ ಔಟಾಗಿದ್ದಾರೆ.




# ಪಾಕಿಸ್ತಾನದೊಂದಿಗೆ ಸಂಪರ್ಕ ಹೊಂದಿರುವ ಆಟಗಾರರಿಗೆ ವೀಸಾ ನಿರಾಕರಣೆ

ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆಯೋಜಿಸಲಿರುವ ಟಿ20 ವಿಶ್ವಕಪ್ 2026 ರಲ್ಲಿ ಒಟ್ಟು 20 ತಂಡಗಳು ಕಣಕ್ಕಿಳಿಯಲಿವೆ. ಈ ತಂಡಗಳಲ್ಲಿ ಕೆಲವು ಟೀಮ್‌ಗಳಲ್ಲಿ ಪಾಕಿಸ್ತಾನ್ ಮೂಲದ ಆಟಗಾರರು ಇರುವುದು ಇದೀಗ ಹೊಸ ಸಮಸ್ಯೆಗೆ ಕಾರಣವಾಗಿದೆ. ಅಂದರೆ ಪಾಕ್ ಮೂಲದ ಕ್ರಿಕೆಟಿಗರಿಗೆ ಭಾರತದ ವೀಸಾ ಪಡೆಯುವುದು ಸಮಸ್ಯೆಯಾಗಿ ಮಾರ್ಪಟ್ಟಿದೆ. ಬಹುನಿರೀಕ್ಷಿತ ಟಿ20 ವಿಶ್ವಕಪ್ ಫೆಬ್ರವರಿ 7 ರಿಂದ ಶುರುವಾಗಲಿದೆ.

ಭಾರತ ಮತ್ತು ಶ್ರೀಲಂಕಾ ಜಂಟಿಯಾಗಿ ಆಯೋಜಿಸಲಿರುವ ಈ ಬಾರಿಯ ವಿಶ್ವಕಪ್‌ನಲ್ಲಿ ಒಟ್ಟು 20 ತಂಡಗಳು ಭಾಗವಹಿಸಲಿದೆ. ಈ ತಂಡಗಳಲ್ಲಿ ಕೆಲ ಟೀಮ್‌ಗಳು ಈಗ ಸಂಕಷ್ಟಕ್ಕೆ ಸಿಲುಕಿವೆ. ಇದಕ್ಕೆ ಮುಖ್ಯ ಕಾರಣ ತಮ್ಮ ತಂಡಗಳಲ್ಲಿ ಪಾಕಿಸ್ತಾನ್ ಮೂಲದ ಆಟಗಾರರು ಇರುವುದು.

ಭಾರತದಲ್ಲಿ ನಡೆಯಲಿರುವ ಟಿ20 ಪಂದ್ಯಗಳಿಗೆ ಯುಎಸ್‌ಎ ಆಟಗಾರರು ವೀಸಾಗೆ ಅರ್ಜಿ ಸಲ್ಲಿಸಿದ್ದಾರೆ. ಇವರಲ್ಲಿ ನಾಲ್ವರು ಪಾಕಿಸ್ತಾನ್ ಮೂಲದ ಅಮರಿಕನ್ ಆಟಗಾರರಿಗೆ ವೀಸಾ ನಿರಾಕರಿಸಲಾಗಿದೆ ಎಂದು ವರದಿಯಾಗಿದೆ. ಅದರಲ್ಲೂ ಪಾಕಿಸ್ತಾನ್ ಮೂಲದ ಯುಎಸ್‌ಎ ವೇಗಿ ಅಲಿ ಖಾನ್ ಭಾರತಕ್ಕೆ ಪ್ರಯಾಣಿಸಲು ವೀಸಾ ನಿರಾಕರಿಸುವುದನ್ನು ಸೋಷಿಯಲ್ ಮೀಡಿಯಾ ಮೂಲಕ ಬಹಿರಂಗಪಡಿಸಿದ್ದಾರೆ.

**ಸಂಕಷ್ಟದಲ್ಲಿ 15 ಕ್ಕೂ ಹೆಚ್ಚು ಆಟಗಾರರು:**

ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಲಿರುವ ಹಲವು ತಂಡಗಳಲ್ಲಿ ಪಾಕಿಸ್ತಾನ್ ಮೂಲದ ಆಟಗಾರರಿದ್ದಾರೆ. ಅದರಲ್ಲೂ ಯುಎಇ ತಂಡದಲ್ಲಿರುವ ಬಹುತೇಕರು ಪಾಕಿಸ್ತಾನ್ ಮೂಲದವರು. ಯುಎಇ ತಂಡದ ನಾಯಕ ಮುಹಮ್ಮದ್ ವಾಸಿಮ್ ಸೇರಿದಂತೆ 7 ಆಟಗಾರರು ಪಾಕಿಸ್ತಾನದಲ್ಲಿ ಜನಿಸಿದವರು. ಹೀಗಾಗಿ ವೀಸಾ ನಿರಾಕರಣೆಯಿಂದ ಯುಎಇ ತಂಡವು ಹೆಚ್ಚಿನ ತೊಂದರೆಯನ್ನು ಎದುರಿಸಲಿದೆ. ಯುಎಇ ಜೊತೆಗೆ, ಇಂಗ್ಲೆಂಡ್, ಒಮಾನ್, ಇಟಲಿ, ಕೆನಡಾ, ಝಿಂಬಾಬ್ವೆ ಮತ್ತು ನೆದರ್‌ಲೆಂಡ್ಸ್ ತಂಡಗಳಲ್ಲೂ ಪಾಕಿಸ್ತಾನ್ ಮೂಲದ ಆಟಗಾರರಿದ್ದಾರೆ. ಅಂದರೆ 15 ಕ್ಕೂ ಹೆಚ್ಚು ಪಾಕಿಸ್ತಾನ್ ಮೂಲದ ಆಟಗಾರರು ಭಾರತಕ್ಕೆ ವೀಸಾ ಪಡೆಯುವಲ್ಲಿ ತೊಂದರೆಗಳನ್ನು ಎದುರಿಸಬೇಕಾಗುತ್ತದೆ. ಪರಿಣಾಮ, ಪಂದ್ಯಾವಳಿಯಲ್ಲಿ ಅವರ ಭಾಗವಹಿಸುವಿಕೆ ಅನಿಶ್ಚಿತವಾಗಿದೆ.

ಭಾರತದ ವೀಸಾ ಕಾನೂನುಗಳಿಂದಾಗಿ ಬೆದರಿಕೆಗಳನ್ನು ಎದುರಿಸುತ್ತಿರುವ ಕ್ರಿಕೆಟ್ ಮಂಡಳಿಗಳು ಇದೀಗ ಐಸಿಸಿಯ ಸಹಾಯವನ್ನು ಕೋರಿವೆ. ಈ ಎಲ್ಲಾ ತಂಡಗಳ ಆಟಗಾರರಿಗೆ ವೀಸಾ ಅರ್ಜಿಗಳನ್ನು ಸಲ್ಲಿಸಲಾಗಿದೆ ಎಂದು ಮೂಲಗಳು ಸೂಚಿಸುತ್ತವೆ. ಆದರೆ ಉನ್ನತ ಮಟ್ಟದ ಹಸ್ತಕ್ಷೇಪವಿಲ್ಲದೆ ಸಕಾಲಿಕ ಅನುಮೋದನೆ ಅಸಂಭವವಾಗಿದೆ.

ಸಕಾಲಿಕ ಪರಿಹಾರವನ್ನು ಕಂಡುಕೊಳ್ಳದಿದ್ದರೆ, ಹಲವಾರು ಪ್ರಮುಖ ಆಟಗಾರರು ಟಿ20 ವಿಶ್ವಕಪ್‌ನಲ್ಲಿ ಭಾಗವಹಿಸಲು ಸಾಧ್ಯವಾಗುವುದಿಲ್ಲ. ಇದು ಪಂದ್ಯಾವಳಿಯ ಗುಣಮಟ್ಟದ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಸರಳವಾಗಿ ಹೇಳುವುದಾದರೆ, ಭಾರತದ ವೀಸಾ ಕಾನೂನು ಇದೀಗ ಐಸಿಸಿಗೆ ದೊಡ್ಡ ಸಮಸ್ಯೆಯಾಗಿ ಪರಿಣಮಿಸಿದ್ದು, ಈ ಸಮಸ್ಯೆಯನ್ನು ತ್ವರಿತವಾಗಿ ಪರಿಹರಿಸುವುದು ಕೂಡ ಅನಿವಾರ್ಯವಾಗಿದೆ.


# ಏಕದಿನ ಕ್ರಿಕೆಟ್‌ಗೆ ಕಿಂಗ್ ಕೊಹ್ಲಿ ಸಾಮ್ರಾಟ

ವಿರಾಟ್ ಕೊಹ್ಲಿ ಐಸಿಸಿ ಏಕದಿನ ಬ್ಯಾಟ್ಸ್‌ಮನ್ ಶ್ರೇಯಾಂಕದಲ್ಲಿ ನಂಬರ್ ಒನ್ ಸ್ಥಾನವನ್ನು ಮತ್ತೆ ಅಲಂಕರಿಸಿದ್ದಾರೆ. 1736 ದಿನಗಳ ಸುದೀರ್ಘ ಕಾಯುವಿಕೆಯ ನಂತರ ಈ ಅಗ್ರಸ್ಥಾನವನ್ನು ಮರಳಿ ಪಡೆದಿರುವ ಕೊಹ್ಲಿ, ರೋಹಿತ್ ಶರ್ಮಾ ಅವರನ್ನು ಮೂರನೇ ಸ್ಥಾನಕ್ಕೆ ತಳ್ಳಿದ್ದಾರೆ. ಡ್ಯಾರಿಲ್ ಮಿಚೆಲ್ ಕೇವಲ ಒಂದು ರೇಟಿಂಗ್ ಪಾಯಿಂಟ್ ಹಿಂದೆ ಇದ್ದು, ಕೊಹ್ಲಿಗೆ ಸ್ಥಾನ ಉಳಿಸಿಕೊಳ್ಳುವುದು ಸವಾಲಾಗಿದೆ. ಮುಂಬರುವ ಪಂದ್ಯಗಳ ಪ್ರದರ್ಶನ ಅವರ ಸ್ಥಾನವನ್ನು ನಿರ್ಧರಿಸಲಿದೆ.

ಏಕದಿನ ಕ್ರಿಕೆಟ್‌ನಲ್ಲಿ ರನ್ ಮಳೆ ಹರಿಸುತ್ತಿರುವ ಟೀಂ ಇಂಡಿಯಾ ಮಾಜಿ ನಾಯಕ ವಿರಾಟ್ ಕೊಹ್ಲಿಗೆ ಇದೀಗ ಐಸಿಸಿಯಿಂದಲೂ ಭರ್ಜರಿ ಉಡುಗೊರೆ ಸಿಕ್ಕಿದೆ. ಕಳೆದ ಐದು ಇನ್ನಿಂಗ್ಸ್‌ಗಳಲ್ಲಿಯೂ 50 ಪ್ಲಸ್ ಇನ್ನಿಂಗ್ಸ್ ಆಡಿರುವ ಕೊಹ್ಲಿ ಇದೀಗ ಏಕದಿನ ಬ್ಯಾಟ್ಸ್‌ಮನ್ ರ್‍ಯಾಂಕಿಂಗ್‌ನಲ್ಲಿ ಅಗ್ರಸ್ಥಾನಕ್ಕೇರಿದ್ದಾರೆ.

ಐಸಿಸಿ ಬುಧವಾರ ಬಿಡುಗಡೆ ಮಾಡಿರುವ ಇತ್ತೀಚಿನ ಏಕದಿನ ಶ್ರೇಯಾಂಕದಲ್ಲಿ ಅತ್ಯುತ್ತಮ ಫಾರ್ಮ್‌ನಲ್ಲಿರುವ ವಿರಾಟ್ ಕೊಹ್ಲಿ ನಂಬರ್ ಒನ್ ಸ್ಥಾನವನ್ನು ಅಲಂಕರಿಸಿದ್ದಾರೆ. ಇದು ಖುಷಿಯ ವಿಚಾರವಾದರೆ ಇದರ ಜೊತೆಗೆ ಮತ್ತೊಂದು ಕಹಿಯ ವಿಚಾರವಿದ್ದು, ಇಷ್ಟು ದಿನ ಈ ಮಾದರಿಯಲ್ಲಿ ಅಗ್ರಸ್ಥಾನದಲ್ಲಿದ್ದ ರೋಹಿತ್ ಶರ್ಮಾ ಇದೀಗ ಮೂರನೇ ಸ್ಥಾನಕ್ಕೆ ಕುಸಿದಿದ್ದಾರೆ. ವಿರಾಟ್ ಕೊಹ್ಲಿ 4 ವರ್ಷ 9 ತಿಂಗಳ ನಂತರ ಮತ್ತೊಮ್ಮೆ ಏಕದಿನ ಕ್ರಿಕೆಟ್‌ನಲ್ಲಿ ನಂಬರ್ ಒನ್ ಬ್ಯಾಟ್ಸ್‌ಮನ್ ಆಗಿದ್ದಾರೆ. ಅಂದರೆ 1736 ದಿನಗಳ ದೀರ್ಘ ಕಾಯುವಿಕೆಯ ನಂತರ ಏಕದಿನ ಶ್ರೇಯಾಂಕದಲ್ಲಿ ಕೊಹ್ಲಿ ಅಗ್ರಸ್ಥಾನವನ್ನು ಅಲಂಕರಿಸಿದ್ದಾರೆ. ಇದಕ್ಕೂ ಮೊದಲು, ವಿರಾಟ್ ಕೊಹ್ಲಿ ಏಪ್ರಿಲ್ 13, 2021 ರವರೆಗೆ ಏಕದಿನ ಶ್ರೇಯಾಂಕದಲ್ಲಿ ನಂಬರ್ ಒನ್ ಸ್ಥಾನವನ್ನು ಅಲಂಕರಿಸಿದ್ದರು. ಆದರೆ ಏಪ್ರಿಲ್ 14 ರಂದು ಪಾಕಿಸ್ತಾನದ ಮಾಜಿ ನಾಯಕ ಬಾಬರ್ ಆಝಂ ನಂಬರ್ ಸ್ಥಾನಕ್ಕೇರುವ ಮೂಲಕ ವಿರಾಟ್ ಕೊಹ್ಲಿಯನ್ನು ಆ ಸ್ಥಾನದಿಂದ ಕೆಳಗಿಳಿಸಿದ್ದರು. ಆದರೀಗ ಕಳೆದ ದಕ್ಷಿಣ ಆಫ್ರಿಕಾ ವಿರುದ್ಧದ ಏಕದಿನ ಸರಣಿಯಲ್ಲಿ ಎರಡು ಶತಕ ಮತ್ತು ಅರ್ಧಶತಕ ಬಾರಿಸಿದ್ದ ವಿರಾಟ್, ನ್ಯೂಜಿಲೆಂಡ್ ವಿರುದ್ಧದ ಮೊದಲ ಏಕದಿನದಲ್ಲಿ 93 ರನ್ ಬಾರಿಸಿದ್ದರು.

ಈ ಪ್ರದರ್ಶನ ಅವರನ್ನು ನಂಬರ್ 1 ಸ್ಥಾನಕ್ಕೇರಿಸಿದೆ. ಐಸಿಸಿ ಏಕದಿನ ಶ್ರೇಯಾಂಕದಲ್ಲಿ ವಿರಾಟ್ ಕೊಹ್ಲಿ 785 ರೇಟಿಂಗ್ ಅಂಕಗಳೊಂದಿಗೆ ಮೊದಲ ಸ್ಥಾನದಲ್ಲಿದ್ದರೆ, ನ್ಯೂಜಿಲೆಂಡ್ ಬ್ಯಾಟ್ಸ್‌ಮನ್ ಡ್ಯಾರಿಲ್ ಮಿಚೆಲ್ 784 ರೇಟಿಂಗ್ ಅಂಕಗಳೊಂದಿಗೆ ಎರಡನೇ ಸ್ಥಾನವನ್ನು ಅಲಂಕರಿಸಿದ್ದಾರೆ. ಇತ್ತ ರೋಹಿತ್ ಶರ್ಮಾ 775 ರೇಟಿಂಗ್ ಅಂಕಗಳೊಂದಿಗೆ ಮೂರನೇ ಸ್ಥಾನಕ್ಕೆ ಕುಸಿದಿದ್ದಾರೆ. ಶುಭಮನ್ ಗಿಲ್ ಐದನೇ ಸ್ಥಾನದಲ್ಲಿದ್ದರೆ, ಶ್ರೇಯಸ್ ಅಯ್ಯರ್ 10 ನೇ ಸ್ಥಾನದಲ್ಲಿದ್ದಾರೆ.



# ಮಿಂಚಿದ ಮಿಚೆಲ್! ಸರಣಿ ಸಮಬಲ



**2ನೇ ಏಕದಿನ ಪಂದ್ಯ ಗೆದ್ದ ಕಿವೀಸ್**

ಭಾರತ ಮತ್ತು ನ್ಯೂಜಿಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ಎರಡನೇ ಪಂದ್ಯದಲ್ಲಿ ಪ್ರವಾಸಿ ನ್ಯೂಜಿಲ್ಯಾಂಡ್ ತಂಡ 7 ವಿಕೆಟ್‌ಗಳ ಸುಲಭ ಗೆಲುವು ಸಾಧಿಸಿದೆ. ರಾಜ್‌ಕೋಟ್‌ನ ನಿರಂಜನ್ ಶಾ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಭಾರತ ನಿಗದಿತ 50 ಓವರ್‌ಗಳಲ್ಲಿ ಏಳು ವಿಕೆಟ್‌ಗಳಿಗೆ 284 ರನ್ ಗಳಿಸಿತು. ಭಾರತ ನೀಡಿದ್ದ 285 ರನ್‌ಗಳ ಗುರಿಯನ್ನು ಕಿವೀಸ್ ಪಡೆ ಕೇವಲ 3 ವಿಕೆಟ್ ಕಳೆದುಕೊಂಡು ತಲುಪಿತು. ಗೋಲ್ಡನ್ ಫಾರ್ಮ್‌ನಲ್ಲಿರುವ ಡ್ಯಾರಿಲ್ ಮಿಚೆಲ್ ಶತಕ ಸಿಡಿಸಿ ಗೆಲುವಿನ ರೂವಾರಿಯಾದರು. ಈ ಪಂದ್ಯದೊಂದಿಗೆ 3 ಪಂದ್ಯಗಳ ಸರಣಿಯಲ್ಲಿ 2 ತಂಡಗಳು ತಲಾ ಒಂದೊಂದು ಗೆಲುವು ಸಾಧಿಸಿದ್ದು, ಭಾನುವಾರ ನಡೆಯಲಿರುವ 3ನೇ ಪಂದ್ಯವನ್ನ ಮತ್ತಷ್ಟು ರೋಚಕವಾಗಿರಿಸಿದೆ.

285 ರನ್‌ಗಳ ಗುರಿಯನ್ನ ಬೆನ್ನಟ್ಟಿದ ನ್ಯೂಜಿಲ್ಯಾಂಡ್ ನಿಧಾನಗತಿ ಆರಂಭ ಪಡೆದುಕೊಂಡಿತು. ಕೇವಲ 22 ರನ್‌ಗಳಿಗೆ ತನ್ನ ಮೊದಲ ವಿಕೆಟ್ ಕಳೆದುಕೊಂಡಿತು. ಡಿವೋನ್ ಕಾನ್ವೆ 21 ಎಸೆತಗಳಲ್ಲಿ 16 ರನ್‌ಗಳಿಸಿ ಹರ್ಷಿತ್ ರಾಣಾ ಬೌಲಿಂಗ್‌ನಲ್ಲಿ ಬೌಲ್ಡ್ ಆದರು. ಮತ್ತೊಬ್ಬ ಆರಂಭಿಕ ಹೆನ್ರಿ ನಿಕೋಲ್ಸ್ ಕೂಡ ಕೇವಲ 10 ರನ್‌ಗಳಿಸಿ ಪ್ರಸಿದ್ಧ್ ಕೃಷ್ಣಾಗೆ ವಿಕೆಟ್ ಒಪ್ಪಿಸಿದರು.

ಆದರೆ 3ನೇ ವಿಕೆಟ್‌ಗೆ ಒಂದಾದ ವಿಲ್ ಯಂಗ್ ಹಾಗೂ ಡ್ಯಾರಿಲ್ ಮಿಚೆಲ್ ನಿಧಾನವಾಗಿ ಇನ್ನಿಂಗ್ಸ್ ಕಟ್ಟುತ್ತಾ ಭಾರತದಿಂದ ಗೆಲುವನ್ನ ಕಸಿದುಕೊಂಡರು. ಈ ಜೋಡಿ 3ನೇ ವಿಕೆಟ್‌ಗೆ 162 ರನ್‌ಗಳ ಮ್ಯಾಚ್ ವಿನ್ನಿಂಗ್ ಜೊತೆಯಾಟ ನೀಡಿದರು. ಯಂಗ್ 98 ಎಸೆತಗಳಲ್ಲಿ 7 ಬೌಂಡರಿಗಳ ಸಹಿತ 87 ರನ್‌ಗಳಿಸಿದರು. ನಂತರ 5ನೇ ಕ್ರಮಾಂಕದಲ್ಲಿ ಬಂದ ಗ್ಲೆನ್ ಫಿಲಿಪ್ಸ್ ಮಿಚೆಲ್ ಜೊತೆಗೂಡಿ 4ನೇ ವಿಕೆಟ್ ಜೊತೆಯಾಟದಲ್ಲಿ ಅಜೇಯ 78 ರನ್‌ಗಳ ಜೊತೆಯಾಟ ನಡೆಸಿ ತಂಡವನ್ನ ಗೆಲುವಿನ ಗಡಿ ದಾಟಿಸಿದರು. ಫಿಲಿಫ್ಸ್ 25 ಎಸೆತಗಳಲ್ಲಿ 2 ಬೌಂಡರಿ, 1 ಸಿಕ್ಸರ್ ಸಹಿತ ಅಜೇಯ 32 ರನ್‌ಗಳಿಸಿದರು.

ಕಳೆದ ಪಂದ್ಯದಲ್ಲಿ 84 ರನ್ ಸಿಡಿಸಿದ್ದ ಮಿಚೆಲ್ ಈ ಪಂದ್ಯದಲ್ಲೂ ಅದೇ ಫಾರ್ಮ್ ಮುಂದುವರಿಸಿ ಅಜೇಯ ಶತಕ ಸಿಡಿಸಿದರು. 117 ಎಸೆತಗಳನ್ನೆದುರಿಸಿದ ಮಿಚೆಲ್ 11 ಬೌಂಡರಿ, 2 ಸಿಕ್ಸರ್‌ಗಳ ಸಹಿತ ಅಜೇಯ 131 ರನ್ ಗಳಿಸಿದರು. ಇದು ಈ ಮೈದಾನದಲ್ಲಿ ದಾಖಲಾದ ಅತಿ ಗರಿಷ್ಠ ವೈಯಕ್ತಿಕ ಸ್ಕೋರ್ ಆಗಿದೆ. ಇದಕ್ಕೂ ಮುನ್ನ ಈ ದಾಖಲೆ ಇದೇ ಪಂದ್ಯದಲ್ಲಿ ಶತಕ ಸಿಡಿಸಿದ್ದ ಕನ್ನಡಿಗ ಕೆಎಲ್ ರಾಹುಲ್ ಹೆಸರಿನಲ್ಲಿತ್ತು.

ರಾಹುಲ್ 112 ರನ್‌ಗಳಿಸಿದ್ದರು. ಭಾರತದ ಬೌಲಿಂಗ್ ಇಂದು ತೀರಾ ಸಪ್ಪೆಯಾಗಿತ್ತು. ರನ್‌ಗಳಿಗೆ ಕಡಿವಾಣ ಹಾಕಿದರೇ ಹೊರತು ವಿಕೆಟ್ ಪಡೆಯುವಲ್ಲಿ ಕಿವೀಸ್ ಪಡೆಗೆ ಯಾವುದೇ ಒತ್ತಡ ಏರುವಲ್ಲಿ ವಿಫಲರಾದರು. ಹರ್ಷಿತ್ ರಾಣಾ 52 ರನ್ ನೀಡಿ 1 ವಿಕೆಟ್, ಪ್ರಸಿದ್ಧ್ ಕೃಷ್ಣ 49 ರನ್ ನೀಡಿ 1 ವಿಕೆಟ್ ಹಾಗೂ ಕುಲ್ದೀಪ್ ಯಾದವ್ 82 ರನ್ ನೀಡಿ 1 ವಿಕೆಟ್ ಪಡೆದರು. ಕಳೆದ ಪಂದ್ಯದಂತೆ ಇಂದೂ ಕೂಡ ಸ್ಪಿನ್ನರ್‌ಗಳು ದುಬಾರಿಯಾದರು. ಜಡೇಜಾ 8 ಓವರ್‌ಗಳಲ್ಲಿ 44 ರನ್ ನೀಡಿ ವಿಕೆಟ್ ಪಡೆಯುವಲ್ಲಿ ವಿಫಲರಾದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA,
No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966